22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 84 | ನವದೆಹಲಿ | ಬೆಲೆ ₹ 10 | ಸೆಪ್ಟೆಂಬರ್ 24 2024 ಮಂಗಳವಾರ

## ಒಳಪುಟಗಳಲ್ಲಿ

ಮಕ್ಕಳ ಅಶ್ಲೀಲ ಚಿತ್ರಗಳ ಡೌನ್ಲೋಡ್ ಸಂಗ್ರಹ, ವೀಕ್ಷಣೆ ಅಪರಾಧ: ಸುಪ್ರೀಂ ಕೋರ್ಟ್ - ಪು.4

ನೆರೆಯ ರಾಜ್ಯಗಳು ಒಡ್ಡುತ್ತಿರುವ ಸವಾಲಿನ ನಡುವೆಯೂ ಬಂಡವಾಳ ಹೂಡಿಕೆಯಲ್ಲಿ ಕರ್ನಾಟಕ ಮುಂಚೂಣಿ - ಪು.5

ಸಂವಿಧಾನ ಬದಲಾವಣೆ ಮಾಡುತ್ತೇನೆಂದದ್ದು ಇಂದಿರಾ: ಸೂಲಿಬೆಲೆ - ಪು.6

## 10ನೇ ಕಾಮನ್ವೆಲ್ತ್ ಸಂಸದೀಯ ಸಂಘ ಸಮ್ಮೇಳನದಲ್ಲಿ ಬಸವರಾಜ ಹೊರಟ್ಟಿ ಮತ್ತು ಯು.ಟಿ.ಖಾದರ್ ಭಾಗಿ

# ಶಾಸನಸಭೆಗಳಿಗೆ ಆರ್ಥಿಕ ಸ್ವಾಯತ್ತತೆ ನೀಡಿಕೆ– ಕನಿಷ್ಠ 60 ದಿನಗಳ ಅಧಿವೇಶನ ಕಡ್ಡಾಯಕ್ಕೆ ಸಭಾಪತಿ ಹೊರಟ್ಟಿ ಆಗ್ರಹ

### ಬಸವರಾಜ ಹೊರಟ್ಟಿ ಬಾಷಣ

**ನವದೆಹಲಿ ಸೆ.23:** ಶಾಸನ ಸಭೆಗಳ ಸ್ವತಂತ್ರ ನಿರ್ವಹಣೆ ಹಾಗೂ ಪಕ್ಷಾತೀತ ಕಾರ್ಯನಿರ್ವಹಣೆ ದೃಷ್ಟಿಯಿಂದ ಅವುಗಳಿಗೆ ಆರ್ಥಿಕ ಸ್ವಾಯತ್ತತೆ ನೀಡುವುದು ಅಗತ್ಯವಾಗಿದ್ದು, ಆ ನಿಟ್ಟಿನಲ್ಲಿ ಸೂಕ್ತ ಕಾನೂನಗಳಡಿ ಕಟ್ಟುನಿಟ್ಟಿನ ಕ್ರಮ ಅವಶ್ಯಕವಾಗಿದೆಂದು ಕರ್ನಾಟಕ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಹೊರಟ್ಟಿ ಮನವಿ ಮಾಡಿದರು.

ಶಾಸನ ಸಭೆಗಳ ಸಚಿವಾಲಯಕ್ಕೆ ಆರ್ಥಿಕ ಸ್ವಾಯತ್ತತೆ ಮತ್ತು ಸ್ವಾಯತ್ತ ಸ್ಥಾನ–ಮಾನ ನೀಡುವ ಕುರಿತು ಕಾನೂನು ಮೂಲಕ ಸೂಕ್ತ ನಿರ್ಧಾರ ಕೈಗೊಂಡು ಸದನಗಳ ಗೌರವ, ಘನತೆ ಹಾಗೂ ಪ್ರಾಮುಖ್ಯತೆ ಹೆಚ್ಚಿಸಬೇಕು. ಈ ನಿಟ್ಟಿನಲ್ಲಿ ಲೋಕ ಸಭಾಧ್ಯಕ್ಷರು ಕ್ರಮ ಕೈಗೊಳ್ಳುವಂತೆ ಬಸವರಾಜ ಹೊರಟ್ಟಿ ಮನವಿ ಮಾಡಿದರು. ಪ್ರತಿಯೊಂದು ಆರ್ಥಿಕ ಸಂಪನ್ಮೂಲಕ್ಕೂ ಸರಕಾರಗಳನ್ನು ಹಾಗೂ ಆರ್ಥಿಕ ಇಲಾಖೆ ಅಧಿಕಾರಿಗಳ ಮೊರೆ ಹೋಗುವುದು ಸೂಕ್ತವಾದುದಲ್ಲ, ಹಾಗೂ ಈ ಪ್ರಕ್ರಿಯೆಯಿಂದ ಆರ್ಥಿಕ ಅನುದಾನ ಪಡೆಯಲು ಅತಿಹೆಚ್ಚಿನ ಸಮಯ ಹಾಗೂ ಶ್ರಮದ ಅವಶ್ಯಕತೆಯಿದ್ದು ಅಲ್ಲದೇ ಇದರಿಂದ ಶಾಸನ ಸಭೆಗಳ ಸ್ವಾಯತ್ತತೆಗೆ ಅಡ್ಡಿ ಉಂಟಾಗುತ್ತಿದೆ ಎಂದು ವಿವರಿಸಿದರು. ಶಾಸನಸಭೆ ಅಧಿವೇಶನಗಳ ಕುರಿತು ಪ್ರಸ್ತಾಪಿಸಿದ ಬಸವರಾಜ ಹೊರಟ್ಟಿ, ವಾರ್ಷಿಕವಾಗಿ ಕನಿಷ್ಠ 60 ದಿನಗಳ ಕಾಲ ಅಧಿವೇಶನ ನಡೆಸುವುದನ್ನು ಕಡ್ಡಾಯಗೊಳಿಸಬೇಕು. ಶಾಸನಸಭೆಗಳು ಜನಸಾಮಾನ್ಯರ ದೈನಂದಿನ ಬದುಕಿನ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸುವ ಸೂಕ್ತವೇದಿಕೆಯಾಗಿವೆ ಆದ್ದರಿಂದ ಪ್ರತಿವರ್ಷವೂ ಶಾಸನಸಭೆಗಳು ಕನಿಷ್ಠ 60 ದಿನಗಳ ಕಾಲ ಅಧಿವೇಶನ ನಡೆಸಿ ಪ್ರಜಾಪ್ರಭುತ್ವದ ಸಾರ್ಥಕತೆಗೆ ಮುಂದಾಗುವಲ್ಲಿ ಲೋಕಸಭೆ ಹಾಗೂ ರಾಜ್ಯಸಭೆಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು. ಲೋಕ ಸಭಾಧ್ಯಕ್ಷ ಓಂ ಬಿರ್ಲಾ, ರಾಜ್ಯಸಭೆಯ ಉಪಸಭಾಪತಿ ಹರಿವಂಶ್ ನಾರಾಯಣ ಸಿಂಗ್, ಕರ್ನಾಟಕ ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್, ಕರ್ನಾಟಕದ ಉಭಯ ಸದನದ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮೀ, ವಿಶಾಲಾಕ್ಷಿ, ಸೇರಿದಂತೆ, ವಿವಿಧ ರಾಜ್ಯಗಳ ವಿಧಾನ ಸಭಾಧ್ಯಕ್ಷರು ಹಾಗೂ ಸಭಾಪತಿಗಳು ಸಮ್ಮೇಳನದಲ್ಲಿ ಪಾಲ್ಗೊಂಡಿದ್ದಾರೆ..





10ನೇ ಕಾಮನ್ವೆಲ್ತ್ ಸಂಸದೀಯ ಸಂಘ ಸಮ್ಮೇಳನದಲ್ಲಿ ಭಾಗವಹಿಸಿದ್ದ ಸದಸ್ಯರ ಸಮೂಹ ಛಾಯಾಚಿತ್ರ

### ಯು.ಟಿ.ಖಾದರ್ ಭಾಷಣ

ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ 10ನೇ ಕಾಮನ್ವೆಲ್ತ್ ಸಂಸದೀಯ ಸಂಘ ಭಾರತ ವಲಯದ ಸಮ್ಮೇಳನ ದಲ್ಲಿ ಭಾಗವಹಿಸಿ the role of legislative bodies in the attainment of sustainable and inclusive development ಎಂಬ ವಿಷಯದ ಬಗ್ಗೆ ತಮ್ಮ ನಿಲುವನ್ನು ಮಂಡಿಸಿದರು. ಇತ್ತೀಚಿನ ಜಾಗತಿಕ ಅಂಕಿಅಂಶಗಳ ಪ್ರಕಾರ, ಭಾರತವು ಸುಮಾರು 356 ಮಿಲಿಯನ್ ಯುವಕರನ್ನು ಹೊಂದಿದ್ದು, ದೇಶವನ್ನು "ಯಂಗ್ ಇಂಡಿಯಾ" ಎಂದು ಕರೆಯಲಾಗುತ್ತಿದೆ. ಸಮಸ್ಯೆ ಆಧಾರಿತ ಚರ್ಚೆ ಮತ್ತು ವಾದಗಳು ಮಂಡನೆಯಾಗಬೇಕು. ಸಂಸತ್ತು ಮತ್ತು ರಾಜ್ಯಗಳಲ್ಲಿರುವ ವಿಧಾನಸಭೆ ಹಾಗೂ ವಿಧಾನ ಪರಿಷತ್‌ನ ಕಾರ್ಯ ಚಟುವಟಿಕೆಗಳ ಬಗ್ಗೆ ಯುವಜನರು ಅರ್ಥಮಾಡಿಕೊಳ್ಳುವುದು ಅತ್ಯಗತ್ಯವಾಗಿದ್ದು, ಇಂಡಿಯನ್ ಯುವ ಸಂಸತ್ ಇವುಗಳನ್ನು ಅರಿಯುವ ಉತ್ತಮ ಮತ್ತು ಮಾದರಿ ವೇದಿಕೆಯಾಗಬೇಕು ಎಂದು ಖಾದರ್ ಪ್ರತಿಪಾದಿಸಿದರು.

## ಬೆಂಗಳೂರಿಗೆ ಕನಿಷ್ಠ 10 ವರ್ಷ ಕುಡಿಯುವ ನೀರಿನ ಸಮಸ್ಯೆ ಇಲ್ಲ: ಡಿಸಿಎಂ



**ರಾಮನಗರ, ಸೆ. 23–** ಕುಡಿಯುವ ನೀರಿಗಾಗಿ ಕಾವೇರಿ ನದಿ ನೀರಿನ 5ನೇ ಹಂತದ ಯೋಜನೆಯನ್ನು ರಾಜ್ಯ ಸರ್ಕಾರವೇ ಈ ಹಿಂದೆ ಪ್ರಾರಂಭ ಮಾಡಿದ್ದು, ಮೂರು ಭಾಗದವರಿಗೂ ನೀರು ಪೂರೈಸಲು ಈ ಕಾರ್ಯಕ್ರಮವನ್ನು ರೂಪಿಸಿತ್ತು, ಬಂದೆರಗಿದ ಸಮಸ್ಯೆಗಳನ್ನು ಹಂತಹಂತವಾಗಿ ಬಗೆಹರಿಸಿ ವಿಜಯದಶಮಿಯಂದು ಈ ಯೋಜನೆಯ ಉದ್ಘಾಟನೆ ಮಾಡಲು ಕ್ರಮವಹಿಸಲಾಗಿದೆ ಎಂದು ರಾಜ್ಯದ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ಅವರು ಸೆ.23ರ ಸೋಮವಾರ ಹಾರೋಹಳ್ಳಿಯ 5ನೇ ಹಂತದ ಜಲರೇಚಕ ಯಂತ್ರಾಗಾರದ ಪರಿವೀಕ್ಷಣೆ ನಡೆಸಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು. ಇದರಿಂದ ಮುಂದೆ ಯಾವುದೇ ಸಮಸ್ಯೆಯುಂಟಾಗದಂತೆ ಉದ್ಘಾಟನೆಗೂ ಮುನ್ನ ಕಾಮಗಾರಿ ವೀಕ್ಷಣೆಗೆ ಆಗಮಿಸಲಾಗಿದೆ. ಇಡೀ ಬೆಂಗಳೂರಿಗೆ 1400 ಎಂ.ಎಲ್.ಡಿ ನೀರನ್ನು ಈಗಾಗಲೆ ಪೂರೈಸಲಾಗುತ್ತಿದೆ. ಬಾಕಿ ಉಳಿದ 750 ಎಂ.ಎಲ್.ಡಿ ನೀರನ್ನು ಹೊಸದಾಗಿ ಸೇರಿಸಲಾಗಿದೆ ಎಂದರು. ಕನಿಷ್ಠ 10 ವರ್ಷ ಬೆಂಗಳೂರು ನಗರಕ್ಕೆ ಯಾವುದೇ ರೀತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದ ರೀತಿಯಲ್ಲಿ ಈ ಯೋಜನೆಯನ್ನು ರೂಪಿಸಲಾಗಿದೆ. ಟ್ಯಾಂಕರ್ ನೀರಿನ ಅವಲಂಬನೆ ಕಡಿಮೆ ಮಾಡಿ, ಮನೆಮನೆಗೂ ನೀರು ನೀಡುವುದು ಸರ್ಕಾರದ ಸಂಕಲ್ಪ. ಈ ಕೆಲಸವನ್ನು ರಾಜ್ಯ ಸರ್ಕಾರ ಮಾಡುತ್ತಿದೆ ಎಂದು ಹೇಳಿದರು. ಕಾವೇರಿ 5ನೇ ಹಂತದ ಯೋಜನೆಯಿಂದ ಯಶವಂತಪುರ, ಬೆಂಗಳೂರು ದಕ್ಷಿಣ, ಬ್ಯಾಟರಾಯನಪುರ, ಟಿ.ದಾಸರಹಳ್ಳಿ, ಮಹದೇವಪುರ, ರಾಜರಾಜೇಶ್ವರಿನಗರ ಹಾಗೂ ಬೊಮ್ಮನಹಳ್ಳಿ ವಲಯದ ವಿವಿಧ ಹಳ್ಳಿಗಳ ಮನೆಮನೆಗೂ ಕಾವೇರಿ ನೀರು ಸರಬರಾಜು ಆಗಲಿದೆ ಎಂದರು.

# ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ನಾಲ್ಕನೇ ಸಭೆ



**ಬೆಂಗಳೂರು, ಸೆ.23:** ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ನಾಲ್ಕನೇ ಸಭೆ ನಡೆಸಲಾಯಿತು ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಸಂಗೊಳ್ಳಿ ಗ್ರಾಮದಲ್ಲಿ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯ ಕಾಮಗಾರಿಗಳ ಅನುಷ್ಠಾನಕ್ಕೆ ರೂ.179.30 ಕೋಟಿ ಟೆಂಡರ್ ಮೊತ್ತಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿತ್ತು, ಈಗ ಕಾಮಗಾರಿ ಮುಗಿಸಲು 3 ತಿಂಗಳ ಡೆಡ್ ಲೈನ್ ನೀಡಲಾಗಿದೆ. ಈ ಜೊತೆಗೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯ ವಿದ್ಯಾರ್ಥಿಗಳ ದಾಖಲಾತಿಯಲ್ಲಿ ಕರ್ನಾಟಕದ ವಿದ್ಯಾರ್ಥಿಗಳಿಗೆ ಶೇ.67 ಮತ್ತು ಹೊರರಾಜ್ಯದ ವಿದ್ಯಾರ್ಥಿಗಳಿಗೆ ಶೇ .33 ರಷ್ಟು ಪ್ರವೇಶಾತಿ ನಿಗದಿಪಡಿಸುವ ಕುರಿತು ಕೇಂದ್ರ ರಕ್ಷಣಾ ಸಚಿವರಿಗೆ ಪ್ರಸ್ತಾವನೆ ಸಲ್ಲಿಸಲು ಈ ಸಭೆಯಲ್ಲಿ ನಿರ್ಧಾರ ಮಾಡಲಾಗಿದೆ.ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಅನುಕೂಲವಾಗಲು ಒಂದನೇ ತರಗತಿಯಿಂದ ಐದನೇ ತರಗತಿವರೆಗೆ ವರ್ಟಿಕಲ್ ಶಾಲೆ ಪ್ರಾರಂಭಿಸುವ ಕುರಿತು ಪರಿಶೀಲನೆ ಮಾಡುವಂತೆ ಸಿಎಂ ಈ ಸಭೆಯಲ್ಲಿ ಸೂಚಿಸಿದರು.ಜೊತೆಗೆ ಸೈನಿಕ ಶಾಲೆಯಲ್ಲಿ ಖಾಯಂ ಶಿಕ್ಷಕರ ನೇಮಕಾತಿಗೆ ಕುರಿತು ಪ್ರಸ್ತಾವನೆ ಸಲ್ಲಿಸುವಂತೆ ಕೂಡ ಇದೇ ವೇಳೆ ಸಿಎಂ ಸೂಚಿಸಿದರು.ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ನಂದಗಡ ಗ್ರಾಮದಲ್ಲಿ ರೂ.75.29 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡುತ್ತಿರುವ ಸಂಗೊಳ್ಳಿ ರಾಯಣ್ಣ ಮ್ಯೂಸಿಯಂ ಕಾಮಗಾರಿ ಬಹುತೇಕ ಅಂತಿಮ ಹಂತದಲ್ಲಿದ್ದು, ನವೆಂಬರ್ ಎರಡನೇ ವಾರದ ಒಳಗಾಗಿ ಎಲ್ಲಾ ಕಾಮಗಾರಿ ಪೂರ್ಣಗೊಳಿಸಬೇಕು. ನಂದಗಢದಲ್ಲಿ ಕೆರೆ ಅಭಿವೃದ್ಧಿ ಹಾಗೂ ಸಂಗೊಳ್ಳಿ ರಾಯಣ್ಣ ಪ್ರತಿಮೆಯನ್ನು ಸ್ಥಾಪನೆಯ ಕಾಮಗಾರಿಗಳನ್ನೂ ಇದೇ ಗಡುವಿನೊಳಗೆ ಪೂರ್ಣಗೊಳಿಸಲು ಸೂಚಿಸಿದರು. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ 2024–25 ನೇ ಸಾಲಿನ ಕ್ರಿಯಾ ಯೋಜನೆ ರೂ. 15.48 ಕೋಟಿಗೆ ಅನುಮೋದನೆ ನೀಡಲಾಯಿತು. ಜೊತೆಗೆ ಸಂಗೊಳ್ಳಿ ರಾಯಣ್ಣ ಸಾಂಸ್ಕೃತಿಕ ಸಲಹಾ ಸಮಿತಿ ರಚನೆ ಮಾಡಲು ಪ್ರಸ್ತಾವನೆ ಸಲ್ಲಿಸಲು ಸೂಚನೆ ನೀಡಲಾಯಿತು.

# ಬಿಜೆಪಿ ಬಹುಜನ ವಿರೋಧಿ: ರಾಹುಲ್



**ನವದೆಹಲಿ, ಸೆ. 23:** ಬಿಜೆಪಿಯನ್ನು ಬಹುಜನ ವಿರೋಧಿ ಎಂದು ಆರೋಪಿಸಿರುವ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು, ಅದು ಎಷ್ಟೇ ಸುಳ್ಳುಗಳನ್ನು ಹರಡಿದರೂ ಮೀಸಲಾತಿಗೆ ಧಕ್ಕೆಯಾಗಲು ನಾವು ಬಿಡುವುದಿಲ್ಲ ಎಂದು ಸೋಮವಾರ ಹೇಳಿದ್ದಾರೆ. ಈ ಬಗ್ಗೆ ಜಾಲತಾಣದಲ್ಲಿ ಬರೆದಿರುವ ರಾಹುಲ್ ಗಾಂಧಿ, ಪ್ರಧಾನಿ ನರೇಂದ್ರ ಮೋದಿ ಅವರು ಜಾತಿ ಗಣತಿ ಎಂಬ ಪದವನ್ನು ಹೇಳಲೂ ಹೆದರುತ್ತಾರೆ. ಅವರು ಬಹುಜನರು ತಮ್ಮ ಹಕ್ಕುಗಳನ್ನು ಪಡೆಯುವುದನ್ನು ಬಯಸುವುದಿಲ್ಲ. ಬಹುಜನ ವಿರೋಧಿ ಬಿಜೆಪಿ ಎಷ್ಟೇ ಸುಳ್ಳುಗಳನ್ನು ಹರಡಲಿ ಮೀಸಲಾತಿಗೆ ಹಾನಿಯಾಗುವುದನ್ನು ನಾವು ಬಿಡುವುದಿಲ್ಲ ಎಂದು ಹೇಳಿದ್ದಾರೆ.

ಸಮಗ್ರ ಜಾತಿಗಣತಿ ನಡೆದು ಪ್ರತಿ ವರ್ಗದ ಹಕ್ಕು, ಪಾಲು, ನ್ಯಾಯ ಸಿಗುವವರೆಗೆ, ಮೀಸಲಾತಿ ಮೇಲಿನ ಶೇ.50ರ ಮಿತಿಯನ್ನು ತೆಗೆದು ಹಾಕುವವರೆಗೆ ನಾವು ವಿರಮಿಸುವುದಿಲ್ಲ. ಜನಗಣತಿಯಿಂದ ಪಡೆದ ಮಾಹಿತಿಯು ಭವಿಷ್ಯದ ನೀತಿಗಳಿಗೆ ಆಧಾರವಾಗುವವರೆಗೆ ಕಾಂಗ್ರೆಸ್ ವಿರಮಿಸುವುದಿಲ್ಲ ಎಂದು ಅವರು ಪ್ರತಿಪಾದಿಸಿದ್ದಾರೆ.

ಮೋದಿ ಅವರು ಜಾತಿ ಗಣತಿ ಎಂದು ಹೇಳಲೂ ಹೆದರುತ್ತಾರೆ, ಬಹುಜನರು ತಮ್ಮ ಹಕ್ಕುಗಳನ್ನು ಪಡೆಯುವುದನ್ನು ಅವರು ಬಯಸುವುದಿಲ್ಲ!. ನಾನು ಮತ್ತೊಮ್ಮೆ ಪುನರಾವರ್ತಿಸುತ್ತೇನೆ, ನನಗೆ ಇದು ರಾಜಕೀಯ ವಿಷಯವಲ್ಲ, ಬಹುಜನರಿಗೆ ನ್ಯಾಯ ದೊರಕಿಸಿಕೊಡುವುದು ನನ್ನ ಜೀವನದ ಧ್ಯೇಯವಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ. ಈ ಪೋಸ್ಟ್‌ನಲ್ಲಿ ರಾಹುಲ್ ಗಾಂಧಿಯವರು ದೇಶದ ವಿವಿಧ ಭಾಗಗಳಲ್ಲಿ ತಮ್ಮ ಸಾರ್ವಜನಿಕ ಭಾಷಣಗಳ ವೀಡಿಯೋವನ್ನು ಹಂಚಿಕೊಂಡಿದ್ದಾರೆ.

## ರಾಜ್ಯಪಾಲರ ವಿರುದ್ಧ ಸಿಎಂ ಕಿಡಿ



**ಬೆಂಗಳೂರು, ಸೆ.23:** ಕ್ಷುಲ್ಲಕ ವಿಚಾರಗಳಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ವಿವರಣೆ ಕೇಳುತ್ತಿರುವುದಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಕಿಡಿಕಾರಿದ್ದಾರೆ. 65 ಆಂಬ್ಯುಲೆನ್ಸ್ ಗಳಿಗೆ ಚಾಲನೆ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಅರ್ಕಾವತಿ ಬಡಾವಣೆ ಕುರಿತಂತೆ ರಾಜ್ಯಪಾಲರು ಹೇಳಿರುವ ವಿವರಣೆ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

ಈ ಹಿಂದೆ ಬಿಜೆಪಿ ಸರ್ಕಾರ 4 ವರ್ಷಗಳ ಕಾಲ ಅಧಿಕಾರ ನಡೆಸಿತ್ತು. ಆ ಸಂದರ್ಭದಲ್ಲಿ ವಿವರಣೆ ಕೇಳಿ ಏಕೆ ಪತ್ರ ಬರೆಯಲಿಲ್ಲ. ಈಗ ಬಿಜೆಪಿ ಮುಖಂಡ ಸಿಟಿ ರವಿ ಪತ್ರ ಬರೆದಿರುವುದನ್ನೇ ನೆಪಮಾಡಿಡಕೊಂಡು ವಿವರ ಕೇಳುತ್ತಿದ್ದಾರೆ ಎಂದು ದೂರಿದರು. ರಾಜ್ಯಪಾಲರ ವಿರುದ್ಧ ರಾಷ್ಟ್ರಪತಿಯವರಿಗೆ ದೂರು ನೀಡುತ್ತೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು ರಾಜ್ಯಪಾಲರಿಗೆ ದೂರು ನೀಡಿರುವ ವ್ಯಕ್ತಿ ಕನ್ನಡದಲ್ಲಿ ಸಹಿ ಮಾಡಿದ್ದಾರೆ. ಇದು ದೊಡ್ಡ ವಿಚಾರವೇ. ಸರ್ಕಾರದ ಟಿಪ್ಪಣಿಗಳು ಪತ್ರಗಳು ಸಾಮಾನ್ಯವಾಗಿ ಕನ್ನಡದಲ್ಲೇ ಕಳುಹಿಸುತ್ತೇವೆ. ಆದರೆ ಕೇಂದ್ರ ಮತ್ತು ಇತರ ರಾಜ್ಯಗಳಿಗೆ ಪತ್ರ ಬರೆಯುವಾಗಿ ಇಂಗ್ಲಿಷ್ ಭಾಷೆಯಲ್ಲಿ ಕಳುಹಿಸುತ್ತೇವೆ. ಆದರೆ ಈ ಬಗ್ಗೆ ರಾಜ್ಯಪಾಲರು ಕ್ಷುಲ್ಲಕ ವಿಚಾರಕ್ಕಾಗಿ ಇಂತಹ ವಿಷಯಗಳನ್ನು ಪ್ರಸ್ತಾಪಿಸಿದ್ದಾರೆ ಎಂದು ದೂರಿದರು.

# ಭಾಷೆ ಅನೇಕ ಭಾವನೆಗಳು ಒಂದೇ ಇದು ಮರೆಯಲಾಗದ ಕ್ಷಣ



**ನವದೆಹಲಿ, ಸೆ.23:** ಮೂರು ದಿನಗಳ ಅಮೆರಿಕದಲ್ಲಿ ಕ್ವಾಡ್‌ಶೃಂಗಸಭೆಯ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರನ್ನು ನ್ಯೂಯಾರ್ಕ್‌ನಲ್ಲಿ ಭಾರತೀಯ ವಲಸಿಗರು ಅದ್ದೂರಿಯಾಗಿ ಸ್ವಾಗತ ಕೋರಿದರು.

ಇಲ್ಲಿನ ನಸ್ಸೌ ವೆಟರನ್ಸ್ ಮೆಮೋರಿಯಲ್ ಕೊಲಿಜಿಯಂನಲ್ಲಿ ಆಯೋಜಿಸಿದ್ದ 'ಮೋದಿ ಮತ್ತು ಯುಎಸ್' ಕಾರ್ಯಕ್ರಮದಲ್ಲಿ ಭಾರತೀಯ ವಲಸಿಗರನ್ನು ಉದ್ದೇಶಿಸಿ ಪ್ರಧಾನಿ ಮಾತನಾಡಿ, ಎಲ್ಲೇ ಇದ್ದರೂ, ಭಾಷೆಗಳು ಅನೇಕವಿದ್ದರೂ ಭಾವನೆಗಳು ಒಂದೇ.. ಆ ಭಾವನೆಯೇ ಭಾರತ್ ಮಾತಾ ಕೀ ಜೈ ಎಂಬುವುದು ಎಂದು ಪ್ರಧಾನಿಯವರು ಘೋಷಣೆಗೆ ಹಾಕುತ್ತಿದ್ದಂತೆ ಮೋದಿಯವರೊಂದಿಗೆ ಅಮೆರಿಕಾದ ಭಾರತೀಯ ವಲಸಿಗರು ಧ್ವನಿಗೂಡಿಸಿದರು.

ಸಾವಿರ ಭಾರತೀಯ–ಅಮೆರಿಕನ್ನರು ಭಾಗವಹಿಸಿದ್ದ ಈ ಕಾರ್ಯಕ್ರಮದಲ್ಲಿ ಗಖನಲ್ಲಿ ನೆಲೆಸಿರುವ ನಮ್ಮ ಭಾರತೀಯರು ಭಾರತದ ರಾಯಭಾರಿಗಳು ಎಂದು ಮೋದಿ ಹೆಮ್ಮೆಯಿಂದ ನುಡಿದರು. ತಮ್ಮ ಈ ಭೇಟಿಯನ್ನು ಮರೆಯಲಾಗದ ಕ್ಷಣಗಳು ಎಂದು ಟ್ವೀಟ್‌ಮಾಡಿದ್ದಾರೆ.

# ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಅನುಮತಿ ಪ್ರಶ್ನಿಸಿ ಸಿಎಂ ಅರ್ಜಿ: ಇಂದು ತೀರ್ಪು

**ಬೆಂಗಳೂರು, ಸೆ.23.** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಸೈಟು ಹಂಚಿಕೆ ಹಗರಣದಲ್ಲಿ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಪ್ರಶ್ನಿಸಿ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿ ತೀರ್ಪು ನಾಳೆ ಪ್ರಕಟವಾಗಲಿದೆ ಈ ಪ್ರಕರಣದವಾದ ಪ್ರತಿವಾದ ಈಗಾಗಲೇ ಸಂಪೂರ್ಣಗೊಂಡಿದ್ದು ನ್ಯಾಯಮೂರ್ತಿ ನಾಗ ಪ್ರಸನ್ನ ಅವರು ತೀರ್ಪನ್ನ ಕಾಯ್ದಿರಿಸಿದ್ದರು ನಾಳೆ(ಸೆಪ್ಟೆಂಬರ್ 24) ಹೈಕೋರ್ಟ್ ತೀರ್ಪು ಪ್ರಕಟಿಸಲಿದೆ.

ಈಗಾಗಲೇ ಎರಡು ಕಡೆಯ ವಾದವನ್ನು ಆಲಿಸಿ ವಿಚಾರಣೆ ಮುಕ್ತಾಯಗೊಳಿಸಿರುವ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ನಾಳೆ (ಮಂಗಳವಾರ) ಮಧ್ಯಾಹ್ನ 12 ಗಂಟೆಗೆ ತೀರ್ಪು ಪ್ರಕಟಿಸಲಿದೆ.

ಈ ಹಿನ್ನೆಲೆಯಲ್ಲಿ ರಾಜ್ಯ ರಾಜಕಾರಣದಲ್ಲಿ ಬಿರುಗಾಳಿ ಎಬ್ಬಿಸಿರುವ ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯನವರ ಭವಿಷ್ಯ ಏನಾಗಲಿದೆ ಎನ್ನುವ ಕುತೂಹಲ ಮೂಡಿಸಿದ್ದು, ಎಲ್ಲರ ಚಿತ್ತ ಹೈಕೋರ್ಟ್‌ನತ್ತ ನೆಟ್ಟಿದೆ. ಸಿದ್ದರಾಮಯ್ಯ ಪರವಾಗಿ ಹಿರಿಯ ಸುಪ್ರೀಂ ಕೋರ್ಟ್ ವಕೀಲ ಅಭಿಷೇಕ್ ಮನು ಸಿಂಘ್ವಿ ಸೇರಿದಂತೆ ಹಲವು ಹಿರಿಯ ವಕೀಲರು ವಾದ ಮಂಡಿಸಿದ್ದರು. ಇನ್ನು ರಾಜ್ಯಪಾಲರ ಪರ ಸಾಲಿಸಿಟರ್ ಜನರಲ್ ತುಷಾರ ಮೆಹ್ತಾ ವಾದ ಮಂಡಿಸಿದ್ದರು. ಅಲ್ಲದೇ ದೂರುದಾರರಾದ ಟಿಜೆ ಅಬ್ರಾಹಂ ಮತ್ತು ಸ್ನೇಹಮಯಿ ಕೃಷ್ಣ ಪರ ವಕೀಲರು ಸಹ ತಮ್ಮ ವಾದ ಮಂಡಿಸಿದ್ದರು. ಈ ಎಲ್ಲಾ ವಾದ ಪ್ರತಿವಾದ ಆಲಿಸಿದ್ದ ನ್ಯಾ. ಎಂ.ನಾಗಪ್ರಸನ್ನ ಅವರು ಆದೇಶವನ್ನು ಕಾಯ್ದಿರಿಸಿದ್ದರು.

### ಮುಡಾ ಹಗರಣದ ಹಿನ್ನೆಲೆ

ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಸಿದ್ದರಾಮಯ್ಯ ಹೆಸರಿನಲ್ಲಿದ್ದ ಕೆಸರೆ ಗ್ರಾಮದ ಸರ್ವೆ ನಂಬರ್ 464ರಲ್ಲಿ 3.16 ಎಕರೆ ಜಮೀನನ್ನು ದೇವನೂರು ಬಡಾವಣೆ ನಿರ್ಮಾಣಕ್ಕೆ ಭೂಸ್ವಾಧೀನ ಮಾಡಿಕೊಳ್ಳಲಾಗಿತ್ತು.

ಈ ಜಾಗವನ್ನು ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಗೆ ದಾನ ಪತ್ರದ ಮೂಲಕ ಅವರ ಸಹೋದರ ಕೊಟ್ಟಿದ್ದರು. ಇದು ಒಟ್ಟು 1,48,104 ಚದರ ಅಡಿ ಜಾಗ ಇತ್ತು. ಅದರ ಬದಲಿಗೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ 2021ರಲ್ಲಿ ಪಾರ್ವತಿ ಅವರಿಗೆ ಮೈಸೂರಿನ ಪ್ರತಿಷ್ಠಿತ ವಿಜಯನಗರ ಬಡಾವಣೆಯಲ್ಲಿ 38,284 ಚದರ ಅಡಿ ಜಾಗ ನೀಡಿದ್ದು, ಈಗ ವಿವಾದಕ್ಕೀಡಾಗಿದೆ.

# ಪಾಕಿಸ್ತಾನ ಐಎಸ್‌ಐ ಮುಖ್ಯಸ್ಥರಾಗಿ ಆಸಿಮ್ ಮಲಿಕ್ ನೇಮಕ

**ಇಸ್ಲಾಮಾಬಾದ್, ಸೆ.23:** ಪಾಕಿಸ್ತಾನದ ಗುಪ್ತಚರ ಇಲಾಖೆ ಇಂಟರ್–ಸರ್ವಿಸಸ್ ಇಂಟೆಲಿಜೆನ್ಸ್(ಐಎಸ್‌ಐ)ನ ನೂತನ ಮಹಾ ನಿರ್ದೇಕರಾಗಿ ಲೆ|ಜ| ಆಸಿಮ್ ಮಲಿಕ್‌ರನ್ನು ನೇಮಿಸಿರುವುದಾಗಿ ವರದಿಯಾಗಿದೆ.

ಪ್ರಸ್ತುತ ಪಾಕಿಸ್ತಾನ ಸೇನೆಯ ಪ್ರಧಾನ ಕಚೇರಿಯಲ್ಲಿ ಉನ್ನತ ಅಧಿಕಾರಿಯಾಗಿರುವ ಮಲಿಕ್ ಅವರು ಹಾಲಿ ಮಹಾ ನಿದೇಶಕ ಲೆ|ಜ| ನದೀಮ್ ಅಂಜುಮ್ ಅವರ ಸ್ಥಾನದಲ್ಲಿ ಕರ್ತವ್ಯ ನಿರ್ವಹಿಸಲಿದ್ದಾರೆ.



ಐಎಸ್‌ಐ ಮುಖ್ಯಸ್ಥರನ್ನು ಪ್ರಧಾನ ಮಂತ್ರಿ ನೇಮಿಸುತ್ತಾರೆ. ಆದರೆ ಸಂಪ್ರದಾಯದಂತೆ ಅವರು ಸೇನಾ ಮುಖ್ಯಸ್ಥರೊಂದಿಗೆ ಸಮಾಲೋಚಿಸಿ ಈ ಅಧಿಕಾರವನ್ನು ಕಾರ್ಯಗತ ಗೊಳಿಸುತ್ತಾರೆ. ಮಲಿಕ್ ಈ ಹಿಂದೆ ಬಲೂಚಿಸ್ತಾನದಲ್ಲಿ ಪದಾತಿ ದಳ ಮತ್ತು ವಝೀರಿಸ್ತಾನ ದಲ್ಲಿ ಪದಾತಿ ದಳದ ಮುಖ್ಯಸ್ಥರಾಗಿದ್ದರು.

## ನಿತ್ಯ ಪಂಚಾಂಗ 24.09.2024 ಮಂಗಳವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ಉತ್ತರಾಯಣ-ವಸಂತ ಋತು,
ಚಾಂದ್ರಮಾನ, ಭಾದ್ರಪದ ಬಹುಳ
ಸಪ್ತಮಿ, ಮೃಗಶಿರ ನಕ್ಷತ್ರ,
ಚಿಕ್ಕೋಡಿ | ಡೋಣಿವಾಡಿ ಅಪ್ಪಾ ಮಹಾರಾಜ ಪುಣ್ಯದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಎಂ.ಬಿ.ಪಾಟೀಲ್, ಪ್ರಿಯಾಂಕ್ ಖರ್ಗೆ ಪ್ರಕರಣ: ವಿವರಣೆ ಕೋರಿದ ರಾಜ್ಯಪಾಲ

## ಮಲ್ಲಿಕಾರ್ಜುನ ಖರ್ಗೆ ಅವರನ್ನು ಇಕ್ಕಟ್ಟಿಗೆ ಸಿಲುಕಿಸಲು ರಾಜಭವನದಲ್ಲಿ ಷಡ್ಯಂತ್ರ

**ಬೆಂಗಳೂರು, ಸೆ.23;** ರಾಜ್ಯ ಸರ್ಕಾರ ಮತ್ತು ರಾಜಭವನದ ನಡುವಿನ ಸಂಘರ್ಷ ತಾರಕಕ್ಕೇರಿದ್ದು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟದ ಪ್ರಮುಖ ಸಚಿವರಾದ ಎಂ.ಬಿ.ಪಾಟೀಲ್, ಪ್ರಿಯಾಂಕ್ ಖರ್ಗೆ ಅವರ ಪ್ರಕರಣದಲ್ಲಿ ವಿವರಣೆ ಕೋರಿ ನೋಟಿಸ್ ನೀಡಿದೆ. ಪ್ರಿಯಾಂಕ್ ಖರ್ಗೆ ಮೂಲಕ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಇಕ್ಕಟ್ಟಿಗೆ ಸಿಲುಕಿಸಲು ರಾಜಭವನದಲ್ಲಿ ಭಾರೀ ಷಡ್ಯಂತ್ರ ನಡೆಯುತ್ತಿರುವುದು ಕಂಡು ಬಂದಿದೆ.

ಮಲ್ಲಿಕಾರ್ಜುನ ಖರ್ಗೆ ಅವರ ಕುಟುಂಬದವರು, ಸಿದ್ಧಾರ್ಥ ವಿಹಾರ ಶಿಕ್ಷಣ ಟ್ರಸ್ಟ್‌ಗೆ ಕೆಐಎಡಿಬಿಯಿಂದ ಐದು ಎಕರೆ ಜಾಗ ಪಡೆದುಕೊಂಡಿದ್ದಾರೆ. ಈ ಕುರಿತಂತೆಯೂ ವಿವರ ಒದಗಿಸಬೇಕು ಎಂದು ರಾಜಭವನ ಬಯಸಿದೆ. ರಾಜಭವನ ಇದೀಗ ಪರ್ಯಾಯ ಆಡಳಿತ ಕೇಂದ್ರವಾಗಿದ್ದು, ಈ ಬೆಳವಣಿಗೆಗಳು ಸಾಂವಿಧಾನಿಕ ಬಿಕ್ಕಟ್ಟು ಸೃಷ್ಟಿಸುವ ಆತಂಕ ಉಂಟು ಮಾಡಿವೆ.

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಹಗರಣಕ್ಕೆ ಸಂಬಂಧಿಸಿದಂತೆ ಪೂರ್ಣ ಮಾಹಿತಿ ಹಾಗೂ ದಾಖಲೆಗಳನ್ನು ಒದಗಿಸುವಂತೆ ಸರ್ಕಾರದ ಮುಖ್ಯಕಾರ್ಯದರ್ಶಿ ಅವರಿಗೆ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಅವರು ಪತ್ರ ಬರೆದಿದ್ದಾರೆ. ಸಿದ್ಧಾರ್ಥ ವಿಹಾರ ಶಿಕ್ಷಣ ಟ್ರಸ್ಟ್ ಬಗ್ಗೆಯೂ ವಿವರ ಕೋರಿದ್ದು, ಇದು ತೀವ್ರ ಚರ್ಚೆಗೆ ಕಾರಣವಾಗಿದೆ. ಹಗರಣಕ್ಕೆ ಸಂಬಂಧಿಸಿದಂತೆ ವಿಧಾನ ಪರಿಷತ್ತಿನ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಆಗಸ್ಟ್ 27ರಂದು ರಾಜ್ಯಪಾಲರನ್ನು ಭೇಟಿ ಮಾಡಿ ದಾಖಲೆ ಸಮೇತ ದೂರು ನೀಡಿದ್ದರು. ಸಚಿವರಿಬ್ಬರ ವಿರುದ್ಧ ಕ್ರಮ ಜರುಗಿಸುವಂತೆ ಮನವಿ ಮಾಡಿದ್ದರು. ಛಲವಾದಿ ನಾರಾಯಣ ಸ್ವಾಮಿ ಮಲ್ಲಿಕಾರ್ಜುನ ಖರ್ಗೆ ಅವರ ಗರಡಿಯಲ್ಲಿ ಬೆಳೆದವರು. ಹೀಗಾಗಿ ಈ ಪ್ರಕರಣ ತೀವ್ರ ಕುತೂಹಲಕ್ಕೆ ಕಾರಣವಾಗಿದೆ.

ಇದಕ್ಕೂ ಮುನ್ನ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಳ್ಳಿ, ಸಚಿವ ಎಂ.ಬಿ.ಪಾಟೀಲ್ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಿ, ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ಕೋರಿದ್ದರು. ಈ ದೂರುಗಳನ್ನು ರಾಜಭವನ ಪರಿಶೀಲಿಸಿ, ಕಾನೂನು ಸಲಹೆ ಪಡೆದ ನಂತರ ಸರ್ಕಾರದಿಂದ ವಿವರಣೆ ಕೋರಿದ್ದಾರೆಂದು ಉನ್ನತ ಮೂಲಗಳು ತಿಳಿಸಿವೆ.

ಕೈಗಾರಿಕಾ ಸಚಿವರೂ ಆಗಿರುವ ಎಂ.ಬಿ.ಪಾಟೀಲ್, ಕೆಐಎಡಿಬಿ ಭೂಮಿಯನ್ನು ಅಕ್ರಮವಾಗಿ ಮಂಜೂರು ಮಾಡಿದ್ದಾರೆ, ಮೂಲೆ ಹಾಗೂ ಬಿಡಿ ನಿವೇಶನಗಳನ್ನು ಹರಾಜು ಪ್ರಕ್ರಿಯೆ ಮೂಲಕ ಹಂಚಬೇಕು. ಈ ಎಲ್ಲಾ ಪ್ರಕ್ರಿಯೆಗಳು ಆನ್ಲೈನ್‌ನಲ್ಲೇ ನಡೆಯಬೇಕು, ಆದರೆ, ಇವರು ಎಲ್ಲಾ ಕಾನೂನನ್ನು ಗಾಳಿಗೆ ತೂರಿ, ತಮ್ಮ ಆಪ್ತರು ಹಾಗೂ ರಾಜಕಾರಣಿಗಳ ಮಕ್ಕಳಿಗೆ ಹಂಚಿದ್ದಾರೆ ಎಂದು ಕೆಲವು ದಾಖಲೆಗಳ ಸಮೇತ ದೂರು ಸಲ್ಲಿಸಿದ್ದರು. ಈ ಅಕ್ರಮದಲ್ಲಿ ಅಧಿಕಾರಿಗಳು ಶಾಮೀಲಾಗಿದ್ದಾರೆ, ಇದರಿಂದ ಕೆಐಎಡಿಬಿಗೆ ಕೋಟ್ಯಂತರ ರೂ. ನಷ್ಟ ಉಂಟಾಗಿದೆ ಎಂದು ದೂರಿದ್ದರು. ಇವರು ಕ್ರಿಮಿನಲ್ ಅಪರಾಧ ಎಸಗಿದ್ದಾರೆ, ಆದ್ದರಿಂದ ಭ್ರಷ್ಟಚಾರ ನಿಗ್ರಹ ಕಾಯಿದೆ ಸೆಕ್ಷನ್ 17 ಮತ್ತು 19ರಡಿ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿದ್ದರು.

ಮಲ್ಲಿಕಾರ್ಜುನ ಖರ್ಗೆ ಅವರ ಕುಟುಂಬಕ್ಕೆ ಜಾಗ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಕುಟುಂಬದವರು, ಸಿದ್ಧಾರ್ಥ ವಿಹಾರ ಶಿಕ್ಷಣ ಟ್ರಸ್ಟ್‌ಗೆ ಕೆಐಎಡಿಬಿಯಿಂದ ಐದು ಎಕರೆ ಜಾಗ ಪಡೆದುಕೊಂಡಿದ್ದಾರೆ. ಸಚಿವರಾಗಿ ಪ್ರಿಯಾಂಕ್ ಖರ್ಗೆ ಅಧಿಕಾರ ದುರುಪಯೋಗ ಪಡಿಸಿಕೊಂಡು ತಮ್ಮ ಕುಟುಂಬದ ಸಂಸ್ಥೆಗೆ ಬೆಲೆ ಬಾಳುವ ಜಮೀನು ಕೊಡಿಸಿದ್ದಾರೆ ಎಂದು ನಾರಾಯಣಸ್ವಾಮಿ ದೂರಿದ್ದರು. ಸಿಎ ಸೈಟು ಪಡೆಯಲು ಕಾನೂನು ಕ್ರಮಗಳಿವೆ, ಸಾಮಾಜಿಕ ಚಟುವಟಿಕೆ, ರಂಗಮಂದಿರ, ಆಸ್ಪತ್ರೆ ಸೇರಿದಂತೆ ನಿಗದಿತ ಉದ್ದೇಶಕ್ಕೆ ಇವನ್ನು ಮೀಸಲಾಗಿ ಇಡಲಾಗುತ್ತದೆ. ಸಾಮಾನ್ಯ ಜನರು ಸಲ್ಲಿಸಿದ ಅರ್ಜಿಗಳನ್ನು ತಿರಸ್ಕರಿಸಿ ಪ್ರಭಾವಿಗಳಿಗೆ ಹಂಚಿಕೆ ಮಾಡಲಾಗಿದೆ, ಇದರಿಂದ ಅನುಮಾನಗಳು ಸೃಷ್ಟಿಯಾಗಿವೆ.

ಏರೋಸ್ಪೇಸ್ ನಿವೇಶನ ಪಡೆದಿದ್ದಾರೆ ಬುದ್ಧ ವಿಹಾರ ಕಟ್ಟಲು ಸಿದ್ಧಾರ್ಥ ವಿಹಾರ ಟ್ರಸ್ಟ್ ಕಲಬುರಗಿಯಲ್ಲಿ ನೋಂದಣಿಯಾಗಿದೆ, ಇದೊಂದು ಧಾರ್ಮಿಕ ಟ್ರಸ್ಟ್, ಆದರೆ ಇದಕ್ಕೆ ಏರೋಸ್ಪೇಸ್‌ಗೆ ಸಂಬಂಧಿಸಿದ ನಿವೇಶನ ಪಡೆದಿದ್ದಾರೆ ಎಂದು ದೂರು ದಾಖಲಿಸಿದ್ದರು. ಇದಕ್ಕೆ ಸಂಬಂಧಿಸಿದಂತೆ ಉಭಯ ಸಚಿವರುಗಳು ಸುದ್ದಿಗೋಷ್ಠಿಯಲ್ಲಿ ಪ್ರತ್ಯೇಕವಾಗಿ ವಿವರಣೆ ನೀಡಿ, ಬಿಜೆಪಿ ಆರೋಪಗಳನ್ನು ತಳ್ಳಿಹಾಕಿದ್ದಲ್ಲದೆ, ನಿಯಮಾನುಸಾರವೇ ಅರ್ಹರಿಗೆ ನಿವೇಶನಗಳನ್ನು ನೀಡಲಾಗಿದೆ ಹಾಗೂ ಸಂಸ್ಥೆ ಪಡೆದುಕೊಂಡಿದೆ ಎಂದು ಸಮರ್ಥಿಸಿಕೊಂಡಿದ್ದರು.

# ಬಸವಸಾಗರ ಜಲಾಶಯದಿಂದ ಕುಡಿಯುವ ನೀರು ಸರಬರಾಜು ಬೃಹತ್ ಯೋಜನೆಗೆ ಶೀಘ್ರವೇ ಚಾಲನೆ: ಪ್ರಿಯಾಂಕ್ ಖರ್ಗೆ



**ಬೆಂಗಳೂರು ಸೆ.23 :** ಕಲಬುರಗಿ ಹಾಗೂ ಬೀದರ್ ಜಿಲ್ಲೆಯ ಎಲ್ಲಾ ಗ್ರಾಮೀಣ ಜನವಸತಿಗಳಿಗೆ ಬಹುಗ್ರಾಮ ನೀರು ಸರಬರಾಜು ಯೋಜನೆಯಡಿ ಕಲಬುರಗಿ ಜಿಲ್ಲೆಯ ನಾರಾಯಣಪುರ ಹಿನ್ನೀರಿನ ಬಳಿಯಿರುವ ಬಸವಸಾಗರ ಜಲಾಶಯದಿಂದ ಕುಡಿಯುವ ನೀರು ಸರಬರಾಜು ಮಾಡುವ 7200 ಕೋಟಿ ರೂ. ವೆಚ್ಚದ ಯೋಜನೆಯನ್ನು ಜಲ ಜೀವನ್ ಮಿಷನ್ ಅಡಿ ಆರಂಭಿಸಲಾಗುವುದು ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ರಾಜ್ಯ ಸರ್ಕಾರ ಶೇ.50ರ ಪಾಲು ಹಾಗೂ ನಿರ್ವಹಣ ವೆಚ್ಚ ಸೇರಿದಂತೆ 3914.45 ಕೋಟಿ ರೂ. ಭರಿಸಲಿದೆ ಎಂದು ಹೇಳಿರುವ ಸಚಿವರು ಕಲಬುರಗಿ ಹಾಗೂ ಬೀದರ್ ಜಿಲ್ಲೆಗಳಲ್ಲಿ 2011ರಂತೆ 22.14 ಲಕ್ಷ ಜನಸಂಖ್ಯೆ ಇದ್ದು, 2038ರ ವೇಳೆಗೆ ಈ ಎರಡೂ ಜಿಲ್ಲೆಗಳ ಜನಸಂಖ್ಯೆ 31.54 ಲಕ್ಷಕ್ಕೆ ಏರುವುದೆಂದು ನಿರೀಕ್ಷಿಸಲಾಗಿದ್ದು ಈ ಜನಸಂಖ್ಯೆಗೆ ಅನುಗುಣವಾಗಿ ಎಲ್ಲ ಗ್ರಾಮಗಳು ಹಾಗೂ ಜನವಸತಿಗಳಿಗೆ ಈ ಯೋಜನೆಯಡಿ ನೀರು ಪೂರೈಸಲು ಯೋಜನೆ ಸಿದ್ಧಪಡಿಸಲಾಗಿದೆ ಎಂದಿದ್ದಾರೆ.

ಕಲಬುರಗಿ ಹಾಗೂ ಬೀದರ್ ಜಿಲ್ಲೆಯಲ್ಲಿ ಪ್ರಸ್ತುತ ತೆರೆದ ಬಾವಿ ಹಾಗೂ ಕೊಳವೆ ಬಾವಿಗಳಿಂದ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದ್ದು, ನೀರಿನ ಗುಣಮಟ್ಟ, ಪೂರೈಕೆಯಲ್ಲಿ ಕೊರತೆಯಂತಹ ಸವಾಲುಗಳನ್ನು ಎದುರಿಸಲಾಗುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದು, ಈ ಎರಡೂ ಜಿಲ್ಲೆಗಳ ಅಂತರ್ಜಲ ಮೂಲಗಳು ದಿನದಿಂದ ದಿನಕ್ಕೆ ಕುಸಿಯುತ್ತಿರುವುದೂ ಸಮಸ್ಯೆಯಾಗಿ ಪರಿಣಮಿಸಿದೆ ಎಂದು ತಿಳಿಸಿದ್ದಾರೆ. ಡಾ.ನಂಜುಂಡಪ್ಪ ಸಮಿತಿ ವರದಿಯಂತೆ ಕಲಬುರಗಿ ಹಾಗೂ ಬೀದರ್ ಜಿಲ್ಲೆಯ ಎಲ್ಲಾ ತಾಲ್ಲೂಕುಗಳು ಹಿಂದುಳಿದಿದ್ದು, ಈ ಯೋಜನೆಯಿಂದ ಈ ಎರಡೂ ಜಿಲ್ಲೆಗಳ 31.54 ಲಕ್ಷ ಜನರು ಪರಿಶುದ್ಧ ನೀರನ್ನು ಪಡೆಯಲಿದ್ದಾರೆ, ಇವರಲ್ಲಿ 10.43 ಲಕ್ಷ ಮಂದಿ ಪರಿಶಿಷ್ಟ ಜಾತಿ ಹಾಗೂ 3.05 ಮಂದಿ ಪರಿಶಿಷ್ಟ ಪಂಗಡದ ಜನಸಂಖ್ಯೆಗೆ ನೀರು ಒದಗಿಸಲು ಸಾಧ್ಯವಾಗಲಿದೆ ಎಂದೂ ಮಾಹಿತಿ ನೀಡಿದ್ದಾರೆ.

# ಜಮೀನು ಡಿನೋಟಿಫೈ ಕುರಿತು ಸರ್ಕಾರಕ್ಕೆ ಗವರ್ನರ್ ಪತ್ರ: ಗೃಹಸಚಿವ ಅಸಮಾಧಾನ






**ಬೆಂಗಳೂರು, ಸೆ.23:** ಅರ್ಕಾವತಿ ಬಡಾವಣೆಗೆ ಸ್ವಾಧೀನಪಡಿಸಿದ್ದ ಜಮೀನು ಡಿನೋಟಿಫೈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಹಿತಿ ನೀಡುವಂತೆ ರಾಜ್ಯಪಾಲರು ಸರ್ಕಾರಕ್ಕೆ ಪತ್ರ ಬರೆಯುತ್ತಿದ್ದಾರೆ. ಈ ಸಂಬಂಧ ರಾಜ್ಯಪಾಲರು ಪದೇ ಪದೆ ಸರ್ಕಾರಕ್ಕೆ ಪತ್ರ ಬರೆಯುತ್ತಿರುವ ವಿಚಾರಕ್ಕೆ ಸಂಬಂಧಿಸಿ ಗೃಹ ಇಲಾಖೆ ಸಚಿವ ಡಾ.ಪರಮೇಶ್ವರ್ ಆಕ್ರೋಶ ಹೊರ ಹಾಕಿದ್ದಾರೆ. ಪ್ರತಿನಿತ್ಯ ಸರ್ಕಾರದ ಕಾರ್ಯದ ಬಗ್ಗೆ ರಾಜ್ಯಪಾಲರು ಮಾಹಿತಿ ಕೇಳಿದ್ದ ಸಂದರ್ಭಗಳೇ ಇಲ್ಲ. ಆದರೆ ಪ್ರತಿ ದಿನ ಪತ್ರ ಬರೆದು ಪತ್ರದ ಮೂಲಕ ಮಾಹಿತಿ ಕೊಡಿ ಅಂತಿದ್ದಾರೆ.ರಾಜ್ಯಪಾಲರು ಹಾಗೂ ಸರ್ಕಾರದ ಮಧ್ಯೆ ಗುಡ್ ರಿಲೇಷನ್‌ಶಿಪ್ ಇರುತ್ತೆ. ಆದರೆ ಹೀಗಾದರೆ ಸ್ಮೂತ್ ಆಗಿ ಆಗೋದಿಲ್ಲ. ಮುಂದೆ ಏನು ಮಾಡಬೇಕೆಂದು ಸಿಎಂ ಜತೆ ಚರ್ಚೆ ಮಾಡುತ್ತೇವೆ. ಅನಿವಾರ್ಯತೆ ಇಲ್ಲದಿದ್ದರೆ ರಾಜ್ಯಪಾಲರಿಗೆ ಉತ್ತರ ಕೊಡುವುದಿಲ್ಲ. ಯಾವುದಕ್ಕೆ ಉತ್ತರ ಕೊಡಬೇಕೋ ಕೊಡುತ್ತೇವೆ. ಸಂಪುಟದಲ್ಲಿ ರಾಜ್ಯಪಾಲರ ನಡವಳಿಕೆ ಬಗ್ಗೆ ಚರ್ಚೆ ಮಾಡುತ್ತೇವೆ ಎಂದು ಬೆಂಗಳೂರಿನಲ್ಲಿ ಗೃಹ ಇಲಾಖೆ ಸಚಿವ ಡಾ.ಪರಮೇಶ್ವರ್ ಅವರು ರಾಜ್ಯಪಾಲರ ನಡೆಗೆ ಆಕ್ರೋಶ ಹೊರ ಹಾಕಿದ್ದಾರೆ.ರಾಜ್ಯಪಾಲರ ಹುದ್ದೆ ಅತ್ಯಂತ ಜವಾಬ್ದಾರಿಯುತ ಸ್ಥಾನ. ಸಂವಿಧಾನ ರಕ್ಷಣೆ ಮಾಡುವ ಸ್ಥಾನ ಕೊಟ್ಟಿದ್ದಾರೆ. ಸಂವಿಧಾನ ಯಾವ ರೀತಿ ರಕ್ಷಣೆ ಮಾಡಬೇಕು ಅಂತ ಅಧಿಕಾರ ಕೊಟ್ಟಿದ್ದಾರೆ. ಪ್ರಥಮಬಾರಿಗೆ ಈ ರೀತಿಯಾಗಿದೆ. ಪ್ರತಿ ನಿತ್ಯ ಆಡಳಿತದಲ್ಲಿ ಸರ್ಕಾರದ ಕಾರ್ಯದ ಬಗ್ಗೆ ರಾಜ್ಯಪಾಲರು ಮಾಹಿತಿ ಕೇಳಿದ್ದ ಸಂದರ್ಭಗಳೇ ಇಲ್ಲ. ಇತಿಹಾಸದಲ್ಲಿ ಕರ್ನಾಟಕದಲ್ಲಿ ಕೇಳಿಲ್ಲ. ಇಲ್ಲಿಯವರೆಗೆ ಅನೇಕ ಗವರ್ನರ್‌ಗಳು ಬಂದಿದ್ದಾರೆ. ಆದರೆ ದಿನ ನಿತ್ಯ ಪತ್ರ ಬರೆದು ಪತ್ರದ ಮೂಲಕ ಮಾಹಿತಿ ಕೊಡಿ ಅಂತಿದ್ದಾರೆ. ಕೆಲವೊಂದು ಸಂದರ್ಭಗಳಲ್ಲಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಸಿಎಂ, ಕಾನೂನು ಸುವ್ಯವಸ್ಥೆ ವಿಚಾರ ಬಂದರೆ ಗೃಹ ಸಚಿವರು ರಾಜ್ಯಪಾಲರಿಗೆ ಮಾಹಿತಿ ನೀಡುತ್ತಿದ್ದರು. ಅವರಿಗೆ ಸಚಿವರನ್ನ ಕರೆದು ಮಾಹಿತಿ ಪಡೆಯುವ ಹಕ್ಕು ಇದೆ. ಸರ್ಕಾರದಲ್ಲಿ ಸಿಎಂ ಜೊತೆಗೆ ಇದರ ಬಗ್ಗೆ ಚರ್ಚೆ ಮಾಡ್ತೇವೆ. ದಿನ ಪತ್ರ ಬರೆದು ಮಾಹಿತಿ ಕೇಳೋದು ಸಂವಿಧಾನ ವಿರೋಧವಾಗಿದೆ. ಈ ಸಂಬಂಧ ಸಿಎಂ ಜೊತೆ ಚರ್ಚೆ ಮಾಡುತ್ತೇವೆ. ಅನಿವಾರ್ಯತೆ ಇಲ್ಲದಿದ್ದರೆ ನಾವು ರಾಜ್ಯಪಾಲರಿಗೆ ಉತ್ತರ ಕೊಡಲ್ಲ. ಯಾವುದಕ್ಕೆ ಉತ್ತರ ಕೊಡಬೇಕೋ ಕೊಡುತ್ತೇವೆ. ಎಲ್ಲರಿಗೂ ಒಂದೇ ಮಾನದಂಡ. ಸಿದ್ದರಾಮಯ್ಯಗೆ ಒಂದು ಮಾನದಂಡ, ಕುಮಾರಸ್ವಾಮಿಗೆ ಒಂದು ಮಾನದಂಡ ಆಗಲ್ಲ. ನಾಲ್ಕೂ ಜನ ಮಂತ್ರಿ ಮಾಜಿ ಸಿಎಂಗಳ ದೂರಿಗೆ ರಾಜ್ಯಪಾಲರು ನೋಟಿಸ್ ಅನ್ನೇ ನೀಡಿಲ್ಲ ಎಂದರು.

# ವಿಧಾನಪರಿಷತ್ ಒಂದು ಸ್ಥಾನಕ್ಕೆ ಚುನಾವಣೆ ದಿನಾಂಕ ಘೋಷಣೆ

**ಬೆಂಗಳೂರು, ಸೆ.23:** ಕರ್ನಾಟಕದ ವಿಧಾನ ಪರಿಷತ್‌ನ ಒಂದು ಸ್ಥಾನವನ್ನು ಭರ್ತಿ ಮಾಡಲು ಕೇಂದ್ರ ಚುನಾವಣಾ ಆಯೋಗ ಉಪ ಚುನಾವಣೆಯ ದಿನಾಂಕವನ್ನು ಘೋಷಣೆ ಮಾಡಿದೆ. ಅಕ್ಟೋಬರ್ 21ರಂದು ಮತದಾನ ನಡೆಯಲಿದ್ದು, ಅಕ್ಟೋಬರ್ 24ರಂದು ಫಲಿತಾಂಶ ಪ್ರಕಟವಾಗಲಿದೆ. ಕೋಟ ಶ್ರೀನಿವಾಸ ಪೂಜಾರಿ ರಾಜೀನಾಮೆಯಿಂದ ಉಪ ಚುನಾವಣೆ ಎದುರಾಗಿದ್ದು, ಬಿಜೆಪಿ ಟಿಕೆಟ್‌ಗಾಗಿ ಪೈಪೋಟಿ ಜೋರಾಗಿದೆ. ವಿಧಾನ ಪರಿಷತ್ ಉಪ ಚುನಾವಣೆ ಘೋಷಣೆ ಹಿನ್ನಲೆಯಲ್ಲಿ ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಧ್ಯಕ್ಷತೆಯಲ್ಲಿ ಸೋಮವಾರ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ರಾಜ್ಯ ಕೋರ್ ಕಮಿಟಿಯ ಮಹತ್ವದ ಸಭೆ ನಡೆಯಿತು. ಅಭ್ಯರ್ಥಿ ಆಯ್ಕೆ ಸೇರಿದಂತೆ ವಿವಿಧ ವಿಚಾರದ ಕುರಿತು ಚರ್ಚಿಸಲಾಯಿತು.ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಪ್ರತಿಪಕ್ಷ ನಾಯಕ ಆರ್.ಅಶೋಕ, ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್, ಮಾಜಿ ಸಚಿವರಾದ ಡಾ. ಸಿ.ಎನ್. ಅಶ್ವತ್ಥನಾರಾಯಣ, ಸಿ. ಟಿ. ರವಿ ಸೇರಿದಂತೆ ಅನೇಕ ನಾಯಕರು ಪಾಲ್ಗೊಂಡಿದ್ದರು. ಅಭ್ಯರ್ಥಿ ಆಯ್ಕೆ ಕುರಿತು ಚರ್ಚಿಸಲಾಗಿದ್ದು, ಯಾರು ಅಭ್ಯರ್ಥಿ ಎಂದು ಇನ್ನೂ ಸಹ ಪಕ್ಷ ಘೋಷಣೆ ಮಾಡಿಲ್ಲ.

ಬಿಜೆಪಿ ಟಿಕೆಟ್‌ಗಾಗಿ ಪೈಪೋಟಿ: ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳಿಂದ ಪರಿಷತ್ ಸದಸ್ಯರನ್ನು ಆಯ್ಕೆ ಮಾಡಲು ಉಪ ಚುನಾವಣೆ ಘೋಷಣೆ ಮಾಡಲಾಗಿದೆ. ಸೆಪ್ಟೆಂಬರ್ 26ರಂದು ಉಪ ಚುನಾವಣೆಯ ಅಧಿಸೂಚನೆ ಪ್ರಕಟವಾಗಲಿದೆ. ನಾಮಪತ್ರ ಸಲ್ಲಿಕೆಗೆ ಅಕ್ಟೋಬರ್ 3 ಕೊನೆಯ ದಿನ. ಅಕ್ಟೋಬರ್ 4ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ನಾಮಪತ್ರ ವಾಪಸ್ ಪಡೆಯಲು ಅಕ್ಟೋಬರ್ 7 ಕೊನೆಯ ದಿನವಾಗಿದೆ. ಅಕ್ಟೋಬರ್ 21ರಂದು ಮತದಾನ ನಡೆಯಲಿದ್ದು, ಅಕ್ಟೋಬರ್ 24ರಂದು ಫಲಿತಾಂಶ ಪ್ರಕಟವಾಗಲಿದೆ. ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳಿಂದ ಪರಿಷತ್ ಸದಸ್ಯರನ್ನು ಆಯ್ಕೆ ಮಾಡಲು ಉಪ ಚುನಾವಣೆ ನಡೆಯಬೇಕಿದೆ. ಆದ್ದರಿಂದ ಕರಾವಳಿ ಆಗದ ನಾಯಕರಿಗೆ ಉಪ ಚುನಾವಣೆ ಟಿಕೆಟ್ ಸಿಗಲಿದೆ. ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್ ಹೆಸರು ಪ್ರಬಲವಾಗಿ ಕೇಳಿ ಬರುತ್ತಿದೆ. 2024ರ ಲೋಕಸಭೆ ಟಿಕೆಟ್ ನಳಿನ್ ಕುಮಾರ್ ಕಟೀಲ್ ಕೈತಪ್ಪಿತ್ತು. ಅವರನ್ನು ವಿಧಾನ ಪರಿಷತ್‌ಗೆ ಆಯ್ಕೆ ಮಾಡುವ ಮೂಲಕ ರಾಜ್ಯ ರಾಜಕೀಯಕ್ಕೆ ಕರೆತರಲಾಗುತ್ತದೆಯೇ ಎಂಬುದು ಕುತೂಹಲಕ್ಕೆ ಕಾರಣವಾಗಿದೆ.

# ಮೈಸೂರು ದಸರಾ: ಈ ಬಾರಿ 21 ದಿನಗಳ ಕಾಲ ವಿದ್ಯುತ್ ದೀಪಾಲಂಕಾರ



**ಮೈಸೂರು, ಸೆ.23:** ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವ ಹಿನ್ನೆಲೆಯಲ್ಲಿ ಈ ಬಾರಿ 21 ದಿನಗಳ ಕಾಲ ವಿದ್ಯುತ್ ದೀಪಾಲಂಕಾರ ಇರಲಿದೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ ಮಹದೇವಪ್ಪ ತಿಳಿಸಿದರು. ಮೈಸೂರಿನ ವಿಜಯನಗರದಲ್ಲಿರುವ ಚೆಸ್ಕಾಂನ ಪ್ರಧಾನ ಕಚೇರಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಅವರು ಮೈಸೂರು ದಸರಾ ದೀಪಾಲಂಕಾರ ಹಾಗೂ ಡ್ರೋನ್ ಪ್ರದರ್ಶನದ ಪೋಸ್ಟರ್ ಬಿಡುಗಡೆ ಮಾಡಿದರು.

ಈ ವೇಳೆ ಚೆಸ್ಕಾಂನ ಅಧ್ಯಕ್ಷ ಶಾಸಕ ರಮೇಶ್ ಬಂಡೀಸಿದ್ದೇಗೌಡ, ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ, ಚೆಸ್ಕಾಂ ಎಂ.ಡಿ ಶೀಲಾ, ತಾಂತ್ರಿಕ ವಿಭಾಗದ ನಿರ್ದೇಶಕ ಮುನಿಗೋಪಾಲ್ ರಾಜ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಪೋಸ್ಟರ್ ಬಿಡುಗಡೆ ಬಳಿಕ ಮಾತನಾಡಿದ ಸಚಿವ ಎಚ್.ಸಿ ಮಹದೇವಪ್ಪ, ಈ ಬಾರಿ 21ದಿನಗಳ ಕಾಲ ವಿದ್ಯುತ್ ದೀಪಾಲಂಕಾರ ಇರಲಿದೆ. ದಸರಾ ಮುಗಿದ ಬಳಿಕವೂ ಹತ್ತು ದಿನಗಳ ಕಾಲ ದೀಪಾಲಂಕಾರ ವಿಸ್ತರಣೆ ಮಾಡಲಾಗುತ್ತದೆ. ನಗರದ ಸುತ್ತಮುತ್ತ 130 ಕಿ.ಮೀ ವಿದ್ಯುತ್ ದೀಪಾಲಂಕಾರ ಮಾಡಲಾಗುತ್ತದೆ ಎಂದು ತಿಳಿಸಿದರು. ಬನ್ನಿಮಂಟಪದ ಪಂಜಿನ ಕವಾಯತು ಮೈದಾನದಲ್ಲಿ ಅಕ್ಟೋಬರ್ 6, 7, 11, 12 ರಂದು ಡ್ರೋನ್ ಶೋ ಆಯೋಜಿಸಲಾಗಿದೆ. ಜಂಬುಸವಾರಿ ಮೆರವಣಿಗೆಯಲ್ಲಿ ವಿದ್ಯುತ್ ರಥ ಸ್ತಬ್ಧಚಿತ್ರ ಮೆರವಣಿಗೆ ಇರಲಿದೆ. ನಗರದ ಪ್ರಮುಖ ವೃತ್ತಗಳಲ್ಲಿ ಪ್ರಜಾಪ್ರಭುತ್ವ ಸಾಗಿ ಬಂದ ಹಾದಿ, ತಾಯಿ ಭುವನೇಶ್ವರಿ, ಸೋಮನಾಥೇಶ್ವರ ದೇವಾಲಯ, ಸಂವಿಧಾನ ಪ್ರಸ್ತಾವನೆ, ಮೈಸೂರು ಅರಸರಾದ ಮುಮ್ಮಡಿ ಕೃಷ್ಣರಾಜ ಒಡೆಯರ್, ನಾಲ್ವಡಿ ಕೃಷ್ಣರಾಜ ಒಡೆಯರ್, ರಾಣಿ ಕೆಂಪನಂಜಮ್ಮಣಿ, ಜಯಚಾಮರಾಜೇಂದ್ರ ಒಡೆಯರ್, ಶ್ರೀಕಂಠದತ್ತ ನರಸಿಂಹ ರಾಜ ಒಡೆಯರ್ ಪ್ರತಿಕೃತಿಗಳ ನಿರ್ಮಾಣ ಮಾಡಲಾಗುತ್ತದೆ. ಈ ಬಾರಿಯ ದಸರಾಗೆ ವಿದ್ಯುತ್ ದೀಪಾಲಂಕಾರ ಮೆರಗು ನೀಡಲಿದೆ ಎಂದು ತಿಳಿಸಿದರು.

## ದಸರಾ ಚಲನಚಿತ್ರೋತ್ಸವ 2024- ಪೋಸ್ಟರ್ ಬಿಡುಗಡೆ




**ಮೈಸೂರು, ಸೆ.23:** ನಾಡ ಹಬ್ಬ ಮೈಸೂರು ದಸರಾ ಮಹೋತ್ಸವ ಹಿನ್ನೆಲೆಯಲಿ ಚಲನಚಿತ್ರೋತ್ಸವ ಪೋಸ್ಟರ್‌ಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ ಎಚ್.ಸಿ.ಮಹದೇವಪ್ಪ ಅವರು ಇಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಮಂಜೇಗೌಡ, ಮುಡಾ ಅಧ್ಯಕ್ಷ ಕೆ. ಮರಿಗೌಡ, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಜಿಪಂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಕೆ.ಎಂ. ಗಾಯತ್ರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ದಸರಾ ಮಹೋತ್ಸವ ಪ್ರಯುಕ್ತ ಅಕ್ಟೋಬರ್ 04 ರಿಂದ 10 ರವರೆಗೆ 7 ದಿನ ನಡೆಯಲಿರುವ ದಸರಾ ಚಲನ ಚಿತ್ರೋತ್ಸವದಲ್ಲಿ 112 ಸಿನಿಮಾಗಳು ಹುಣಸೂರು ರಸ್ತೆಯಲ್ಲಿರುವ ಡಿಆರ್‌ಸಿಯ ಒಂದು ಪರದೆ ಮತ್ತು ಮೈಸೂರಿನಲ್ಲಿರುವ ಐನಾಕ್ಸ್‌ನ ಮೂರು ಪರದೆಗಳಲ್ಲಿ ಪ್ರದರ್ಶನವಾಗಲಿವೆ.

## ರಾಜ್ಯಪಾಲರ ವಿರುದ್ಧ ಎಂ.ಬಿ.ಪಾಟೀಲ್ ಆರೋಪ



**ಬೆಂಗಳೂರು, ಸೆ.23:** ರಾಜ್ಯಪಾಲರು ಪದೇ ಪದೇ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯುತ್ತಿರುವ ವಿಚಾರವಾಗಿ ಪ್ರತಿಕ್ರಿಯಿಸಿರುವ ಸಚಿವ ಎಂ.ಬಿ.ಪಾಟೀಲ್, ರಾಜ್ಯದಲ್ಲಿ ಪೊಲೀಸ್ ಸ್ಟೇಷನ್, ತನಿಖಾ ಏಜೆನ್ಸಿಗಳೇ ಬೇಡ. ಎಲ್ಲವನ್ನೂ ರಾಜ್ಯಪಾಲರೇ ನೋಡಿಕೊಳ್ಳಿದ್ದಾರೆ ಎಂದು ಪೊಲೀಸರು, ತನಿಖಾ ಏಜೆನ್ಸಿಗಳು ಮಾಡಬೇಕಿರುವುದನ್ನು ರಾಜ್ಯಪಾಲರೇ ಮಾಡುತ್ತಿದ್ದಾರೆ. ಅವರು ಎಷ್ಟಾದರೂ ಪತ್ರ ಬರೆಯಲಿ ಬಿಡಿ. ನಾವು ನೋಡಿಕೊಳ್ಳುತ್ತೇವೆ ಎಂದರು. ಬಿಜೆಪಿಯವರನ್ನು ನಾವು ಟಾರ್ಗೆಟ್ ಮಾಡುತ್ತಿಲ್ಲ. ಅವರು ರಾಜ್ಯಪಾಲರನ್ನು, ರಾಜ್ಯಪಾಲರ ಕಚೇರಿಯನು ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ. ಸರ್ಕಾರಕ್ಕೆ ಪತ್ರ ಬರೆದರೆ ಅದನ್ನು ಸಿಎಂ ಹಾಗೂ ಸಚಿವ ಸಂಪುಟದಲ್ಲಿ ಇದರ ಬಗ್ಗೆ ನಿರ್ಧಾರ ಕೈಗೊಳ್ಳಲಾಗುತ್ತದೆ. ಮಾಹಿತಿ ಸೋರಿಕೆ ರಾಜ್ಯಪಾಲರ ಕಚೇರಿಂದಲೇ ಆಗುತ್ತಿದೆ. ಬೇಕು ಅಂತಲೇ ಸೋರಿಕೆ ಮಾಡಿರಬಹುದು ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಬ್ಯಾಂಕ್ ನಿವೃತ್ತರ ವೇತನದಲ್ಲಿ ತಾರತಮ್ಯ: ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ – ಫ್ರೀಡಂಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ




**ಬೆಂಗಳೂರು, ಸೆ..23:** ನಿವೃತ್ತರ ವೇತನದ ತಾರಮ್ಯವನ್ನು ನಿವಾರಿಸಲು ವಿಫಲವಾಗಿರುವ ಕೇಂದ್ರ ಸರ್ಕಾರದ ವಿರುದ್ಧ ಬ್ಯಾಂಕ್ ನಿವೃತ್ತಿ ವೇತನದಾರರು ಮತ್ತು ನಿವೃತ್ತಿ ಸಂಸ್ಥೆಗಳ ಸಮನ್ವಯ ಸಮಿತಿಯಿಂದ ನಗರದ ಫ್ರೀಡಂ ಪಾರ್ಕ್ ನಲ್ಲಿಂದು ಬೃಹತ್ ಪ್ರತಿಭಟನೆ ನಡೆಯಿತು.

ಪ್ರತಿಭಟನಾಕಾರರನ್ನುದ್ದೇಶಿಸಿ ಮಾತನಾಡಿದ ಸಂಘಟನೆ ರಾಷ್ಟ್ರೀಯ ಅಧ್ಯಕ್ಷ ಹಾಗೂ ಸಿಬಿಪಿಆರ್.ಓ ಜಂಟಿ ಸಂಚಾಲಕರಾದ ಕೆ. ವೇದವ್ಯಾಸ ಆಚಾರ್ಯ ಎಐಬಿಪಿಆರ್‌ಸಿ ಸಲಹೆಗಾರ ಜಿ.ಡಿ ನದಾಫ್, ಸಿಬಿಪಿಆರ್‌ಓ ನ ಪದಾಧಿಕಾರಿಗಳಾದ ದತ್ತಾತ್ರಿ ನಾಡಿಗೇರ್, ಎಸ್.ಪಿ ರಾವ್, ಸಿ. ಶಿವಪ್ರಕಾಶ್, ಎಸ್. ನಾಗರಾಜ, ನಾಗದಡ್ಡಾಯುದಮ್, ಶಿವರಾಮ್ ಆಳ್ವ, ಜೆ.ಎಸ್ ಜಗದೀಶ್, ಹಾಗೂ ಸಿಬಿಪಿಆರ್‌ಓ ರಾಜ್ಯ ಘಟಕದ ಸಂಚಾಲಕರಾದ ಎ.ಎನ್. ಕೃಷ್ಣಮೂರ್ತಿ ಅವರು ಭಾಗವಹಿಸಿ ಕೇಂದ್ರ ಸರ್ಕಾರ ವೇತನ ಆಯೋಗದ ವರದಿಯನ್ನು ಅನುಷ್ಠಾನಗೊಳಿಸಿದ ಸಂದರ್ಭಗಳಲ್ಲಿ ಪಿಂಚಣಿದಾರರಿಗೆ ಅನ್ಯಾಯವಾಗುತ್ತಿದೆ. ನಿವೃತ್ತರ ಪಿಂಚಣಿಯನ್ನು ಇಲ್ಲಿಯವರೆಗೆ ನವೀಕರಿಸಿಲ್ಲ. ಮೂಲ ಪಿಂಚಣಿಯನ್ನು ಆಯಾ ಬ್ಯಾಂಕ್ ನಿವೃತ್ತರು ನಿವೃತ್ತರಾದ ದಿನಾಂಕದಿಂದ ಸ್ಥಗಿತಗೊಳಿಸಲಾಗಿದೆ. ಬ್ಯಾಂಕ್ ಆಡಳಿತ ಮಂಡಳಿ ಒಕ್ಕೂಟವಾದ ಭಾರತೀಯ ಬ್ಯಾಂಕುಗಳ ಸಂಘವು, ಬ್ಯಾಂಕ್ ನಿವೃತ್ತರ ನ್ಯಾಯಯುತ ಮತ್ತು ನ್ಯಾಯಯುತ ಬೇಡಿಕೆಗಳನ್ನು ಪರಿಗಣಿಸಲು ನಿರಾಕರಿಸುತ್ತಿದೆ. ಕೇಂದ್ರ ಸರ್ಕಾರ ಕೂಡ ದಿವ್ಯ ಮೌನ ವಹಿಸಿದೆ ಎಐಬಿಪಿಆರ್‌ಸಿ ರಾಜ್ಯ ಘಟಕ ಅಧ್ಯಕ್ಷರಾದ ಎಂ.ಆರ್. ಗೋಪಿನಾಥ್ ರಾವ್ ಅವರು ಹೇಳಿದರು.

ಉದ್ಯೋಗಗಳು ಮತ್ತು ಹಿರಿಯ ನಾಗರಿಕರಿಗೆ ಕೈಗೆಟುಕುವ ಆರೋಗ್ಯ ವಿಮೆ ನೀತಿಯನ್ನು ಜಾರಿ ಮಾಡಬೇಕು. ಆರೋಗ್ಯ ವಿಮೆ ಕಂತಿಗೆ ಜಿ.ಎಸ್.ಟಿ ಹೆಚ್ಚಿಸಿರುವುದರಿಂದ ಭಾರೀ ಅನ್ಯಾವಾಗುತ್ತಿದ್ದು, ನಿವೃತ್ತರಿಗೆ ಜಿಎಸ್ಟಿ ವಿನಾಯಿತಿ ನೀಡಬೇಕು. ವೇತನ ಮತ್ತು ಗ್ರಾಚ್ಯುಟಿ ಲೆಕ್ಕಾಚಾರಕ್ಕಾಗಿ ವಿಶೇಷ ಭತ್ಯೆಯನ್ನು ಪರಿಗಣಿಸಬೇಕು. ಬ್ಯಾಂಕ್ ಪಿಂಚಣಿದಾರರು ಮತ್ತು ನಿವೃತ್ತ ಸಂಸ್ಥೆಗಳೊಂದಿಗೆ ಸಮಾಲೋಚನೆ ನಡೆಸಬೇಕು ಎಂದು ಆಗ್ರಹಿಸಿದರು.

# ಸಿದ್ದಗಂಗಾ ಶಾಲೆಯಲ್ಲಿ ಮೂರು ದಿನಗಳ ಖೋ ಖೋ ಪಂದ್ಯಾವಳಿ

**ಬೆಂಗಳೂರು, ಸೆ.23;** ಬೆಂಗಳೂರಿನ ಚಂದ್ರಲೇಔಟ್‌ನಲ್ಲಿ ಶ್ರೀ ಸಿದ್ದಗಂಗಾ ಹೈಯ್ಯರ್ ಪ್ರೈಮರಿ ಸ್ಕೂಲ್ ಮತ್ತು ಸಿಬಿಎಸ್‌ಸಿ ವಲಯ 8ರ ಖೋ ಖೋ ಪಂದ್ಯಾವಳಿಯನ್ನು ಸಿದ್ದಗಂಗಾ ಶಿವಕುಮಾರ ಸ್ವಾಮೀಜಿ ವಿದ್ಯಾಪೀಠ ಟ್ರಸ್ಟ್‌ನ ಸಹಯೋಗದಲ್ಲಿ ಆಯೋಜಿಸಲಾಗಿದೆ ಮೂರು ದಿನಗಳ ಸಿಬಿಎಸ್‌ಸಿ ವಲಯ ಮಟ್ಟದ ಕೋಕ್ಕೊ ಪಂದ್ಯಾವಳಿ ಆರಂಭವಾಗಿದೆ.

136 ಶಾಲೆಗಳ 290 ತಂಡಗಳ 3,800 ಕ್ಕೂ ಅಧಿಕ ಕೋ ಕೋ ಆಟಗಾರರು ಪಂದ್ಯಾವಳಿಯಲ್ಲಿ ಭಾಗವಹಿಸಿದ್ದಾರೆ.

ಕ್ರೀಡಾಕೂಟಕ್ಕೆ ರಾಮನಗರ ಜಿಲ್ಲಾಧಿಕಾರಿ ಯಶವಂತ ವಿ. ಗುರುಕಾರ್ ಚಾಲನೆ ನೀಡಿ ಮಾತನಾಡಿ, ಖೋ ಖೋ ಕ್ರೀಡೆ ಜೀವನದಲ್ಲಿ ಚುರುಕುತನ ಹೆಚ್ಚಿಸಲು ಸಹಕಾರಿಯಾಗಲಿದೆ. ಬದುಕಿನಲ್ಲಿ ಯಶಸ್ಸು ಗಳಿಸಲು ಇದು ಪೂರಕವಾದ ಕ್ರೀಡೆ ಎಂದು ತಿಳಿಸಿದರು.

ಸಿಬಿಎಸ್‌ಇ ಪ್ರಾದೇಶಿಕ ಕಛೇರಿಯ ಅಧೀನ ಕಾರ್ಯದರ್ಶಿ ಅನಿತಾ ಜೆ. ಸಸ್ವನ್, ಅಂತರಾಷ್ಟ್ರೀಯ ಕ್ರೀಡಾಪಟು ಕುಮಾರಿ ಅಶ್ವಿನಿ ಆಕ್ಕುಂಜಿ ಸದಾನಂದ ಮತ್ತಿತರರು ಉಪಸ್ಥಿತರಿದ್ದರು.

ಸಿದ್ದಗಂಗಾ ಶ್ರೀ ಶಿವಕುಮಾರ ಸ್ವಾಮೀಜಿ ವಿದ್ಯಾಪೀಠ ಟ್ರಸ್ಟ್‌ನ ಅಧ್ಯಕ್ಷ ಎಲ್.ರೇವಣಸಿದ್ಧಯ್ಯ (ನಿವೃತ್ತ ಐಪಿಎಸ್) ಕಾರ್ಯದರ್ಶಿ ಬಿ. ಎನ್.ಚೆನ್ನಪ್ಪ, ಜಂಟಿ ಕಾರ್ಯದರ್ಶಿ ಎಸ್ ಮೃತ್ಯುಂಜಯ ಖಜಾಂಚಿ ಡಾ.ಆರ್. ಲೋಕಪ್ರಕಾಶ್, ಶೈಕ್ಷಣಿಕ ಸಲಹೆಗಾರ ಟಿ. ಎಸ್. ತುಳಸಿಕುಮಾರ್ ಮತ್ತು ಪ್ರಾಂಶುಪಾಲರಾದ ಹಂಸ ಟಿ.ಎಮ್. ಉಪಸ್ಥಿತರಿದ್ದರು

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

### 297 ಪುರಾತನ ವಸ್ತುಗಳನ್ನು ಭಾರತಕ್ಕೆ ಹಸ್ತಾಂತರಿಸಿದ ಬೈಡನ್ ಆಡಳಿತ

## ಕಳ್ಳಸಾಗಣೆಯಾಗಿದ್ದ ಪ್ರಾಚೀನ ಕಲಾಕೃತಿಗಳನ್ನು ಮರಳಿಸಿದ ಅಮೆರಿಕ

**ವಾಷಿಂಗ್ಟನ್, ಸೆ. 23 :** ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕ ಭೇಟಿ ನೀಡಿರುವುದರಿಂದ ಭಾರತದ ಸಾಂಸ್ಕೃತಿಕ ಶ್ರೀಮಂತಿಕೆಯ ಕಳ್ಳಸಾಗಣೆ ವಿರುದ್ಧವೂ ಜಯ ಸಾಧಿಸಿದೆ. ಕಳ್ಳಸಾಗಣೆ ಮಾಡಲಾಗಿದ್ದ 297 ಪುರಾತನ ವಸ್ತುಗಳನ್ನು ಅಮೆರಿಕ ಸರ್ಕಾರ ಭಾರತಕ್ಕೆ ಹಸ್ತಾಂತರಿಸಿದೆ. ಸಾಂಸ್ಕೃತಿಕ ಆಸ್ತಿಗಳ ಕಳ್ಳಸಾಗಣೆ ದೀರ್ಘಕಾಲದ ಸಮಸ್ಯೆಯಾಗಿದ್ದು, ಇದು ಇತಿಹಾಸದುದ್ದಕ್ಕೂ ಅನೇಕ ಸಂಸ್ಕೃತಿಗಳು ಮತ್ತು ದೇಶಗಳ ಮೇಲೆ ಪರಿಣಾಮ ಬೀರಿದೆ. ಇದರಿಂದಾಗಿ ಭಾರತಕ್ಕೆ ಹೊಡೆತ ಬಿದ್ದಿದೆ.



ಸಾಂಸ್ಕೃತಿಕ ಸಂಪರ್ಕವನ್ನು ಆಳಗೊಳಿಸುವುದು ಮತ್ತು ಸಾಂಸ್ಕೃತಿಕ ಆಸ್ತಿಗಳ ಅಕ್ರಮ ಕಳ್ಳಸಾಗಣೆ ವಿರುದ್ಧದ ಹೋರಾಟವನ್ನು ಬಲಪಡಿಸುವುದಕ್ಕಾಗಿ 297 ಅಮೂಲ್ಯ ಪ್ರಾಚೀನ ವಸ್ತುಗಳನ್ನು ಭಾರತಕ್ಕೆ ಹಿಂದಿರುಗಿಸಿದ್ದಕ್ಕಾಗಿ ಅಧ್ಯಕ್ಷ ಜೋ ಬೈಡನ್ ಮತ್ತು ಅಮೆರಿಕ ಸರ್ಕಾರಕ್ಕೆ ಕೃತಜ್ಞನಾಗಿದ್ದೇನೆ ಎಂದು ಮೋದಿ ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ.

2014 ರಿಂದ ಭಾರತವು ಮರಳಿ ಪಡೆದ ಒಟ್ಟು ಪ್ರಾಚೀನ ವಸ್ತುಗಳ ಸಂಖ್ಯೆ 640 ಕ್ಕೆ ಏರಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಯುಎಸ್ನಿಂದ 578 ಪುರಾತನ ವಸ್ತುಗಳು ಭಾರತಕ್ಕೆ ಮರಳಿವೆ. ಭಾರತಕ್ಕೆ ಹಸ್ತಾಂತರಿಸಲಾದ ಕೆಲವು ಗಮನಾರ್ಹ ಪ್ರಾಚೀನ ವಸ್ತುಗಳಲ್ಲಿ ಕ್ರಿ.ಶ 10–11 ನೇ ಶತಮಾನಕ್ಕೆ ಸೇರಿದ ಮಧ್ಯ ಭಾರತದ ಮರಳುಗಲ್ಲಿನ ಅಪ್ಸರೆ, ಕ್ರಿ.ಶ 15–16 ನೇ ಶತಮಾನಕ್ಕೆ ಸೇರಿದ ಕಂಚಿನ ಜೈನ ತೀರ್ಥಂಕರ, ಕ್ರಿ.ಶ 3–4 ನೇ ಶತಮಾನಕ್ಕೆ ಸೇರಿದ ಪೂರ್ವ ಭಾರತದ ಟೆರಾಕೋಟಾ ಹೂದಾನಿ ಮತ್ತು ಕ್ರಿ.ಪೂ 1 ರಿಂದ 1 ನೇ ಶತಮಾನಕ್ಕೆ ಸೇರಿದ ದಕ್ಷಿಣ ಭಾರತದ ಕಲ್ಲಿನ ಶಿಲ್ಪ ಸೇರಿವೆ.

ಭಾರತಕ್ಕೆ ಹಿಂತಿರುಗಿಸಲಾದ ಕೆಲವು ಪುರಾತನ ವಸ್ತುಗಳಲ್ಲಿ 17–18 ನೇ ಶತಮಾನಕ್ಕೆ ಸೇರಿದ ದಕ್ಷಿಣ ಭಾರತದ ಕಂಚಿನ ಗಣೇಶ, ಕ್ರಿ.ಶ 15–16 ನೇ ಶತಮಾನದ ಉತ್ತರ ಭಾರತದ ಮರಳುಗಲ್ಲಿನ ಕೆತ್ತಲಾದ ನಿಂತಿರುವ ಬುದ್ಧ, ಕ್ರಿ.ಶ 17–18 ನೇ ಶತಮಾನಕ್ಕೆ ಸೇರಿದ ಪೂರ್ವ ಭಾರತದ ಕಂಚಿನ ವಿಷ್ಣು ಇತರ ಪ್ರಮುಖ ವಸ್ತುಗಳಲ್ಲಿ ಸೇರಿವೆ.

2021 ರಲ್ಲಿ ಮೋದಿ ಅಮೆರಿಕಾಗೆ ಭೇಟಿ ಕೊಟ್ಟಾಗ, 12 ನೇ ಶತಮಾನದ ಸುಂದರವಾದ ಕಂಚಿನ ನಟರಾಜ ಪ್ರತಿಮೆ ಸೇರಿ ಸುಮಾರು 157 ಪ್ರಾಚೀನ ವಸ್ತುಗಳನ್ನು ಭಾರತಕ್ಕೆ ಹಸ್ತಾಂತರಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. 2023 ರಲ್ಲಿ ಅವರ ಯುಎಸ್ ಭೇಟಿಯ ಕೆಲ ದಿನಗಳ ನಂತರ, 105 ಪ್ರಾಚೀನ ವಸ್ತುಗಳನ್ನು ಭಾರತಕ್ಕೆ ಹಿಂದಿರುಗಿಸಿದೆ. ಆಸ್ಟ್ರೇಲಿಯಾದಿಂದ 40, ಯುಕೆಯಿಂದ 16 ಕಲಾಕೃತಿಗಳನ್ನು ಮರಳಿ ಪಡೆಯಲಾಗಿದೆ. 2004 ಮತ್ತು 2013 ರ ಅಂತರದಲ್ಲಿ ಕೇವಲ ಒಂದು ಕಲಾಕೃತಿಯನ್ನಷ್ಟೇ ಭಾರತಕ್ಕೆ ಮರಳಿ ತರಲಾಗಿತ್ತು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.





ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ನೀತಿಯನ್ನು ವಿರೋಧಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ (ಜೆಸಿಟಿಯು) ಸದಸ್ಯರು ಸೋಮವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

### ಆಪತ್ಕಾಲಯಾನ ಸೇವೆಯಡಿ ನೂತನ 45 ಆ್ಯಂಬುಲೆನ್ಸ್‌ಗಳ ಲೋಕಾರ್ಪಣೆ

## ಸಂಚಾರಿ ನಿಯಮ ಉಲ್ಲಂಘಿಸುವವರ ಪರವಾನಗಿ ರದ್ದು

**ಬೆಂಗಳೂರು, ಸೆ.23–** ಸಂಚಾರಿ ನಿಯಮಗಳನ್ನು ಉಲ್ಲಂಘಿಸುವವರಿಗೆ ಇನ್ನು ಮುಂದೆ ನೋಟಿಸ್ ನೀಡುವ ಬದಲು ಚಾಲನಾ ಪರವಾನಗಿಯನ್ನೇ ರದ್ದು ಮಾಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.ವಿಧಾನಸೌಧದ ಮುಂಭಾಗದ ಮೆಟ್ಟಿಲುಗಳ ಮೇಲೆ ಮುಖ್ಯಮಂತ್ರಿಗಳ ಆಪತ್ಕಾಲಯಾನ ಸೇವೆ ಅಡಿಯಲ್ಲಿ ನೂತನವಾಗಿ 45 ಆ್ಯಂಬುಲೆನ್ಸ್‌ಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಸರ್ಕಾರ ಎಷ್ಟೇ ಪ್ರಯತ್ನ ಮಾಡಿದರೂ ಜನಸಾಮಾನ್ಯರು ಹಾಗೂ ವಾಹನ ಸವಾರರು ನಿಯಮಗಳನ್ನು ಪಾಲನೆ ಮಾಡದೇ ಇದ್ದರೆ ಅಪಘಾತಗಳನ್ನು ಕಡಿಮೆ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರು. ಅಪಘಾತದಂತಹ ಸಂದರ್ಭದಲ್ಲಿ ಯುವಕರು ಹಾಗೂ ವಿದ್ಯಾರ್ಥಿಗಳ ಜೀವಹಾನಿಯಾದರೆ ಮುಂದೆ ಅವರಿಂದ ದೇಶಕ್ಕೆ ದೊರೆಯಬಹುದಾದ ಸೇವೆಗಳು ಇಲ್ಲವಾಗುತ್ತವೆ. ಕುಟುಂಬಗಳು ಸಂಕಷ್ಟಕ್ಕೆ ಸಿಲುಕುತ್ತವೆ. ಗಾಯಾಳುಗಳಾದಾಗ ಜೀವನವೇ ತೊಂದರೆಗೊಳಗಾಗುತ್ತದೆ ಎಂದು ಹೇಳಿದರು. ರಾಜ್ಯದಲ್ಲಿ ಪ್ರತಿವರ್ಷ 40 ಸಾವಿರ ಅಪಘಾತಗಳಾಗುತ್ತಿವೆ. ಅದರಲ್ಲಿ 9 ರಿಂದ 10 ಸಾವಿರ ಜನ ಜೀವ ಕಳೆದುಕೊಳ್ಳುತ್ತಿದ್ದಾರೆ. ಅಪಘಾತಗಳನ್ನು ತಗ್ಗಿಸಲು 2017 ರಲ್ಲಿ ರಸ್ತೆ ಸುರಕ್ಷತಾ ಪ್ರಾಧಿಕಾರ ರಚನೆಯಾಗಿದೆ. ಅದರಲ್ಲಿ ಸಂಗ್ರಹಿಸಲಾಗುವ ನಿಧಿಯಲ್ಲಿ 45 ಕೋಟಿ ರೂ.ಗಳನ್ನು ಆರೋಗ್ಯ ಇಲಾಖೆಗೆ ನೀಡಲಾಗಿದ್ದು, ಇದರಿಂದ 65 ಹೊಸ ಆ್ಯಂಬುಲೆನ್ಸ್‌ಗಳನ್ನು ಖರೀದಿಸಲಾಗಿದೆ ಎಂದರು.



ಸಾರಿಗೆ ಇಲಾಖೆ ಸಹಕಾರದೊಂದಿಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ರೋಡ್ ಸುರಕ್ಷತೆ ನಿಧಿಯಡಿ ಯೋಜನೆ ಜಾರಿಗೆ ತರುವಲ್ಲಿ ಯಶಸ್ವಿಯಾಗಿದ್ದು, ಮೊದಲ ಹಂತದಲ್ಲಿ 65 ಆ್ಯಂಬುಲೆನ್ಸ್‌ಗಳನ್ನು ಸರ್ಕಾರಿ ಆಸ್ಪತ್ರೆಗಳಿಗೆ ಒದಗಿಸಿಕೊಟ್ಟಿದ್ದಾರೆ. ಅಪಘಾತಕ್ಕೀಡಾದವರಿಗೆ ಆಪದ್ಬಾಂಧವನ ರೀತಿಯಲ್ಲಿ ಕಾರ್ಯನಿರ್ವಹಿಸಲಿರುವ ಈ ಆ್ಯಂಬುಲೆನ್ಸ್‌ಗಳಲ್ಲಿ 26 ಅಡ್ವಾನ್ಸ್ ಲೈಫ್ ಸಪೋರ್ಟ್ ತಂತ್ರಜ್ಞಾನವನ್ನ ಅಳವಡಿಸಲಾಗಿದೆ. 39 BLS ಆ್ಯಂಬುಲೆನ್ಸ್‌ಗಳಿವೆ. ರಸ್ತೆ ಸಂಚಾರದಲ್ಲಿ ಹೆಚ್ಚು ಅಪಘಾತ ಸಂಭವಿಸುವ 65 ಬ್ಲಾಕ್‌ಸ್ಪಾಟ್‌ಗಳನ್ನು ಗುರುತಿಸಿದ್ದು, ಅಂಥಹ ಸ್ಥಳಗಳ ಹತ್ತಿರದಲ್ಲಿರುವ ತಾಲೂಕು ಹಾಗೂ ಜಿಲ್ಲಾಸ್ಪತ್ರೆಗಳಿಗೆ ಈ ಆ್ಯಂಬುಲೆನ್ಸ್‌ಗಳನ್ನು ನೀಡಲಾಗಿದೆ.

ಅಪಘಾತಗಳಾದ ಸಂದರ್ಭದಲ್ಲಿ ಸುವರ್ಣ ಸಮಯ ಎಂದು ಹೇಳಲಾಗುವ ಒಂದು ಗಂಟೆಯಲ್ಲಿ ಚಿಕಿತ್ಸೆ ದೊರೆತರೆ ಜೀವರಕ್ಷಣೆ ಸಾಧ್ಯವಾಗುತ್ತದೆ. ಅದಕ್ಕಾಗಿ ಇಂದು ಲೋಕಾರ್ಪಣೆಗೊಂಡ ಆ್ಯಂಬುಲೆನ್ಸ್‌ಗಳ ಪೈಕಿ 30 ರಲ್ಲಿ ಜೀವರಕ್ಷಕ ಸಲಕರಣೆಗಳ ಜೊತೆಗೆ ವೆಂಟಿಲೇಟರ್, ಔಷಧಿ ಹಾಗೂ ತಂತ್ರಜ್ಞ ಸಿಬ್ಬಂದಿಗಳು ಇರಲಿದ್ದು, ಜೀವರಕ್ಷಣೆಗೆ ಶ್ರಮಿಸಲಿದ್ದಾರೆ. ಹತ್ತಿರದ ತಾಲ್ಲೂಕು ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಅಗತ್ಯವಿದ್ದರೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಕರೆದೊಯ್ದು ಜೀವರಕ್ಷಣೆ ಮಾಡುವ ಪ್ರಯತ್ನಗಳಾಗುತ್ತವೆ ಎಂದರು.

ಹೆಚ್ಚಿನ ಆ್ಯಂಬುಲೆನ್ಸ್‌ಗಳ ಸೇವೆಗೆ ಸಾರಿಗೆ ಇಲಾಖೆಯಿಂದ ಅಗತ್ಯ ಸಹಕಾರ ನೀಡಲು ಸಿದ್ಧ ಎಂಬುದಾಗಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

ಸಂಚಾರ ನಿಯಮಗಳನ್ನು ಪಾಲನೆ ಮಾಡಿದರೆ ಅಪಘಾತಗಳು ಕಡಿಮೆಯಾಗುತ್ತವೆ. ಕುಡಿದು ವಾಹನ ಓಡಿಸಬೇಡಿ ಎಂದರೆ ನಾಮಫಲಕ ನೋಡಿಯೇ ವಾಹನ ಚಲಾಯಿಸುತ್ತಾರೆ. ಇಲ್ಲಿ ಮೂತ್ರವಿಸರ್ಜನೆ ಮಾಡಬೇಡಿ ಎಂದು ಬೋರ್ಡ್ ಇದ್ದರೆ ನಿಷೇಧಿತ ಕೆಲಸವನ್ನು ಅಲ್ಲಿಯೇ ಮಾಡಿ ಸಬೂಬು ಹೇಳುತ್ತಾರೆ. ಈ ರೀತಿಯ ಧೋರಣೆಗಳನ್ನು ಜನರು ಬಿಟ್ಟು ಬದಲಾಗಬೇಕು. ನಿಯಮ ಪಾಲನೆ ಪ್ರತಿಯೊಬ್ಬರ ಜವಾಬ್ದಾರಿ. ವಾಹನಗಳನ್ನು ಸುರಕ್ಷಿತಾ ಸ್ಥಿತಿಯಲ್ಲಿಟ್ಟು ಕೊಂಡಿರಬೇಕು.

ನನಗೆ ಡ್ರೈವಿಂಗ್ ಬರುವುದಿಲ್ಲ, ತುಂಬಾ ಜನ ಫೋನಿನಲ್ಲಿ ಮಾತನಾಡುತ್ತಲೇ ವಾಹನ ಚಲಾವಣೆ ಮಾಡುವುದನ್ನು ನೋಡಿದ್ದೇನೆ. ವೇಗಮಿತಿ 80 ಕಿ.ಮೀ. ಇದ್ದರೆ 120 ಕಿ.ಮೀ. ವೇಗದಲ್ಲಿ ಗಾಡಿ ಓಡಿಸುತ್ತಾರೆ ಎಂದು ಹೇಳಿದರು.ಸಂಚಾರ ನಿಯಮಗಳನ್ನು ಉಲ್ಲಂಘನೆ ಮಾಡಿದರೆ ಚಾಲನಾ ಪರವಾನಗಿ ರದ್ದು ಮಾಡುವ ವ್ಯವಸ್ಥೆ ವಿದೇಶದಲ್ಲಿದೆ. ನಮ್ಮಲ್ಲೂ ಅದೇ ಪದ್ಧತಿಯನ್ನು ಪಾಲನೆ ಮಾಡಿ. ನೋಟಿಸ್ ಕೊಡುವುದು ಬೇಡ. ನೇರವಾಗಿ ಪರವಾನಗಿ ರದ್ದು ಮಾಡಿ, ತಪ್ಪು ಮಾಡಿದವರು ಕೋರ್ಟ್‌ಗೆ ಹೋಗಲಿ ಎಂದು ಸೂಚನೆ ನೀಡಿದರು. ಕೊಲೆ ಮಾಡಿದರೆ ಜೀವಾವಧಿ ಶಿಕ್ಷೆಯಾಗುತ್ತದೆ ಎಂದು ಗೊತ್ತಿದ್ದೂ ಹತ್ಯೆ ಮಾಡುತ್ತಾರೆ. ಜೈಲಿಗೆ ಹೋದರೂ ಪರವಾಗಿಲ್ಲ. ನಿನ್ನನ್ನು ಮುಗಿಸುತ್ತೇನೆ ಎಂದು ಧಮ್ಕಿ ಹಾಕವುದು ಕಂಡುಬರುತ್ತಿದೆ. ಇದು ಸರಿಯಲ್ಲ ಎಂದು ಹೇಳಿದರು. ಸಚಿವ ರಾಮಲಿಂಗಾರೆಡ್ಡಿ, ದಿನೇಶ್‌ಗುಂಡೂರಾವ್, ಶಾಸಕ ರೂಪಕಲಾ, ನಾಗರಾಜ್ ಯಾದವ್ ಮತ್ತಿತರರು ಉಪಸ್ಥಿತರಿದ್ದರು.

## ಧಾರವಾಡ ಕೃಷಿ ವಿ.ವಿ. ಕೃಷಿಮೇಳಕ್ಕೆ ಚಾಲನೆ

**ಧಾರವಾಡ, ಸೆ. 23 :** ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ 2024ನೇ ಸಾಲಿನ ಕೃಷಿಮೇಳಕ್ಕೆ ಚಾಲನೆ ಸಿಕ್ಕಿದೆ. ಸಾವಿರಾರು ರೈತರು ಮೇಳಕ್ಕೆ ಆಗಮಿಸುತ್ತಿದ್ದು, ಕೃಷಿ ಕ್ಷೇತ್ರದ ಹೊಸ ಹೊಸ ಸಂಶೋಧನೆ, ಹೊಸ ಯಂತ್ರೋಪಕರಣಗಳ ಬಗ್ಗೆ ಮಾಹಿತಿಯನ್ನು ಪಡೆಯುತ್ತಿದ್ದಾರೆ. ಕಾರ್ಮಿಕ ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಕೃಷಿಮೇಳಕ್ಕೆ ಚಾಲನೆ ನೀಡಿ, ಉತ್ತಮ ಕೃಷಿಕರಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ಸಚಿವ ಸಂತೋಷ್ ಲಾಡ್ ಮಾತನಾಡಿದ ಅವರು, ಕೃಷಿಯಲ್ಲಿ ಆಧುನಿಕ ತಂತ್ರಜ್ಞಾನ ಹಾಗೂ ಸಂಶೋಧನೆಗಳು ವೇಗವಾಗಿ ಬಳಕೆಯಾಗುತ್ತಿದ್ದರೂ ನಮ್ಮ ದೇಶ ಹಾಗೂ ರಾಜ್ಯದ ಕೃಷಿ ಇಳುವರಿ ಇತರೇ ದೇಶಗಳಿಗೆ ಹೋಲಿಸಿದರೆ ನಿಗದಿತ ಪ್ರಮಾಣದಲ್ಲಿ ಏರಿಕೆಯಾಗದೆ ಇರುವ ಬಗ್ಗೆ ಕೃಷಿ ವಿಜ್ಞಾನಿಗಳು ಆತ್ಮಾವಲೋಕನ ಮಾಡಿಕೊಳ್ಳಬೇಕು" ಎಂದು ಸಲಹೆ ನೀಡಿದರು.ಕೃಷಿ, ವಿಶ್ವವಿದ್ಯಾಲಯದ ಸಂಶೋಧನೆಗಳು ರೈತರಿಗೆ ಅನುಕೂಲ ವಾಗುವಂತೆ, ಕೃಷಿ ವಿಜ್ಞಾನಿಗಳು ರೈತರ ಕ್ಷೇತ್ರಕ್ಕೆ ತೆರಳಿ ಸಮಸ್ಯೆ ಆಲಿಸಿ ಪರಿಹಾರ ನೀಡಬೇಕು. ಧಾರವಾಡ ಜಿಲ್ಲೆಯಲ್ಲಿ ಕೃಷಿ ಸಮಸ್ಯೆಗಳ ಹಾಗೂ ಪರಿಹಾರಗಳ ಬಗ್ಗೆ ಜಿಲ್ಲಾಡಳಿತದ ಜೊತೆ ಆಗಾಗ ಚರ್ಚಿಸಬೇಕು. ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆಗಳು ಜೊತೆಗೂಡಿ ಸಹಕಾರದಿಂದ ಕೆಲಸ ಮಾಡಬೇಕು ಎಂದು ಸಚಿವರು ಕರೆ ನೀಡಿದರು.

**ಅಧ್ಯಯನ ನಡೆಸಿ, ವರದಿ ನೀಡಬೇಕು:** ಸಚಿವ ಸಂತೋಷ್ ಲಾಡ್, ದೇಶದಲ್ಲಿ 150 ಮಿಲಿಯನ್ ಹೆಕ್ಟೇರ್ ಕೃಷಿ ಮಾಡಲಾಗುತ್ತಿದೆ. ಈ ಪೈಕಿ 40 ಸಾವಿರ ಮಿಲಿಯನ್ ಹೆಕ್ಟೇರ್‌ನಲ್ಲಿ ಭತ್ತ, 30 ಸಾವಿರ ಮಿಲಿಯನ್ ಹೆಕ್ಟೇರ್‌ನಲ್ಲಿ ಗೋದಿ, 20 ಸಾವಿರ ಮಿಲಿಯನ್ ಹೆಕ್ಟೇರ್‌ನಲ್ಲಿ ತೋಟಗಾರಿಗೆ 12 ಸಾವಿರ ಮಿಲಿಯನ್ ಹೆಕ್ಟೇರ್‌ನಲ್ಲಿ ಕಬ್ಬು ಬೆಳೆಯಲಾಗುತ್ತಿದೆ. ಇತರೆ ದೇಶಗಳಿಗೆ ಹೋಲಿಸಿದರೆ ನಮ್ಮ ಉತ್ಪಾದನೆ ಇಳುವರಿ ಕಡಿಮೆಯಿದೆ ಎಂದರು. ಚೀನಾದಲ್ಲಿ ಕೃಷಿ ಭೂಮಿ ಕಡಿಮೆಯಿದ್ದರೂ ನಮಗಿಂತ 3 ಪಟ್ಟು ಹೆಚ್ಚು ಇಳುವರಿ ಇದೆ. ಆಧುನಿಕ ತಂತ್ರಜ್ಞಾನದ ಯಂತ್ರಗಳನ್ನು ಬಳಸಿದರೂ ಸಹ ನಮ್ಮಲ್ಲಿ ಇಳುವರಿ ಕಡಿಮೆ ಯಾಕೆ ಎಂಬುದನ್ನು ಕೃಷಿ ವಿಶ್ವವಿದ್ಯಾಲಯಗಳು ಸಂಶೋಧನೆ ಕೈಗೊಳ್ಳಬೇಕು ಎಂದರು.

## ಸದನದ ಸದಸ್ಯತ್ವದಿಂದ ಮುನಿರತ್ನ ಅಮಾನತ್ತಿಗೆ ಸಭಾಧ್ಯಕ್ಷರಿಗೆ ಎಚ್.ಕೆ ಪಾಟೀಲ ಆಗ್ರಹ

**ಬೆಂಗಳೂರು, ಸೆ. 23 :** ವಿಧಾನಸಭೆ ಸದಸ್ಯತ್ವದಿಂದ ಕೆ.ಮುನಿರತ್ನ ರವರನ್ನು ಅಮಾನತುಗೊಳಿಸಬೇಕೆಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಶ್ರೀ ಎಚ್.ಕೆ ಪಾಟೀಲ ರವರು ವಿಧಾನಸಭಾಧ್ಯಕ್ಷ ಸನ್ಮಾನ್ಯ ಯು.ಟಿ. ಖಾದರ ರವರಿಗೆ ಪತ್ರ ಬರೆದಿದ್ದಾರೆ. ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ನೈತಿಕ ಅಧಃಪತನಕ್ಕೆ ಕಾರಣವಾದ ಅತ್ಯಂತ ಹೇಯವಾದ, ಅಸಭ್ಯವಾದ ಭಾಷೆ ಬಳಸಿ ಕೀಳು ಅಭಿರುಚಿ ಪ್ರದರ್ಶಿಸಿದ ಈ ಘಟನೆ ಕ್ಷಮಾರ್ಹವಲ್ಲ ಎಂದು ಕಾನೂನು ಸಚಿವರು ಅಭಿಪ್ರಾಯಪಟ್ಟಿದ್ದಾರೆ. ವಿಧಾನಸಭೆಯ ಸದಸ್ಯರಿಗೆ ನೈತಿಕ ಮೌಲ್ಯಗಳ ನಿಯಂತ್ರಣ ಹೇರುವ ನೀತಿ–ನಿರೂಪಣಾ ಸಮಿತಿ ಎಂದೆಂದಿಗಿಂತಲೂ ಇಂದು ರಚಿಸಬೇಕಾದ ಅತೀ ಅವಶ್ಯಕತೆ ಇದೆ. ಸದನದ ಒಳಗೆ ಹಾಗೂ ಹೊರಗೆ ಅಸಭ್ಯವಾಗಿ ವರ್ತಿಸುವ ಸದಸ್ಯರ ವರ್ತನೆಯನ್ನು ಮೌಲ್ಯಗಳನ್ನು ಗಾಳಿಗೆ ತೂರುವ ನಡತೆಗಳನ್ನು ನಿಯಂತ್ರಿಸುವ ನಿಯಮಗಳನ್ನು ತಕ್ಷಣ ರಚಿಸಬೇಕು.



ಸಂವಿಧಾನದತ್ತವಾಗಿ ಸಭಾಧ್ಯಕ್ಷರಿಗೆ ಪ್ರದತ್ತವಾಗಿರುವ ಪರಮಾಧಿಕಾರವನ್ನು ಚಲಾಯಿಸಿ ವಿಶೇಷ ಅಪರೂಪದ ಕ್ರಮ ಕೈಗೊಳ್ಳುವ ಮೂಲಕ ವಿಧಾನಸಭೆ ಸದಸ್ಯರಾದ ಶ್ರೀ ಕೆ.ಮುನಿರತ್ನ ಅವರನ್ನು ವಿಧಾನಸಭೆಯಿಂದ ಅಮಾನತುಗೊಳಿಸಬೇಕು ಮತ್ತು ನೀತಿ–ನಿರೂಪಣಾ ಸಮಿತಿ ರಚನೆ ಮಾಡಿ ಆ ಸಮಿತಿಯ ಮೂಲಕ ಅಸಭ್ಯವಾಗಿ ವರ್ತಿಸುವ ಸದಸ್ಯರ ವಿರುದ್ಧ ತನಿಖೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಲು ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ನಂಬಿಕೆಯುಳ್ಳವರೆಲ್ಲಾ ದಾಪುಗಾಲನ್ನಿಡಬೇಕು.

ಯಾವುದೇ ಅಸಭ್ಯ ವರ್ತನೆ ಅಸಂಸದೀಯ ವರ್ತನೆಗೆ ಗಂಭೀರವಾದ ಮತ್ತು ಕಠಿಣ ಕ್ರಮಗಳ ಕುರಿತು ನಿಯಂತ್ರಣ ಮತ್ತು ಕಡಿವಾಣ ಹಾಕಲೇಬೇಕು. ಇಂತಹ ಅಸಭ್ಯ ವರ್ತನೆಗಳಿಗೆ ಶೂನ್ಯ–ಸಹನೆ ಇಡೀ ವಿಧಾನ ಮಂಡಲ ಹೊಂದಬೇಕಾದ ಸಂದರ್ಭ ಹಾಗೂ ಜನಾಪೇಕ್ಷೆ ಸ್ಪಷ್ಟವಾಗಿ ಕಾಣುತ್ತಿದೆ. ಈ ಘಟನೆಯಿಂದ ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಮೌಲ್ಯಗಳಿಗೆ, ಸತ್ಸಂಪ್ರದಾಯಗಳಿಗೆ ತೀವ್ರವಾದ ಕೊಡಲಿ ಪೆಟ್ಟು ಬಿದ್ದಿದೆ. ಎಲ್ಲಕ್ಕಿಂತ ಹೆಚ್ಚಾಗಿ ಶಾಸನಸಭೆಯ ಘನತೆ, ಗೌರವಕ್ಕೆ ತೀವ್ರವಾದ ಧಕ್ಕೆಯುಂಟಾಗಿದೆ. ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ನೈತಿಕ ಅಧಃಪತನವನ್ನು ನಿಯಂತ್ರಿಸಲು ತೀವ್ರವಾಗಿ ಅತ್ಯಂತ ಕಠಿಣ ಕ್ರಮ ತೆಗೆದುಕೊಳ್ಳಬೇಕೆಂದು ಸಭಾಧ್ಯಕ್ಷರನ್ನು ಒತ್ತಾಯಿಸಿದ್ದಾರೆ. ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆ ನಿಯಮಗಳ ಈ ಕೆಳಕಂಡ ನಿಯಮಗಳನ್ವಯ ಕ್ರಮ ಕೈಗೊಳ್ಳಬೇಕೆಂದು ಸಚಿವರು ಒತ್ತಾಯಿಸಿದ್ದಾರೆ.

196 ಸಮಿತಿಯ ಮುಂದೆ ಹಕ್ಕುಬಾಧ್ಯತೆ ಪ್ರಶ್ನೆಯನ್ನು ಕಳುಹಿಸಲು ಅಧ್ಯಕ್ಷರ ಅಧಿಕಾರ: ಈ ನಿಯಮಗಳಲ್ಲಿ ಏನೇ ಹೇಳಿದ್ದರೂ, ಅಧ್ಯಕ್ಷರು ಹಕ್ಕುಬಾಧ್ಯತೆಯ ಯಾವುದೇ ಪ್ರಶ್ನೆಯನ್ನು ಪರಿಶೀಲನೆಗಾಗಿ, ತನಿಖೆಗಾಗಿ ಅಥವಾ ವರದಿಗಾಗಿ ಹಕ್ಕುಬಾಧ್ಯತೆ ಸಮಿತಿಗೆ ಕಳುಹಿಸಬಹುದು

**ಅದು ಅಲ್ಲದೇ ನಿಯಮ 273 ಸಮಿತಿಯಿಂದ ಪ್ರಶ್ನೆಗಳ ಪರಿಶೀಲನೆ:** ತನಗೆ ಒಪ್ಪಿಸುವ ಪ್ರತಿಯೊಂದು ವಿಷಯವನ್ನು ಸಮಿತಿಯು ಪರಿಶೀಲಿಸತಕ್ಕದ್ದು ಮತ್ತು ಪ್ರತಿಯೊಂದು ಸಂದರ್ಭದ ಸತ್ಯಾಂಶಗಳನ್ನು ನೋಡಿ, ಹಕ್ಕುಬಾಧ್ಯತೆಯ ಉಲ್ಲಂಘನೆಯು ನಡೆದಿದೆಯೇ ಎಂಬುದನ್ನು ನಿರ್ಧರಿಸತಕ್ಕದ್ದು ಮತ್ತು ಉಲ್ಲಂಘನೆಯಾಗಿದ್ದರೇ ಉಲ್ಲಂಘನೆಯ ಸ್ವರೂಪ, ಉಲ್ಲಂಘನೆಗೆ ಅವಕಾಶ ಕೊಟ್ಟಿರುವಂತಹ ಸಂದರ್ಭಗಳು ಇವುಗಳನ್ನು ನಿರ್ಧರಿಸತಕ್ಕುದು ಮತ್ತು ಈ ಸಂದರ್ಭದಲ್ಲಿ ತಾನು ಯುಕ್ತವೆಂದು ತಿಳಿಯುವಂಥ ಶಿಫಾರಸ್ಸುಗಳನ್ನು ಮಾಡತಕ್ಕುದು. ನಿಯಮ 273 ಸಮಿತಿಯು ಮಾಡಿರುವ ಶಿಫಾರಸ್ಸುಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ಅನುಸರಿಸಬೇಕಾದ ಕಾರ್ಯವಿಧಾನವನ್ನು ಸಹ ತನ್ನ ವರದಿಯಲ್ಲಿ ತಿಳಿಸಬಹುದು. ಮೇಲ್ಕಂಡ ನಿಯಮಗಳಂತೆ ಕ್ರಮ ಕೈಗೊಂಡು ಕಠಿಣ ಕ್ರಮ ತೆಗೆದುಕೊಳ್ಳಬೇಕೆಂದು ಸಚಿವರು ಒತ್ತಾಯಿಸಿದ್ದಾರೆ.

## ಕಾವೇರಿ 5ನೇ ಹಂತದ ಯೋಜನೆ ವಿಜಯದಶಮಿ ವೇಳೆಗೆ ಉದ್ಘಾಟನೆ

**ಬೆಂಗಳೂರು, ಸೆ. 23 :** ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿಗಳಿಗೆ ಕುಡಿಯುವ ನೀರು ಪೂರೈಸುವ ಕಾವೇರಿ 5ನೇ ಹಂತದ ಯೋಜನೆಯನ್ನು 'ವಿಜಯ ದಶಮಿ' ವೇಳೆಗೆ ಉದ್ಘಾಟಿಸಲು ಸಿದ್ಧತೆ ನಡೆಯುತ್ತಿದೆ' ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಕನಕಪುರ ತಾಲ್ಲೂಕಿನ ಹಾರೋಹಳ್ಳಿಯಲ್ಲಿರುವ ಕಾವೇರಿ 5ನೇ ಹಂತದ ಜಲರೇಚಕ ಯಂತ್ರಾಗಾರ ವೀಕ್ಷಿಸಿದ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಉದ್ಘಾಟನೆಗೂ ಮುನ್ನ, ಯೋಜನೆಯ ವಿವಿಧ ಹಂತದ ಕಾಮಗಾರಿ ಗಳನ್ನು ಖುದ್ದಾಗಿ ಪರಿಶೀಲಿಸುತ್ತಿದ್ದೇನೆ. ಕೊಳವೆ ಮಾರ್ಗಗಳ ಕಾಮಗಾರಿ ಜೊತೆಗೆ, ಹಾರೋಹಳ್ಳಿ ಜಲರೇಚಕ ಯಂತ್ರಾಗಾರಕ್ಕೆ ಭೇಟಿ ನೀಡಿದ್ದೇನೆ. ಟಿ.ಕೆ. ಹಳ್ಳಿಯ ಜಲಶುದ್ಧೀಕರಣ ಘಟಕ ಮತ್ತು ಜಲರೇಚಕ ಯಂತ್ರಾಗಾರವನ್ನೂ ಪರಿಶೀಲಿಸುತ್ತೇನೆ' ಎಂದು ತಿಳಿಸಿದರು.



ಯೋಜನೆಯ ಅನುಷ್ಠಾನದ ವೇಳೆ ಕೆಲವೊಂದು ಕಡೆ ಸಮಸ್ಯೆಗಳು ಎದುರಾಗಿದ್ದವು. ಎಲ್ಲವನ್ನೂ ಹಂತ ಹಂತವಾಗಿ ಬಗೆಹರಿಸಿದ್ದೇವೆ. ಕೆಂಗೇರಿಯಲ್ಲಿ ಜಮೀನಿನ ಸಮಸ್ಯೆ ಇತ್ತು. ಮುಖ್ಯಮಂತ್ರಿಯವರು, ಶಾಸಕ ಎಸ್.ಟಿ. ಸೋಮಶೇಖರ್ ಜೊತೆ ಸೇರಿ ಭೂ ಮಾಲೀಕರೊಂದಿಗೆ ಚರ್ಚಿಸಿ, ಅವರಿಗೆ ಅಭಿವೃದ್ಧಿ ಹಕ್ಕು ವರ್ಗಾವಣೆ(ಟಿಡಿಆರ್) ಮಾಡಿ, ಸಮಸ್ಯೆಯನ್ನು ಬಗೆಹರಿಸಿದ್ದೇವೆ. ಅಲ್ಲಿ ಶೀಘ್ರ ಕಾಮಗಾರಿ ಪೂರ್ಣಗೊಳ್ಳಲಿದೆ' ಎಂದು ತಿಳಿಸಿದರು.

ಪ್ರಸ್ತುತ ಬೆಂಗಳೂರು ನಗರಕ್ಕೆ 1400 ಎಂಎಲ್ಡಿ ನೀರು ಪೂರೈಕೆಯಾಗುತ್ತಿದೆ. ಕಾವೇರಿ 5ನೇ ಹಂತ ಉದ್ಘಾಟನೆಯಾದ ನಂತರ 750 ಎಂಎಲ್ಡಿ ನೀರು ಹೊಸದಾಗಿ ಸೇರಿಕೊಳ್ಳುತ್ತಿದೆ. ಯಶವಂತಪುರ, ಬೆಂಗಳೂರು ದಕ್ಷಿಣ, ಬ್ಯಾಟರಾಯನಪುರ, ಟಿ.ದಾಸರಹಳ್ಳಿ, ಮಹದೇವಪುರ, ಆರ್.ಆರ್.ನಗರ ಮತ್ತು ಬೊಮ್ಮನಹಳ್ಳಿ ವಲಯದ 110 ಹಳ್ಳಿಗಳಿಗೆ ನೀರು ಪೂರೈಸಲಾಗುತ್ತಿದೆ ಎಂದು ಮಾಹಿತಿ ನೀಡಿದರು. ಟ್ಯಾಂಕರ್ ಬಂದ್ ಮಾಡಿ, ಮನೆ ಮನೆಗೂ ನೀರು ಕೊಡಬೇಕು ಎಂಬುದು ನಮ್ಮ ಸರ್ಕಾರದ ಸಂಕಲ್ಪ. ಕನಿಷ್ಠ 10 ವರ್ಷ ಬೆಂಗಳೂರು ನಗರಕ್ಕೆ ಯಾವುದೇ ತೊಂದರೆ ಇರಬಾರದೆಂದು ಈ ಯೋಜನೆ ರೂಪಿಸಿದ್ದೇವೆ ಎಂದು ತಿಳಿಸಿದರು.

ಆರಂಭದಲ್ಲಿ, ಕೆಂಗೇರಿ–ಉತ್ತರಹಳ್ಳಿ ಮುಖ್ಯರಸ್ತೆಯ ಕೃಷ್ಣಪ್ರಿಯ ಕಲ್ಯಾಣ ಮಂಟಪದ ಬಳಿ ನಡೆಯುತ್ತಿರುವ ಬೃಹತ್ ಕೊಳವೆ ಮಾರ್ಗದ ಕಾಮಗಾರಿಯನ್ನು ಡಿಸಿಎಂ ಪರಿಶೀಲಿಸಿದರು. ಈ ವೇಳೆ ಯಶವಂತಪುರ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಎಸ್.ಟಿ. ಸೋಮಶೇಖರ್, ಜಲಮಂಡಳಿ ಅಧ್ಯಕ್ಷ ಡಾ. ರಾಮ್‌ಪ್ರಸಾತ್ ಮನೋಹರ್, ಜಲಮಂಡಳಿ ಎಂಜಿನಿಯರ್‌ಗಳು ಹಾಜರಿದ್ದರು. ಕಾರ್ಮಿಕರು ಜೆಸಿಬಿಯಿಂದ ಆಳವಾದ ಕಂದಗಳನ್ನು ತೆಗೆದು ಬೃಹತ್ ಗಾತ್ರದ ಕೊಳವೆಗಳನ್ನು ಜೋಡಿಸುವುದನ್ನು ವೀಕ್ಷಿಸಿದರು. ಜಲಮಂಡಳಿ ಇಂಜಿನಿಯರ್‌ಗಳು ಕಾಮಗಾರಿ ಪ್ರಗತಿಯನ್ನು ಶಿವಕುಮಾರ್ ಅವರಿಗೆ ವಿವರಿಸಿದರು.

ನಂತರ ಹಾರೋಹಳ್ಳಿಗೆ ತೆರಳಿದ ಶಿವಕುಮಾರ್ ಅವರು, ಜಲರೇಚಕ ಯಂತ್ರಾಗಾರಕ್ಕೆ ಭೇಟಿ ನೀಡಿ, ಯಂತ್ರಗಳ ಕಾರ್ಯವೈಖರಿಯನ್ನು ಪರಿಶೀಲಿಸಿದರು. ಕಾಮಗಾರಿಗಳ ಪ್ರಗತಿ ಪರಿಶೀಲನೆಗೆ ತೆರಳುವ ಮುನ್ನ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಕಾವೇರಿ ಭವನದ ಜಲಮಂಡಳಿ ಕೇಂದ್ರ ಕಚೇರಿಯಲ್ಲಿ ಪ್ರತಿಷ್ಠಾಪಿಸಿದ್ದ ಗಣಪತಿ ಮೂರ್ತಿಗೆ ಪೂಜೆ ಸಲ್ಲಿಸಿದರು.

## ಕೇಜ್ರಿವಾಲ್ ಕುರ್ಚಿಯಲ್ಲಿ ಕೂರದೆ ಅಧಿಕಾರ ವಹಿಸಿಕೊಂಡ ಆತಿಶಿ

**ನವದೆಹಲಿ, ಸೆ. 23 :** ದೆಹಲಿ ಮುಖ್ಯಮಂತ್ರಿಯಾಗಿ ಆತಿಶಿ ಸೋಮವಾರ ಅಧಿಕಾರ ಸ್ವೀಕರಿಸಿದ್ದಾರೆ. ಆದರೆ, ಮುಖ್ಯಮಂತ್ರಿ ಕಚೇರಿಯಲ್ಲಿ ಅರವಿಂದ್ ಕೇಜ್ರಿವಾಲ್ ಅವರ ಕುರ್ಚಿ ಪಕ್ಕದಲ್ಲಿ ಬೇರೊಂದು ಕುರ್ಚಿಯನ್ನು ತರಿಸಿಕೊಂಡು ಆತಿಶಿ ಅಧಿಕಾರ ಸ್ವೀಕರಿಸುವ ಮೂಲಕ ತಮ್ಮ ಗುರುವಿಗೆ ಗೌರವ ತೋರಿಸಿದ್ದಾರೆ. 43 ವರ್ಷದ ಸಿಎಂ ಆತಿಶಿ ಅವರು ಮುಂಬರುವ ಚುನಾವಣೆಗಳವರೆಗೆ ಮುಂದಿನ 4 ತಿಂಗಳ ಕಾಲ ಸರ್ಕಾರವನ್ನು ನಡೆಸುವುದಾಗಿ ಪ್ರತಿಜ್ಞೆ ಮಾಡಿದರು. ಭರತನು ಭಗವಾನ್ ರಾಮನ ಸಿಂಹಾಸನದಲ್ಲಿ ಕೂರದೆ, ಆ ಸಿಂಹಾಸನದಲ್ಲಿ ರಾಮನ ಪಾದುಕೆಯಿಟ್ಟು ಆಳ್ವಿಕೆ ನಡೆಸಿದಂತೆಯೇ ನಾನು ಕೇಜ್ರಿವಾಲ್ ಅವರ ಬದಲು ಆಡಳಿತ ನಡೆಸಲಿದ್ದೇನೆ ಎಂದಿದ್ದಾರೆ. ಅಧಿಕಾರ ವಹಿಸಿಕೊಂಡ ನಂತರ, ಆತಿಶಿ ತನ್ನ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಕಡೆಗೆ ಸಾಂಕೇತಿಕ ಸೂಚಕದಲ್ಲಿ ತನ್ನ ಪಕ್ಕದಲ್ಲಿ ಅವರು ಕೂರುತ್ತಿದ್ದ ಖಾಲಿ ಕುರ್ಚಿಯನ್ನು ಇರಿಸಿದ್ದಾರೆ. ಅರವಿಂದ್ ಕೇಜ್ರಿವಾಲ್ ಸರ್ಕಾರದಿಂದ ಪ್ರಮುಖ ಸದಸ್ಯರು ತಮ್ಮ ಖಾತೆಗಳನ್ನು ಉಳಿಸಿಕೊಂಡು ಶನಿವಾರದಂದು ಆತಿಶಿ ಅವರು ತಮ್ಮ ಸಂಪುಟದೊಂದಿಗೆ ಪ್ರಮಾಣ ವಚನ ಸ್ವೀಕರಿಸಿದರು. ಆತಿಶಿ ಸ್ವತಃ ಶಿಕ್ಷಣ, ಹಣಕಾಸು, ವಿದ್ಯುತ್, ಮತ್ತು ಕಘಆಯಂತಹ ನಿರ್ಣಾಯಕ ಇಲಾಖೆಗಳನ್ನು ನೋಡಿಕೊಳ್ಳುತ್ತಿದ್ದರು. ಒಟ್ಟು 13 ಪೋರ್ಟ್ಫೋಲಿಯೊಗಳನ್ನು ನಿರ್ವಹಿಸುತ್ತಿದ್ದರು. 8 ಖಾತೆಗಳನ್ನು ಹೊಂದಿರುವ ಸೌರಭ್ ಭಾರದ್ವಾಜ್ ಸಚಿವರಾಗಿ ಅದೇ ದಿನ ಅಧಿಕಾರ ವಹಿಸಿಕೊಂಡರು. ಸುಷ್ಮಾ ಸ್ವರಾಜ್ ಮತ್ತು ಶೀಲಾ ದೀಕ್ಷಿತ್ ನಂತರ ಆತಿಶಿ ಅವರು ದೇಶದ 17ನೇ ಮಹಿಳಾ ಮುಖ್ಯಮಂತ್ರಿಯಾದರು. ಅಧಿಕಾರ ವಹಿಸಿಕೊಂಡ ನಂತರ ಮಾಧ್ಯಮವನ್ನುದ್ದೇಶಿಸಿ ಮಾತನಾಡಿದ ಆತಿಶಿ, ರಾಮಾಯಣದಲ್ಲಿ ಶ್ರೀರಾಮ ವನವಾಸಕ್ಕೆ ಹೋದಾಗ ಭರತ ಸಿಂಹಾಸನದ ಮೇಲೆ ಶ್ರೀರಾಮನ ಪಾದುಕೆ ಇಟ್ಟು ಆಳ್ವಿಕೆ ಮಾಡಿದ್ದ. ಹಾಗೆಯೇ ನಾನು ಇಂದು ಕೇಜ್ರಿವಾಲ್ ಬದಲಾಗಿ ದೆಹಲಿಯ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಿದ್ದೇನೆ. ಇಂದು ನನ್ನ ಹೃದಯದಲ್ಲಿ ಭರತ ಅನುಭವಿಸಿದ ಅದೇ ನೋವು ಇದೆ. ಭರತ ಭಗವಾನ್ ಶ್ರೀರಾಮನ ಖದೌನ್ ಇಟ್ಟುಕೊಂಡು ಕೆಲಸ ಮಾಡಿದಂತೆಯೇ ಮುಂದಿನ ದಿನಗಳಲ್ಲಿ ನಾನು 4 ತಿಂಗಳು ಮುಖ್ಯಮಂತ್ರಿಯಾಗಿ ಕೆಲಸ ಮಾಡುತ್ತೇನೆ ಎಂದಿದ್ದಾರೆ.



# ಮಕ್ಕಳ ಅಶ್ಲೀಲ ಚಿತ್ರಗಳ ಡೌನ್ಲೋಡ್ ಸಂಗ್ರಹ, ವೀಕ್ಷಣೆ ಅಪರಾಧ: ಸುಪ್ರೀಂ ಕೋರ್ಟ್



**ನವದೆಹಲಿ,ಸೆ.23:** ಮಕ್ಕಳ ಅಶ್ಲೀಲ ಚಿತ್ರಗಳನ್ನು ಡೌನ್ಲೋಡ್ ಮಾಡುವುದು, ಸಂಗ್ರಹಿಸುವುದು ಮತ್ತು ನೋಡುವುದು ಮಕ್ಕಳ ರಕ್ಷಣೆ (ಪೋಕ್ಸೊ) ಕಾಯ್ದೆಯಡಿ ಅಪರಾಧ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಈ ಮೂಲಕ ಇಂತಹ ವಿಡಿಯೋ ಡೌನ್ಲೋಡ್ ಮಾಡುವುದು ಮತ್ತು ವೀಕ್ಷಿಸುವುದು ಶಿಕ್ಷಾರ್ಹವಲ್ಲ ಎಂದು ತೀರ್ಪು ನೀಡಿದ ಮದ್ರಾಸ್ ಹೈಕೋರ್ಟ್ ಆದೇಶವನ್ನು ರದ್ದು ಸುಪ್ರೀಂಕೋರ್ಟ್ ಮಾಡಿದೆ.

ಚೈಲ್ಡ್ ಪೋರ್ನ್ ವೀಕ್ಷಿಸಿದ ಚೆನ್ನೈ ವ್ಯಕ್ತಿಯ ವಿರುದ್ಧದ ಎಫ್ಐಆರ್ ಮತ್ತು ಕ್ರಿಮಿನಲ್ ಮೊಕದ್ದಮೆಗಳನ್ನು ರದ್ದುಗೊಳಿಸಿದ ಮದ್ರಾಸ್ ಹೈಕೋರ್ಟ್, ಇತ್ತೀಚಿನ ದಿನಗಳಲ್ಲಿ ಮಕ್ಕಳು ಅಶ್ಲೀಲ ಚಿತ್ರಗಳನ್ನು ನೋಡುವ ಗಂಭೀರ ಸಮಸ್ಯೆಯೊಂದಿಗೆ ಹೋರಾಡುತ್ತಿದ್ದಾರೆ ಮತ್ತು ಅವರನ್ನು ಶಿಕ್ಷಿಸುವ ಬದಲು ಸಮಾಜವು ಶಿಕ್ಷಣ ನೀಡುವ ಮೂಲಕ ಸಾಕಷ್ಟು ಪ್ರಬುದ್ಧರಾಗುವಂತೆ ಮಾಡಬೇಕು ಎಂದು ಆದೇಶಿತ್ತು.

ಹೈಕೋರ್ಟ್ ಆದೇಶದ ವಿರುದ್ಧ ಎನ್‌ಜಿಒಗಳ ಒಕ್ಕೂಟವಾದ ಜಸ್ಟ್ ರೈಟ್ಸ್ ಫಾರ್ ಚಿಲ್ಡ್ರನ್ ಅಲೈಯನ್ಸ್ ಮೇಲ್ಮನವಿಯನ್ನು ಸಲ್ಲಿಸಿತು. ಅರ್ಜಿದಾರರ ಪರ ವಾದ ಮಂಡಿಸಿದ್ದ ಹಿರಿಯ ವಕೀಲ ಎಚ್‌ಎಸ್ ಫೂಲ್ಕಾ, ಹೈಕೋರ್ಟ್ ಆದೇಶ ಇದು ಮಕ್ಕಳ ಅಶ್ಲೀಲತೆಯನ್ನು ಉತ್ತೇಜಿಸುತ್ತದೆ ಮತ್ತು ಮಕ್ಕಳ ಯೋಗಕ್ಷೇಮಕ್ಕೆ ವಿರುದ್ಧವಾಗಿದೆ ಎಂದು ವಾದಿಸಿದ್ದರು.

ಇಂದು ಈ ಸಂಬಂಧ ಆದೇಶ ನೀಡಿದ ಸಿಜೆಐ ಡಿವೈ ಚಂದ್ರಚೂಡ್ ಮತ್ತು ನ್ಯಾ. ಜೆಬಿ ಪರ್ದಿವಾಲಾ ಅವರನ್ನೊಳಗೊಂಡ ಪೀಠವು, ಮದ್ರಾಸ್ ಹೈಕೋರ್ಟ್ ತೀರ್ಪು ನೀಡುವಲ್ಲಿ ಘೋರ ತಪ್ಪು ಮಾಡಿದೆ, ಏಕಪೀಠ ಸದಸ್ಯ ನ್ಯಾಯಧೀಶರು ಇದನ್ನು ಹೇಗೆ ಹೇಳಲು ಸಾಧ್ಯ ಎಂದು ಸಿಜೆಐ ಚಂದ್ರಚೂಡ್ ಪ್ರಶ್ನಿಸಿದ್ದರು. ಮಕ್ಕಳ ಅಶ್ಲೀಲ ಚಿತ್ರಗಳನ್ನು ಡೌನ್ಲೋಡ್ ಮಾಡುವುದು, ಸಂಗ್ರಹಿಸುವುದು ಮತ್ತು ನೋಡುವುದು ಮಕ್ಕಳ ರಕ್ಷಣೆ ಕಾಯ್ದೆಯಡಿ ಅಪರಾಧ ಎಂದು ಹೇಳಿದರು.

ಮಕ್ಕಳ ಅಶ್ಲೀಲತೆ ಪದವನ್ನು ಮಕ್ಕಳ ಲೈಂಗಿಕ ದೌರ್ಜನ್ಯ ಮತ್ತು ಶೋಷಣೆಯ ವಸ್ತು ಎಂದು ಬದಲಿಸಲು ತಿದ್ದುಪಡಿಯನ್ನು ತರುವಂತೆ ಇದೇ ವೇಳೆ ಕೇಂದ್ರ ಸರ್ಕಾರಕ್ಕೆ ಸಿಜೆಐ ತಮ್ಮ ಆದೇಶದ ಮೂಲಕ ಸೂಚಿಸಿದರು. ಇದರ ಜೊತೆಗೆ ತನ್ನ ಯಾವುದೇ ಆದೇಶಗಳಲ್ಲಿ 'ಮಕ್ಕಳ ಅಶ್ಲೀಲತೆ' ಎಂಬ ಪದವನ್ನು ಬಳಸದಂತೆ ಇತರ ನ್ಯಾಯಾಲಯಗಳಿಗೆ ನಿರ್ದೇಶನ ನೀಡಿದರು.

# ಲೈಂಗಿಕ ಶಿಕ್ಷಣ ಅತ್ಯಗತ್ಯ: ಸುಪ್ರೀಂ ಅಭಿಮತ



**ನವದೆಹಲಿ, ಸೆ. 23:** ಭಾರತದಲ್ಲಿ ಲೈಂಗಿಕ ಶಿಕ್ಷಣದ ಬಗ್ಗೆ ತಪ್ಪು ಕಲ್ಪನೆಗಳು ವ್ಯಾಪಕವಾಗಿದ್ದು, ಲೈಂಗಿಕ ಆರೋಗ್ಯದ ಬಗ್ಗೆ ತಪ್ಪು ಕಲ್ಪನೆಗಳನ್ನು ನಿವಾರಿಸುವ ಅಗತ್ಯವಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ದೇಶದಲ್ಲಿ ಲೈಂಗಿಕ ಅಪರಾಧಗಳ ಸಂಭವವನ್ನು ಕಡಿಮೆ ಮಾಡಲು ಲೈಂಗಿಕ ಶಿಕ್ಷಣದ ಪ್ರಯೋಜನಗಳ ಬಗ್ಗೆ ಸಮಗ್ರ ತಿಳಿವಳಿಕೆಯನ್ನು ಉತ್ತೇಜಿಸುವುದು ಅತ್ಯಗತ್ಯ ಎಂದು ಸೋಮವಾರ ಹೇಳಿದೆ.

ಮುಖ್ಯ ನ್ಯಾಯಮೂರ್ತಿ ಡಿ ವೈ ಚಂದ್ರಚೂಡ್ ಮತ್ತು ನ್ಯಾಯಮೂರ್ತಿ ಜೆ ಬಿ ಪಾರ್ದಿವಾಲಾ ಅವರನ್ನೊಳಗೊಂಡ ಪೀಠವು, ಪೋಷಕರು ಮತ್ತು ಶಿಕ್ಷಣತಜ್ಞರು ಸೇರಿದಂತೆ ಅನೇಕ ಜನರು ಲೈಂಗಿಕತೆಯ ಬಗ್ಗೆ ಚರ್ಚಿಸುವುದು ಅನುಚಿತ, ಅನೈತಿಕ ಅಥವಾ ಮುಜುಗರದಂತಹ ಸಂಪ್ರದಾಯವಾದಿ ಅಭಿಪ್ರಾಯಗಳನ್ನು ಹೊಂದಿದ್ದಾರೆ ಎಂದು ಹೇಳಿದೆ.

ಈ ಸಾಮಾಜಿಕ ಕಳಂಕವು ಲೈಂಗಿಕ ಆರೋಗ್ಯದ ಬಗ್ಗೆ ಬಹಿರಂಗವಾಗಿ ಮಾತನಾಡಲು ಹಿಂಜರಿಯುವ ವಾತಾವರಣ ಸೃಷ್ಟಿಸುತ್ತದೆ, ಇದು ಹದಿಹರೆಯದವರಲ್ಲಿ ಅರಿವಿನ ಗಮನಾರ್ಹ ಅಂತರಕ್ಕೆ ಕಾರಣವಾಗುತ್ತದೆ ಎಂದು ಪೀಠ ಹೇಳಿದೆ. ಲೈಂಗಿಕ ಆರೋಗ್ಯದ ಬಗ್ಗೆ ತಪ್ಪು ಕಲ್ಪನೆಗಳನ್ನು ಪರಿಹರಿಸಲು ನಾವು ಪ್ರಾರಂಭಿಸುವುದು ಅತ್ಯಗತ್ಯವಾಗಿದೆ ಮತ್ತು ಲೈಂಗಿಕ ಶಿಕ್ಷಣದ ಪ್ರಯೋಜನಗಳ ಬಗ್ಗೆ ಸಮಗ್ರ ತಿಳುವಳಿಕೆಯನ್ನು ಉತ್ತೇಜಿಸುವುದು ಲೈಂಗಿಕ ಆರೋಗ್ಯದ ಫಲಿತಾಂಶಗಳನ್ನು ಸುಧಾರಿಸಲು ಮತ್ತು ಭಾರತದಲ್ಲಿ ಲೈಂಗಿಕ ಅಪರಾಧಗಳ ಸಂಭವವನ್ನು ಕಡಿಮೆ ಮಾಡಲು ಅತ್ಯಗತ್ಯವಾಗಿದೆ. ಇದು ಭಾರತದ ಹೆಚ್ಚುತ್ತಿರುವ ಜನಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು ನಿರ್ಣಾಯಕವಾಗಿ ಮಾಡಬೇಕಿದೆ ನ್ಯಾಯಾಲಯ ಹೇಳಿದೆ.

ಮಕ್ಕಳ ಅಶ್ಲೀಲ ಚಿತ್ರಗಳನ್ನು ವೀಕ್ಷಿಸುವುದು ಮತ್ತು ಡೌನ್ಲೋಡ್ ಮಾಡುವುದು ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೋಕ್ಸೊ) ಕಾಯ್ದೆ 2012 ರ ಅಡಿಯಲ್ಲಿ ಅಪರಾಧ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಪೀಠಕ್ಕೆ 200 ಪುಟಗಳ ತೀರ್ಪನ್ನು ಬರೆದ ನ್ಯಾಯಮೂರ್ತಿ ಪರ್ದಿವಾಲಾ, ಲೈಂಗಿಕ ಶಿಕ್ಷಣವು ಯುವಕರಲ್ಲಿ ಅಶ್ಲೀಲತೆ ಮತ್ತು ಬೇಜವಾಬ್ದಾರಿ ವರ್ತನೆಯನ್ನು ಉತ್ತೇಜಿಸುತ್ತದೆ ಎಂಬುದು ಒಂದು ಪ್ರಚಲಿತ ತಪ್ಪು ಕಲ್ಪನೆಯಾಗಿದೆ ಎಂದು ಹೇಳಿದ್ದಾರೆ. ಹದಿಹರೆಯದವರಿಗೆ ಲೈಂಗಿಕ ಶಿಕ್ಷಣ ಲೈಂಗಿಕ ಆರೋಗ್ಯ ಮತ್ತು ಗರ್ಭನಿರೋಧಕಗಳ ಬಗ್ಗೆ ಮಾಹಿತಿಯನ್ನು ಒದಗಿಸುವುದರಿಂದ ಹದಿಹರೆಯದ ಮಕ್ಕಳು ಹೆಚ್ಚಿನ ಲೈಂಗಿಕ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಮಾಡುತ್ತದೆ ಎಂದು ಹಲವರು ಸಾಮಾನ್ಯವಾಗಿ ವಾದಿಸುತ್ತಾರೆ. ಆದಾಗ್ಯೂ, ಸಮಗ್ರ ಲೈಂಗಿಕ ಶಿಕ್ಷಣವು ವಾಸ್ತವವಾಗಿ ಲೈಂಗಿಕ ಚಟುವಟಿಕೆಯ ಪ್ರಾರಂಭವನ್ನು ವಿಳಂಬಗೊಳಿಸುತ್ತದೆ ಮತ್ತು ಲೈಂಗಿಕವಾಗಿ ಸಕ್ರಿಯವಾಗಿರುವವರಲ್ಲಿ ಸುರಕ್ಷಿತ ಅಭ್ಯಾಸಗಳನ್ನು ಉತ್ತೇಜಿಸುತ್ತದೆ ಎಂದು ಸಂಶೋಧನೆ ಹೇಳಿದೆ ಎಂದು ಪೀಠವು ಹೇಳಿದೆ.

ಲೈಂಗಿಕ ಶಿಕ್ಷಣವು ಸಾಂಪ್ರದಾಯಿಕ ಭಾರತೀಯ ಮೌಲ್ಯಗಳೊಂದಿಗೆ ಹೊಂದಿಕೆಯಾಗದ ಪಾಶ್ಚಿಮಾತ್ಯ ಪರಿಕಲ್ಪನೆ ಎಂಬುದು ಒಂದು ಸಾಮಾನ್ಯ ನಂಬಿಕೆಯಾಗಿದೆ ಎಂದು ಅದು ಹೇಳಿದೆ. ಇದೇ ಕಾರಣಕ್ಕೆ ಹಲವು ರಾಜ್ಯ ಸರ್ಕಾರಗಳು ಪ್ರತಿರೋಧ ಒಡ್ಡಿದ್ದು, ಇದರ ಪರಿಣಾಮ ಕೆಲವು ರಾಜ್ಯಗಳಲ್ಲಿನ ಶಾಲೆಗಳಲ್ಲಿ ಲೈಂಗಿಕ ಶಿಕ್ಷಣವನ್ನು ನಿಷೇಧಿಸಲಾಗಿದೆ ಎಂದು ಪೀಠ ಹೇಳಿದೆ.

# ಇವೈ ಉದ್ಯೋಗಿ ಸಾವು: ಸಚಿವೆ ನಿರ್ಮಲಾ ಹೇಳಿಕೆಗೆ ಭಾರಿ ಆಕ್ರೋಶ



**ನವದೆಹಲಿ,ಸೆ.23:** ಅಧಿಕ ಕೆಲಸದ ಒತ್ತಡದಿಂದ ಇವೈ ಕಂಪನಿಯ ಉದ್ಯೋಗಿ ಸಾವನ್ನಪ್ಪಿದ್ದಾರೆ ಎಂದು ಆಕೆಯ ತಾಯಿ ಆರೋಪಿಸಿದ್ದರು. ಇವೈ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ 26 ವರ್ಷದ ಚಾರ್ಟರ್ಡ್ ಅಕೌಂಟೆಂಟ್‌ನ ಸಾವಿನ ಕುರಿತಾದ ಅವರ ತಾಯಿಯ ಹೇಳಿಕೆಗಳ ಸುತ್ತಲಿನ ವಿವಾದಕ್ಕೆ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಪ್ರತಿಕ್ರಿಯಿಸಿದ್ದಾರೆ. ಇವೈ ಉದ್ಯೋಗಿಯ ಸಾವಿಗೆ ಆಕೆಯ ಅಸಮರ್ಥತೆಯೇ ಕಾರಣ ಎಂದು ಹೇಳಿದ್ದಾರೆ.

ಒತ್ತಡವನ್ನು ನಿಭಾಯಿಸಲು ಜನರಿಗೆ ಆಂತರಿಕ ಶಕ್ತಿ ಬೇಕು ಮತ್ತು ಇದನ್ನು ದೈವತ್ವದಿಂದ ಮಾತ್ರ ಸಾಧಿಸಬಹುದು ಎಂದು ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ವಿರೋಧ ಪಕ್ಷದ ನಾಯಕರು ಸೇರಿದಂತೆ ಹಲವಾರು ಸಾಮಾಜಿಕ ಮಾಧ್ಯಮ ಬಳಕೆದಾರರು ನಿರ್ಮಲಾ ಸೀತಾರಾಮನ್ ಅವರ ಈ ಪ್ರತಿಕ್ರಿಯೆ ಸಂವೇದನಾಶೀಲವಲ್ಲ ಎಂದು ಹೇಳಿದ್ದಾರೆ.

ಇವೈ ಉದ್ಯೋಗಿ ಅನ್ನಾ ಸೆಬಾಸ್ಟಿಯನ್ ಪೆರಿವೈಲ್ ಅವರ ಸಾವಿಗೆ ಕಾರಣವಾದ ಸಂಸ್ಥೆಯ ಕೆಲಸದ ವಾತಾವರಣದ ಆರೋಪಗಳ ಬಗ್ಗೆ ಕೇಂದ್ರ ಕಾರ್ಮಿಕ ಸಚಿವಾಲಯವು ಸಮಗ್ರ ತನಿಖೆ ನಡೆಸಲಿದೆ ಎಂದು ಕೇಂದ್ರ ಹಣಕಾಸು ಸಚಿವರು ಒತ್ತಿ ಹೇಳಿದ್ದಾರೆ.

ತಮ್ಮ ಹೇಳಿಕೆಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸಿಎ ಓದಿರುವ 26 ವರ್ಷ ವಯಸ್ಸಿನ ಯುವತಿ ಕೆಲಸದ ಒತ್ತಡವನ್ನು ನಿಭಾಯಿಸಲು ಸಾಧ್ಯವಾಗಲಿಲ್ಲ ಎಂದು ಹೇಳಿದ್ದಾರೆ.

ದೇವರಲ್ಲಿ ನಂಬಿಕೆ ಇಡಿ, ನಮಗೆ ದೇವರ ಅನುಗ್ರಹ ಬೇಕು. ದೇವರನ್ನು ಹುಡುಕಿ, ಉತ್ತಮ ಶಿಸ್ತನ್ನು ಕಲಿಯಿರಿ. ಇದರಿಂದ ಮಾತ್ರ ನಿಮ್ಮ ಆತ್ಮಶಕ್ತಿ ಬೆಳೆಯುತ್ತದೆ. ಆತ್ಮಶಕ್ತಿ ಬೆಳೆಯುವುದರೊಂದಿಗೆ ಮಾತ್ರ ಆಂತರಿಕ ಶಕ್ತಿ ಬರುತ್ತದೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

# ಸಾಕ್ಷಿ ನೀಡಿ ಇಲ್ಲವೇ ಕ್ಷಮೆಯಾಚಿಸಿ ಕಂಗನಾಗೆ ಕಾಂಗ್ರೆಸ್ ಎಚ್ಚರಿಕೆ



**ನವದೆಹಲಿ, ಸೆ.23:** ಹಿಮಾಚಲ ಪ್ರದೇಶ ಸರ್ಕಾರವು ಸೋನಿಯಾ ಗಾಂಧಿ ಅವರಿಗೆ ವಿಪತ್ತು ಪರಿಹಾರಕ್ಕಾಗಿ ಹಣವನ್ನು ಅಕ್ರಮವಾಗಿ ವರ್ಗಾಯಿಸಿದೆ ಎಂದು ಆರೋಪಿಸಿರುವ ಬಿಜೆಪಿ ಸಂಸದೆ ಕಂಗನಾ ರಣಾವತ್ ಅವರಿಗೆ ಕಾಂಗ್ರೆಸ್ ಪಕ್ಷ ಮಾನನಷ್ಟ ಮೊಕದ್ದಮೆಯ ಎಚ್ಚರಿಕೆ ನೀಡಿದೆ.

ಈ ಬಗ್ಗೆ ಕಿಡಿಕಾರಿರುವ ಹಿಮಾಚಲ ಪ್ರದೇಶದ ಲೋಕೋಪಯೋಗಿ ಇಲಾಖೆ ಸಚಿವ ವಿಕ್ರಮಾದಿತ್ಯ ಸಿಂಗ್, ಕಂಗನಾ ತಮ್ಮ ಹೇಳಿಕೆಯನ್ನು ಹಿಂತೆಗೆದುಕೊಳ್ಳದಿದ್ದರೆ, ನಾವು ಮಾನನಷ್ಟ ಮೊಕದ್ದಮೆ ಹೂಡುತ್ತೇವೆ. ಅವರು ಯಾವ ಆಧಾರದ ಮೇಲೆ ಅಂತಹ ಹೇಳಿಕೆ ನೀಡಿದ್ದಾರೆ ಅವರು ಸೋನಿಯಾ ಗಾಂಧಿಯಂತಹ ಉನ್ನತ ನಾಯಕರ ವಿರುದ್ಧ ಹೇಳಿಕೆ ನೀಡಿರುವುದು ಅತ್ಯಂತ ದುರದೃಷ್ಟಕರ ಎಂದು ವಾಗ್ದಾಳಿ ನಡೆಸಿದ್ದಾರೆ.

ಕೇಂದ್ರದಿಂದ ಬರುವ ಹಣವನ್ನು ಅಥವಾ ರಾಜ್ಯದ ಅಭಿವೃದ್ಧಿಯ ಹಣವನ್ನು ಸೋನಿಯಾ ಗಾಂಧಿಗೆ ನೀಡಲಾಗುತ್ತಿದೆ ಎಂದು ಹೇಳುವುದಕ್ಕಿಂತ ಹೆಚ್ಚು ಮೂರ್ಖತನದ ಹೇಳಿಕೆ ಇನ್ನೊಂದು ಇರಲಾರದು. ಸೋನಿಯಾ ಗಾಂಧಿ ಅವರು ಒಂದು ರೂಪಾಯಾದರೂ ತೆಗೆದುಕೊಂಡಿರುವುದಕ್ಕೆ ಕಂಗನಾ ಸಾಕ್ಷಿ ನೀಡಬೇಕು. ಇಲ್ಲವೇ ಇಂತಹ ಆಧಾರರಹಿತ ಆರೋಪ ಮಾಡಿದ್ದಕ್ಕಾಗಿ ಸೋನಿಯಾ ಗಾಂಧಿ ಅವರಲ್ಲಿ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ.

ಕಳೆದ ತಿಂಗಳಷ್ಟೇ ರೈತರ ಪ್ರತಿಭಟನೆಯ ಕುರಿತು ಹೇಳಿಕೆ ನೀಡಿದ್ದ ಕಂಗನಾ ಅವರಿಗೆ ಬಿಜೆಪಿ ಪಕ್ಷ ವಾರ್ನಿಂಗ್ ನೀಡಿತ್ತು. ಸೂಕ್ಷ್ಮ ವಿಷಯಗಳ ಬಗ್ಗೆ ಹೇಳಿಕೆ ನೀಡದಂತೆ ಬಿಜೆಪಿ ಅವರಿಗೆ ಎಚ್ಚರಿಕೆ ನೀಡಿತ್ತು. ಆದರೆ ಇದಾವುದಕ್ಕೂ ಕಿವಿಗೊಡದ ಕಂಗನಾ ಇನ್ನಷ್ಟು ವಿವಾದಿತ ಹೇಳಿಕೆಗಳನ್ನು ನೀಡುವುದನ್ನು ಮುಂದುವರಿಸಿದ್ದಾರೆ.

# ತಮಿಳುನಾಡು ರಾಜ್ಯಪಾಲ ವಿವಾದಾತ್ಮಕ ಹೇಳಿಕೆ



**ಚೆನ್ನೈ, ಸೆ.23:** ಜಾತ್ಯತೀತೆಯು ಯುರೋಪಿಯನ್ ಪರಿಕಲ್ಪನೆಯಾಗಿದ್ದು, ಭಾರತದಲ್ಲಿ ಇದರ ಅಗತ್ಯವಿಲ್ಲ ಎಂದು ಹೇಳುವ ಮೂಲಕ ತಮಿಳುನಾಡು ರಾಜ್ಯಪಾಲ ಆರ್.ಎನ್.ರವಿ ವಿವಾದಕ್ಕೀಡಾಗಿದ್ದಾರೆ.

ಕನ್ಯಾಕುಮಾರಿಯಲ್ಲಿ ನಡೆದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಈ ದೇಶದ ಜನರ ಮೇಲೆ ಅನೇಕ ವಂಚನೆಗಳು ನಡೆದಿವೆ ಮತ್ತು ಅವುಗಳಲ್ಲಿ ಒಂದು ಜಾತ್ಯತೀತತೆಯ ತಪ್ಪು ವ್ಯಾಖ್ಯಾನವಾಗಿದೆ. ಜಾತ್ಯತೀತತೆಯ ಅರ್ಥವೇನು... ಇದು ಯೂರೋಪಿಯನ್ ಪರಿಕಲ್ಪನೆಯಾಗಿದ್ದು, ಭಾರತದಲ್ಲಿ ಇದರ ಅಗತ್ಯವಿಲ್ಲ ಎಂದರು.

ಚರ್ಚ್ ಮತ್ತು ರಾಜರ ನಡುವಿನ ಸಂಘರ್ಷದಿಂದಾಗಿ ಯುರೋಪ್ನಲ್ಲಿ ಜಾತ್ಯತೀತತೆ ಹುಟ್ಟಿಕೊಂಡಿತು. ಸ್ವಾತಂತ್ರ್ಯ ಬಂದಾಗ ಸಂವಿಧಾನ ರಚನೆ ವೇಳೆ ಯಾರೋ ಜಾತ್ಯತೀತತೆಯ ಬಗ್ಗೆ ಚರ್ಚೆ ಮಾಡಲು ಮುಂದಾಗಿದ್ದರು. ಸೆಕ್ಯುಲರಿಸಂ ಯುರೋಪಿನ ಪರಿಕಲ್ಪನೆಯಾಗಿದ್ದು ಅದು ಅಲ್ಲಿಯೇ ಉಳಿಯಬೇಕು ಎಂದು ಹೇಳಿದರು. ಇಪ್ಪತ್ತೈದು ವರ್ಷಗಳ ನಂತರ ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಅಭದ್ರತೆಯ ಪ್ರಧಾನಿಯೊಬ್ಬರು ಜಾತ್ಯತೀತತೆಯನ್ನು ಸಂವಿಧಾನದಲ್ಲಿ ಸೇರಿಸಿ ಕೆಲವು ವರ್ಗದ ಜನರನ್ನು ಸಮಾಧಾನಪಡಿಸುವ ಪ್ರಯತ್ನ ಮಾಡಿದರು ಎಂದರು

# ಶ್ರೀಕ್ಷೇತ್ರ ಧರ್ಮಸ್ಥಳದಲ್ಲಿ 26ನೇ ವರ್ಷದ ಭಜನಾ ಕಮ್ಮಟ



ಶ್ರೀ ಕ್ಷೇತ್ರ ಧರ್ಮಸ್ಥಳದಲ್ಲಿ ನಡೆಯುತ್ತಿರುವ 26ನೇ ವರ್ಷದ ಭಜನಾ ಕಮ್ಮಟದ 2ನೇ ದಿನದ ಕಾರ್ಯಕ್ರಮದಲ್ಲಿ

ಸಮುದ್ರ ಯಾರನ್ನು ಮುಳುಗಿಸುವುದಿಲ್ಲ. ದೋಣಿಯಲ್ಲಿರುವ ದೋಷ ಮುಳುಗಿಸುತ್ತದೆ. ವ್ಯಕ್ತಿಯ ದುರಭ್ಯಾಸ ವ್ಯಕ್ತಿಯನ್ನು ಮುಗಿಸುತ್ತದೆ ಎಂದು ವಿವೇಕ್ ವಿ.ಪ್ಯಾಸ್ ನುಡಿದರು.

ಭಜಕನಿಗೆ ಕಾಳಜಿ ಇರಬೇಕು, ಜ್ಞಾನ ಇರಬೇಕು, ಭಕ್ತಿ–ಶ್ರದ್ಧೆ ಇರಬೇಕು. ಭಕ್ತಿ ಇಲ್ಲದ ಭಜನೆ ವ್ಯರ್ಥ. ವ್ಯಸನದಲ್ಲಿ ಬಿದ್ದವ ವ್ಯಸನದಲ್ಲಿ ಸಾಯುತ್ತಾನೆ. ವ್ಯಸನಿಯಾದ ವ್ಯಕ್ತಿಯನ್ನು ಕುಟುಂಬ, ಸಮಾಜ ದೂರ ಮಾಡುತ್ತದೆ. ವ್ಯಕ್ತಿಯ ಸೋಲಿಗೆ ದೌರ್ಬಲ್ಯಗಳೆ ಮೂಲ ಕಾರಣವಾಗಿದೆ. ಯಾವ ಹೆಣ್ಣಿಗೂ ಕುಡುಕ ಗಂಡ ಬೇಡ, ಯಾವ ಕುಟುಂಬಕ್ಕೂ ವ್ಯಸನಿಯಾದವ ಬೇಡ, ಯಾವ ದೇವರಿಗೂ ಕುಡುಕ ಭಕ್ತ ಬೇಡ ಎಂದು ಭಜನಾ ಕಮ್ಮಟದ 2ನೇ ದಿನದ ಉಪನ್ಯಾಸ ಕಾರ್ಯಕ್ರಮದಲ್ಲಿ ಆರೋಗ್ಯಕರ ಅಭ್ಯಾಸಗಳ ಕುರಿತು ಜನಜಾಗೃತಿ ವೇದಿಕೆಯ ಪ್ರಾದೇಶಿಕ ನಿರ್ದೇಶಕರಾದ ವಿವೇಕ್ ವಿ. ಪ್ಯಾಸ್‌ರವರು ಉಪನ್ಯಾಸ ನೀಡಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಉಷಾ ಹೆಬ್ಬಾರ್, ಸಂಗೀತ ವಿದುಷಿ ಮಣಿಪಾಲ, ಹಾಗೂ ಮನೋರಮ ತೋಳ್ಪಾಡಿತ್ತಾಯ, ಸುನಿಲ್ ಕಲ್ಕೋಪ್ಪ ಇವರು ಭಜನಾ ಹಾಡುಗಳನ್ನು 176 ಮಂದಿ ಭಜಕರಿಗೆ ಕಲಿಸಿಕೊಟ್ಟರು. ಡಾ.ಡಿ.ವೀರೇಂದ್ರ ಹೆಗ್ಗಡೆಯವರು, ಮಾತೃಶ್ರೀ ಹೇಮಾವತಿ ವಿ. ಹೆಗ್ಗಡೆಯವರು, ಮೋಹನದಾಸ ಪರಮಹಂಸ ಸ್ವಾಮೀಜಿಯವರು, ಉಪಸ್ಥಿತರಿದ್ದರು.

ಭಜನಾ ಕಮ್ಮಟದ ರಾಜ್ಯ ಸಂಚಾಲಕರಾದ ಸುಬ್ರಹ್ಮಣ್ಯ ಪ್ರಸಾದ್, ಕಾರ್ಯದರ್ಶಿಗಳಾದ ವೀರು ಶೆಟ್ಟಿ, ಕೋಶಾಧಿಕಾರಿ ಧನ್ಯಕುಮಾರ್, ಸದಸ್ಯರಾದ ಶ್ರೀನಿವಾಸರಾವ್, ರತ್ನವರ್ಮ ಜೈನ್‌ರವರು ದಿನದ ಕಾರ್ಯಕ್ರಮವನ್ನು ಸಂಘಟಿಸಿದರು, ಪೂರ್ಣಿಮಾ ಜೋಶಿ ಕಾರ್ಯಕ್ರಮ ನಿರೂಪಿಸಿದರು.

ಎಸ್.ಡಿ.ಎಮ್ ರಂಗ ಶಿಕ್ಷಣ ಕೇಂದ್ರ, ಉಜಿರೆ ಇವರು ಬೇಂದ್ರೆ ನಾಟಕವನ್ನು ಪ್ರದರ್ಶಿಸಿದರು. ಯೋಗ ತರಬೇತಿಯನ್ನು ಡಾ. ಐ. ಶಶಿಕಾಂತ್ ಜೈನ್ ನಡೆಸಿಕೊಟ್ಟರು. ಪರಿಷತ್ ಅಧ್ಯಕ್ಷರಾದ ಚಂದ್ರಶೇಖರ ಸಾಲ್ಯನ್, ಉಪಾಧ್ಯಕ್ಷರಾದ ರಾಜೇಂದ್ರ ಕುಮಾರ್ ಸದಸ್ಯರಾದ ಸತೀಶ್ ಪೈ, ಭವಾನಿ, ಮೋಹನ್ ಶೆಟ್ಟಿ ಸಹಕರಿಸಿದರು. ಕುಣಿತ ಭಜನೆ ತರಬೇತಿಯನ್ನು ಸಂದೇಶ, ವಿನ್ಯಾಶ್, ನಾಗೇಶ್ ಹಾಗೂ ಚೈತ್ರ ನಡೆಸಿಕೊಟ್ಟರು. ಶಿಬಿರಾರ್ಥಿಗಳಾಗಿ ರಾಘವೇಂದ್ರ, ಸಂತೋಷ್ ಪಿ. ಕರ್ತವ್ಯ ನಿರ್ವಹಿಸಿದರು.



ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸೋಮವಾರ ನ್ಯೂಯಾರ್ಕ್‌ನಲ್ಲಿ ಭಾರತೀಯ ಸಮುದಾಯವನ್ನು ಭೇಟಿ ಮಾಡಿದ್ದರು.

# ಭಾರತದಲ್ಲಿ ಮೊದಲ ಮಂಕಿಪಾಕ್ಸ್ ಕ್ಲೇಡ್ 1 ಪ್ರಕರಣ ವರದಿ

**ನವದೆಹಲಿ, ಸೆ.23:** ಭಾರತದಲ್ಲಿ ಮೊದಲ ಮಂಕಿಪಾಕ್ಸ್ ಕ್ಲೇಡ್ 1 ಪ್ರಕರಣ ವರದಿಯಾಗಿದೆ. ಹೀಗಾಗಿ ವಿಶ್ವ ಆರೋಗ್ಯ ಸಂಸ್ಥೆಯಿಂದ ಸಾರ್ವಜನಿಕ ತುರ್ತು ಪರಿಸ್ಥಿತಿಯನ್ನು ಘೋಷಿಸಿರುವುದಾಗಿ ಮೂಲಗಳು ತಿಳಿಸಿವೆ. ಭಾರತವು ಸೋಮವಾರ ಎಂಪೋಕ್ಸ್‌ನ ಕ್ಲೇಡ್ 1 ಬಿ ತಳಿಯ ಮೊದಲ ಪ್ರಕರಣವನ್ನು ವರದಿ ಮಾಡಿದೆ.

ರೋಗಿಯು ಕೇರಳದ ಮಲಪ್ಪುರಂ ಮೂಲದವರು. ಅವರು ದುಬೈನಿಂದ ಮರಳಿದ್ದಾರೆ. ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯುಎಚ್‌ಒ) ಪ್ರಕಾರ, ಎಂಪೋಕ್ಸ್ ವೈರಸ್ನ ಎರಡು ವಿಭಿನ್ನ ತಳಿಗಳಿವೆ – ಕ್ಲೇಡ್ 1 ಮತ್ತು ಕ್ಲೇಡ್ 2.

ಡಬ್ಲ್ಯುಎಚ್‌ಒ ಕ್ಲೇಡ್ 1 ಬಿ ಸ್ಟ್ರೈನ್ ಅನ್ನು ಸಾರ್ವಜನಿಕ ಆರೋಗ್ಯ ತುರ್ತುಸ್ಥಿತಿ ಎಂದು ಘೋಷಿಸಿತು. ಈ ತಿಂಗಳ ಆರಂಭದಲ್ಲಿ, ಕ್ಲೇಡ್ 2 ನ ಮೊದಲ ಎಂಪೋಕ್ಸ್ ಪ್ರಕರಣ ಭಾರತದಲ್ಲಿ ದೃಢಪಟ್ಟಿತು. ಕೇಂದ್ರ ಆರೋಗ್ಯ ಸಚಿವಾಲಯದ ಪ್ರಕಾರ, ಕ್ಲೇಡ್ 2 ಸ್ಟ್ರೈನ್ ಪ್ರಸ್ತುತ ಸಾರ್ವಜನಿಕ ಆರೋಗ್ಯ ತುರ್ತುಸ್ಥಿತಿಯ ಭಾಗವಲ್ಲ. ಈ ಹಿಂದೆ, ಜುಲೈ 2022 ರಿಂದ ಭಾರತದಲ್ಲಿ ವರದಿಯಾದ 30 ಪ್ರಕರಣಗಳು ಕ್ಲೇಡ್ 2 ಸ್ಟ್ರೈನ್ನಿಂದ ಉಂಟಾಗಿವೆ.




ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸೋಮವಾರ ಜೈಪುರದಲ್ಲಿ ಸೈನಿಕ ಶಾಲೆಯನ್ನು ಉದ್ಘಾಟಿಸಿದರು.

# ಹಾವು ಕಚ್ಚಿ ಮೃತಪಟ್ಟ ವ್ಯಕ್ತಿ ಚಿತೆಗೆ ಅದೇ ಹಾವನ್ನು ಹಾಕಿ ಕೊಂದ ಜನರು

**ರಾಯ್ಪುರ, ಸೆ.23:** ವ್ಯಕ್ತಿಯೊಬ್ಬರು ವಿಷಕಾರಿ ಹಾವು ಕಚ್ಚಿ ಸಾವನ್ನಪ್ಪಿದ್ದರು, ಸ್ಥಳೀಯರು ಅದೇ ಹಾವನ್ನು ಹಿಡಿದು ವ್ಯಕ್ತಿಯ ಚಿತೆಗೆ ಹಾಕಿ ಹತ್ಯೆ ಮಾಡಿರುವ ಘಟನೆ ಛತ್ತೀಸ್‌ಗಢದ ಕೊರ್ಬಾ ಜಿಲ್ಲೆಯಲ್ಲಿ ನಡೆದಿದೆ. ಕೆಲವು ಸ್ಥಳೀಯರು ಹಾವು ಬೇರೆಯವರಿಗೆ ಹಾನಿ ಮಾಡಬಹುದೆಂಬ ಭಯದಿಂದ ಅದನ್ನು ಚಿತೆಯ ಮೇಲೆ ಎಸೆದು ಸುಟ್ಟು ಹಾಕಿದ್ದಾರೆ.

ಈ ಸರೀಸೃಪಗಳು ಮತ್ತು ಹಾವು ಕಡಿತದ ಬಗ್ಗೆ ಜನರಿಗೆ ತಿಳಿವಳಿಕೆ ನೀಡುವ ಅಗತ್ಯವಿದೆ ಎಂದು ಜಿಲ್ಲಾಧಿಕಾರಿ ಹೇಳಿದ್ದಾರೆ. ಕೆಲವು ವ್ಯಕ್ತಿಗಳು ಹಗ್ಗವನ್ನು ಬಳಸಿ ಹಾವನ್ನು ಎಳೆಯುತ್ತಿರುವುದನ್ನು ತೋರಿಸುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.

ಶನಿವಾರ ರಾತ್ರಿ ಬೈಗಾಮಾರ್ ಗ್ರಾಮದ ತನ್ನ ಮನೆಯ ಕೋಣೆಯಲ್ಲಿ ಹಾಸಿಗೆಯನ್ನು ಜೋಡಿಸುತ್ತಿದ್ದಾಗ ದಿಗೇಶ್ವರ ಎಂಬುವವರಿಗೆ ಹಾವು ಕಡಿದಿದೆ. ಈ ಬಗ್ಗೆ ರಥಿಯಾ ಅವರ ಕುಟುಂಬಕ್ಕೆ ಮಾಹಿತಿ ನೀಡಿದ ನಂತರ ಅವರನ್ನು ಕೊರ್ಬಾದ ಸರ್ಕಾರಿ ಆಸ್ಪತ್ರೆಗೆ ಸಾಗಿಸಲಾಯಿತು, ಅಲ್ಲಿ ಅವರು ಚಿಕಿತ್ಸೆ ನೀಡುವ ಸಮಯದಲ್ಲಿ ಭಾನುವಾರ ಬೆಳಗ್ಗೆ ಸಾವನ್ನಪ್ಪಿದ್ದಾರೆ.

ಮರಣೋತ್ತರ ಪರೀಕ್ಷೆಯ ನಂತರ ಮೃತದೇಹವನ್ನು ಅಂತ್ಯಕ್ರಿಯೆಗಾಗಿ ಕುಟುಂಬದವರಿಗೆ ಹಸ್ತಾಂತರಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಘಟನೆಯ ನಂತರ ಗ್ರಾಮಸ್ಥರು ಹಾವನ್ನು ಹಿಡಿದು ಮುಚ್ಚಿದ ಬುಟ್ಟಿಯೊಳಗೆ ಇಡುವಲ್ಲಿ ಯಶಸ್ವಿಯಾದರು. ಬಳಿಕ ಕೋಲಿಗೆ ನೇತು ಹಾಕಿದ ಹಗ್ಗದಿಂದ ಹಾವನ್ನು ಕಟ್ಟಿ ಹಾಕಿದ್ದಾರೆ.

ಅಂತ್ಯಕ್ರಿಯೆಗೆ ರಥಿಯಾ ಮನೆಯಿಂದ ದೇಹವನ್ನು ಸ್ಮಶಾನಕ್ಕೆ ಕೊಂಡೊಯ್ಯುವಾಗ, ಗ್ರಾಮಸ್ಥರು ಹಾವನ್ನು ಸ್ಥಳಕ್ಕೆ ತೆಗೆದುಕೊಂಡು ಹೋಗಿದ್ದರು. ನಂತರ, ಅಂತ್ಯಕ್ರಿಯೆಯ ಚಿತೆಗೆ ಹಾವನ್ನು ಹಾಕಿ ಜೀವಂತವಾಗಿ ಸುಟ್ಟುಹಾಕಿದರು. ವಿಷಕಾರಿ ಹಾವು ಬೇರೊಬ್ಬರನ್ನು ಕಚ್ಚಬಹುದೆಂಬ ಭಯದಿಂದ ಅದನ್ನು ಚಿತೆಗೆ ಸುಟ್ಟು ಹಾಕಿದ್ದೇವೆ ಎಂದು ಗ್ರಾಮಸ್ಥರು ಹೇಳಿದ್ದಾರೆ.

# ನೆರೆಯ ರಾಜ್ಯಗಳು ಒಡ್ಡುತ್ತಿರುವ ಸವಾಲಿನ ನಡುವೆಯೂ ಬಂಡವಾಳ ಹೂಡಿಕೆಯಲ್ಲಿ ಕರ್ನಾಟಕ ಮುಂಚೂಣಿ



**ಬೆಂಗಳೂರು ಸೆ 23 :** ನೆರೆಯ ರಾಜ್ಯಗಳು ಒಡ್ಡುತ್ತಿರುವ ಸವಾಲಿನ ನಡುವೆಯೂ ರಾಜ್ಯ ಬಂಡವಾಳ ಹೂಡಿಕೆಯಲ್ಲಿ ಮುಂಚೂಣಿಯಲ್ಲಿದ್ದು, ಹೊಸ ಉದ್ದಿಮೆಗಳ ಸ್ಥಾಪನೆಗೆ ಸರ್ಕಾರ ಎಲ್ಲಾ ಸಹಕಾರ ನೀಡಲಿದೆ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ ಹೇಳಿದ್ದಾರೆ

ರಾಜ್ಯ ಹಾಗೂ ಭಾರತ ದೇಶ ವಿಶ್ವದ ಆರ್ಥಿಕ ಹಾಗೂ ಕೈಗಾರಿಕಾ ಭೂಪಟದಲ್ಲಿ ತಮ್ಮದೇ ಆದ ವಿಶೇಷ ಸ್ಥಾನ ಪಡೆದುಕೊಂಡಿವೆ. ತೃತೀಯ ಹಂತದ ದೇಶಗಳಲ್ಲಿ ಗುರುತಿಸಲ್ಪಡುತ್ತಿದ್ದ ಭಾರತದ ದೇಶ ವಿಶ್ವದಲ್ಲಿ ವೇಗವಾಗಿ ಬೆಳೆಯುತ್ತಿರುವ ಮೂರನೇ ಆರ್ಥಿಕತೆಯಾಗಿ ಬೆಳೆದು ನಿಂತಿದೆ ಎಂದು ತಿಳಿಸಿದ್ದಾರೆ. ಸರ್ ಎಂ ವಿಶ್ವೇಶ್ವರಯ್ಯ ಮೆಮೋರಿಯಲ್ ಪ್ರಶಸ್ತಿಯನ್ನು ಪ್ರಧಾನ ಮಾಡಿ ಅವರು ಮಾತನಾಡಿದ ಅವರು, ದೇಶದಲ್ಲಿ ಸಿಗುವ ಉತ್ತಮ ಕೌಶಲ್ಯ ಹೊಂದಿರುವ ಮಾನವ ಸಂಪನ್ಮೂಲ ಬೇರೆ ಯಾವುದೇ ದೇಶದಲ್ಲೂ ದೊರೆಯುವುದಿಲ್ಲ. ಭಾರತ ದೇಶ ಅದರಲ್ಲೂ ಕರ್ನಾಟಕ ರಾ ಬುನಾದಿಯನ್ನು ಹಾಕಿದ್ದಾರೆ ಎಂದರು.

ರಾಜ್ಯ ಕೈಗಾರಿಕಾ ರಂಗದಲ್ಲಿ ವೇಗವಾಗಿ ಬೆಳೆಯುತ್ತಿದೆ, ದೇಶದ ಶೇಕಡಾ 50 ರಷ್ಟು ಸಾಫ್ಟ್‌ವೇರ್ ಬೆಂಗಳೂರಿನಲ್ಲಿ ತಯಾರಾಗುತ್ತದೆ. ನಾವು ಯಾವುದೇ ಕ್ಷೇತ್ರದಲ್ಲೂ ಕಡಿಮೆಯಿಲ್ಲ. ಇದು ಸರ್ ಎಂ ವಿ ಅವರ ದೂರದೃಷ್ಟಿ. ಕೈಗಾರಿಕೆಗಳ ಸ್ಥಾಪನೆಗೆ ಕರ್ನಾಟಕ ರಾಜ್ಯ ಸರಕಾರ ಬಹಳಷ್ಟು ಉತ್ತಮ ಸೌಲಭ್ಯಗಳನ್ನು ಒದಗಿಸುತ್ತಾ ಬಂದಿದೆ. ಆದರೂ, ನಮ್ಮ ನೆರೆಯ ರಾಜ್ಯಗಳೂ ನೀಡುತ್ತಿರುವ ಸವಾಲನ್ನ ಸಮರ್ಥವಾಗಿ ನಿಭಾಯಿಸಬೇಕಾಗಿದೆ ಎಂದರು. ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಮಹರಾಷ್ಟ್ರದಂತಹ ರಾಜ್ಯಗಳು ನೀಡುತ್ತಿರುವ ಸವಾಲನ್ನು ನಿಭಾಯಿಸುವ ನಿಟ್ಟಿನಲ್ಲಿ ನಮ್ಮ ಸರಕಾರ ಯಾವಾಗಲೂ ಸಿದ್ದವಾಗಿದೆ. ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ನಮ್ಮ ಸರಕಾರ ಎಲ್ಲಾ ಸಹಕಾರ ನೀಡಲಿದೆ ಎಂದರು. ರಾಜ್ಯದಲ್ಲಿ ಬಂಡವಾಳ ಹೂಡಿಕೆ ಹೆಚ್ಚಾಗಬೇಕು, ಯುವ ಜನರಿಗೆ ಉದ್ಯೋಗಾಕಾಶ ಹೆಚ್ಚಾಗಬೇಕು ಹಾಗೆಯೇ ಯುವ ಜನರು ಉದ್ದಿಮೆಗಳನ್ನು ಪ್ರಾರಂಭಿಸಲು ಮುಂದಾಗುವಂತಾಗಬೇಕು ಎನ್ನುವುದು ನಮ್ಮ ಸರಕಾರದ ಗುರಿಯಾಗಿದೆ ಎಂದರು.

ತುಮುಕೂರಿನಲ್ಲಿ ಏಷಿಯಾದ ಅತಿದೊಡ್ಡ ಕೈಗಾರಿಕಾ ಹಬ್ ನಿರ್ಮಾಣವಾಗುತ್ತಿದೆ. 20 ಸಾವಿರ ಎಕರೆಗಳ ಕೈಗಾರಿಕಾ ಭೂಮಿ ಸಿದ್ದವಾಗಿದ್ದು ಹೆಚ್‌ಎಲ್ ನಂತಹ ಪ್ರಮುಖ ಕೈಗಾರಿಕೆಗಳು ಸ್ಥಾಪನೆಯಾಗಿವೆ. ಬೆಂಗಳೂರನ್ನು ಹೊರತುಪಡಿಸಿ ಬೇರೆ ಪಟ್ಟಣಗಳತ್ತ ಉದ್ಯಮಿಗಳು ಗನಮ ಹರಿಸಬೇಕು ಎಂದರು



ವೀರಶೈವ ಲಿಂಗಾಯತ ವೇದಿಕೆಯ ಪ್ರಶಾಂತ್ ಕಲ್ಲೂರ್ ಅವರು ಸೋಮವಾರ ಏರ್ಪಡಿಸಿದ್ದ ಸುತ್ತೂರು ಲಿಂಗೈಕ್ಯ ಜಗದ್ಗುರು ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಜನ್ಮದಿನೋತ್ಸವ ಅಂಗವಾಗಿ ಏರ್ಪಡಿಸಿದ್ದ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಪೂಜ್ಯ ಸುತ್ತೂರು ಜಗದ್ಗುರು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಉದ್ಘಾಟಿಸಿದರು. ಪಾಂಡೋಮಟ್ಟಿ ಸ್ವಾಮೀಜಿ, ಕನ್ನಡ ಚಿಂತಕ ಪಾಲನೇತ್ರ, ಸಂಯೋಜಕ ಪ್ರಶಾಂತ್ ಕಲ್ಲೂರು, ಹಾಗೂ ಇನ್ನಿತರ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಪೂಜ್ಯರು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಸಿ.ಸೋಮಶೇಖರ್ ಅವರನ್ನು ಸನ್ಮಾನಿಸಿದರು.

# ಅರ್ಕಾವತಿ ಡಿನೋಟಿಫಿಕೇಷನ್ ಪ್ರಕರಣ: ಕೆಂಪಣ್ಣ ಆಯೋಗದ ವರದಿ ರಾಜ್ಯ ಸರ್ಕಾರ ಬಿಡಗಡೆ ಸಿ.ಟಿ. ರವಿ ಆಗ್ರಹ



**ಬೆಂಗಳೂರು, ಸೆ. 23 :** ಅರ್ಕಾವತಿ ಡಿನೋಟಿಫಿಕೇಷನ್ ಪ್ರಕರಣ ಕುರಿತಂತೆ ತನಿಖೆ ನಡೆಸಿದ್ದ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಕೆಂಪಣ್ಣ ಆಯೋಗದ ವರದಿಯನ್ನು ತಕ್ಷಣವೇ ರಾಜ್ಯ ಸರ್ಕಾರ ಬಿಡುಗಡೆ ಮಾಡಬೇಕೆಂದು ವಿಧಾನಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಸಿ.ಟಿ. ರವಿ ಸರ್ಕಾರಕ್ಕೆ ಆಗ್ರಹಿಸಿದ್ದಾರೆ. ಕೋರ್ ಕಮಿಟಿ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೀಡೂ ಹೆಸರಿನಲ್ಲಿ ಮೊದಲ ಬಾರಿಗೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯನವರು 450ಕ್ಕೂ ಹೆಚ್ಚು ಎಕರೆ ಡಿನೋಟಿಫಿಕೇಷನ್ ಮಾಡಿರುವ ಆರೋಪಕ್ಕೆ ಸಿಲುಕಿದ್ದಾರೆ.

ಇದರ ಬಗ್ಗೆ ಅಂದಿನ ಸರ್ಕಾರವೇ ತನಿಖಾ ಆಯೋಗವನ್ನು ರಚಿಸಿತ್ತು. ಹಲವು ವರ್ಷಗಳು ಕಳೆದರೂ ಆಯೋಗದ ವರದಿ ಬಹಿರಂಗಗೊಂಡಿಲ್ಲ. ಸರ್ಕಾರ ವಿಳಂಬ ಮಾಡದೆ ಬಿಡುಗಡೆ ಮಾಡಬೇಕೆಂದು ಆಗ್ರಹಿಸಿದರು. ಕೆಂಪಣ್ಣ ಆಯೋಗದ ವರದಿಯನ್ನು ವಿಧಾನಮಂಡಲದ ಉಭಯ ಸದನಗಳಲ್ಲಿ ಮಂಡನೆ ಮಾಡಬೇಕೆಂದು ನಾನೇ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದಿದ್ದೆ. ಇದಕ್ಕೆ ಈಗಲೂ ಉತ್ತರ ಕೊಟ್ಟಿಲ್ಲ. ಇದು ಜಾಣ ಮೌನವೇ ಎಂದು ಪ್ರಶ್ನಿಸಿದರು.ಕೆಂಪಣ್ಣ ಆಯೋಗದ ವರದಿಯನ್ನು ಮಂಡಿಸಬೇಕು. ವರದಿ ಆಧಾರದ ಮೇಲೆ ಯಾರು ತಪ್ಪಿತಸ್ಥರು ಇದ್ದಾರೋ ಅವರ ಮೇಲೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಿ ಇಲ್ಲದಿದ್ದರೆ ಸಿದ್ದರಾಮಯ್ಯ ಪರಮ ಭ್ರಷ್ಟರು ಎನ್ನುವುದರಲ್ಲಿ ಇನ್ನೊಂದು ಮಾತಿಲ್ಲ ಎಂದರು.ನಿನ್ನೆ ಸಿಎಂ ಸಿದ್ಧರಾಮಯ್ಯ ಪತ್ರಕರ್ತರ ಪ್ರಶ್ನೆ ಅರ್ಧ ಹೇಳಿಕೆ ಕೊಟ್ಟಿದ್ದಾರೆ. ರಿಡೂ ಮಾಡಿದ್ದು ನಾನಲ್ಲ. ಅದು ಸುಪ್ರೀಂಕೋರ್ಟ್ ತೀರ್ಪು ಎಂದಿದ್ದಾರೆ.

ಸಮಿತಿ ಕೊಟ್ಟ ವರದಿ ಬೇರೆ ಇತ್ತು. ಒಟ್ಟು 880 ಎಕರೆ ರಿಡೂ ಮಾಡಿದ್ದಾರೆ. ಬಿಡಿಎ ಅಭಿವೃದ್ಧಿ ಪಡಿಸಿದ ಲೇಔಟ್ ಇದ್ದರೇ, ಡಿನೋಟಿಫಿಕೇಶನ್ ಮಾಡಲು ತಿಳಿಸಿತ್ತು. ಆದರೆ 16 ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಸ್ಥಳಕ್ಕೆ ಡಿನೋಟಿಫಿಕೇಶನ್ ಮಾಡಿಕೊಟ್ಟಿದ್ದಾರೆ. ಆರ್ಕಾವತಿ ಬಡಾವಣೆಗೆ ನಿವೇಶನ ಸಿಕ್ಕಿತ್ತು. ಕೆಂಪೇಗೌಡ ಬಡಾವಣೆಗೆ ಅವಕಾಶ ಕೊಟ್ಟಿದ್ದೀರಿ. ಬಂಡೂರು ರಾಮಸ್ವಾಮಿ ಆಯೋಗ ಕೊಟ್ಟಿದ್ದ ವರದಿಯಲ್ಲಿನ ನಿಯಮ ಗಾಳಿಗೆ ತೂರಿದ್ದೀರಿ. ವರದಿಯನ್ನು ಹೊರಗೆ ತರಬೇಕಿತ್ತು. ಆರ್ಕಾವತಿ ಬಡಾವಣೆಯಲ್ಲಿ ನಿಮ್ಮ ಸರ್ಕಾರ ಅಕ್ರಮ ಮಾಡಿದೆ. ಅದನ್ನು ಟೇಬಲ್ ಮಾಡಬೇಕಿತ್ತು. ಆರ್ಕಾವತಿಯಲ್ಲಿ ದೊಡ್ಡ ಪ್ರಮಾಣದ ಭ್ರಷ್ಟಾಚಾರ ನಡೆದಿದೆ. ಅದರಲ್ಲಿ ನಿಮ್ಮ ಪಾಲು ಇದೆ. ನೀವು ಭ್ರಷ್ಟಾಚಾರಿಗಳನ್ನು ಪೋಷಿಸಿದ್ದೀರಿ ಎಂದು ಸಿದ್ಧರಾಮಯ್ಯರ ವಿರುದ್ಧ ವಾಗ್ದಾಳಿ ನಡೆಸಿದರು.

ಶಾಸಕ ಮುನಿರತ್ನರ ವಿಚಾರದಲ್ಲಿ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ. ಮುನಿರತ್ನರನ್ನು ರಾಜಕೀಯದಿಂದ ದೂರ ಸರಿಸಬೇಕೆಂದು ಹುನ್ನಾರ ನಡೆಸುತ್ತಿದ್ದಾರೆ. ಇದರ ಬಗ್ಗೆ ಕೋರ್ ಕಮಿಟಿ ಸಭೆಯಲ್ಲಿ ಮಾತುಕತೆ ನಡೆಸಿದ್ದೇವೆ ಎಂದು ಇದೇ ವೇಳೆ ಅವರು ತಿಳಿಸಿದರು.

# ರಾಜ್ಯದಲ್ಲಿ ಮೋಡಕವಿದ ವಾತಾವರಣ

**ಬೆಂಗಳೂರು, ಸೆ. 23 :** ನೈರುತ್ಯ ಮುಂಗಾರು ಮತ್ತೆ ಕಳೆದ ಎರಡು ದಿನಗಳಿಂದ ಚೇತರಿಕೆಯಾಗಿದ್ದು, ಕರಾವಳಿಯಲ್ಲಿ ವ್ಯಾಪಕವಾಗಿ ಉಳಿದಂತೆ ರಾಜ್ಯದ ಒಳನಾಡಿದಲ್ಲಿ ಚದುರಿದಂತೆ ಹಗುರದಿಂದ ಸಾಧಾರಣ ಮಳೆಯಾಗಿದೆ. ಹವಾಮಾನ ಮುನ್ಸೂಚನೆ ಪ್ರಕಾರ ಇನ್ನೂ ಮೂರು ದಿನಗಳ ಕಾಲ ರಾಜ್ಯದಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಮುನ್ಸೂಚನೆಗಳಿದ್ದು, ಹವಾಮಾನ ಇಲಾಖೆ ಯಲ್ಲೋ ಅಲರ್ಟ್ ಘೋಷಣೆ ಮಾಡಿದೆ.ನಿನ್ನೆ ಕರಾವಳಿಯಲ್ಲಿ ವ್ಯಾಪಕ ಪ್ರಮಾಣದಲ್ಲಿ ಉತ್ತಮ ಮಳೆಯಾಗಿದೆ.

ಒಂದೆರಡು ಕಡೆ ಭಾರಿ ಮಳೆಯಾಗಿದೆ. ಉತ್ತರ ಕರ್ನಾಟಕ ಭಾಗದಲ್ಲೂ ಹಗುರದಿಂದ ವ್ಯಾಪಕ ಪ್ರಮಾಣದ ಮಳೆಯಾಗಿದೆ. ಕಲ್ಯಾಣ ಕರ್ನಾಟಕ ಹಾಗೂ ದಕ್ಷಿಣ ಕರ್ನಾಟಕ ಭಾಗದಲ್ಲಿ ಚದುರಿದಂತೆ ಕೆಲವೆಡೆ ಮಳೆಯಾಗಿದೆ. ಬಂಗಾಳಕೊಲ್ಲಿ ಹಾಗೂ ಅರಬ್ಬೀ ಸಮುದ್ರದಲ್ಲಿ ಮೇಲ್ಮೈ ಸುಳಿಗಾಳಿ ಉಂಟಾಗಿರುವ ಪರಿಣಾಮ ರಾಜ್ಯದಲ್ಲಿ ಮೋಡ ಕವಿದ ವಾತಾವರಣ ಕಂಡುಬರುತ್ತಿದೆ. ಆಗಾಗ್ಗೆ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಗಳಿವೆ ಎಂದು ಹವಾಮಾನ ತಜ್ಞರು ತಿಳಿಸಿದ್ದಾರೆ.

ಬಂಗಾಳ ಕೊಲ್ಲಿಯಲ್ಲಿ ಲಘು ವಾಯುಭಾರ ಕುಸಿತ ಸೃಷ್ಟಿಯಾಗುತ್ತಿದೆ. ಇದರ ಪರಿಣಾಮದಿಂದ ಮುಂದಿನ ಮೂರು ದಿನಗಳ ಕಾಲ ರಾಜ್ಯದಲ್ಲಿ ವ್ಯಾಪಕ ಪ್ರಮಾಣದ ಮಳೆ ನಿರೀಕ್ಷಿಸಬಹುದಾಗಿದೆ.

ಕರಾವಳಿ ಹಾಗೂ ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಗಳಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕರಾವಳಿ ಹಾಗೂ ಮಲೆನಾಡು ಭಾಗದ ಜಿಲ್ಲೆಗಳಲ್ಲಿ ಇಂದು ಮತ್ತು ನಾಳೆ ಗುಡುಗು, ಮಿಂಚು, ಬಲವಾದ ಮೇಲ್ಮೈ ಗಾಳಿಯೊಂದಿಗೆ ಮಳೆಯಾಗುವ ಮುನ್ಸೂಚನೆಗಳಿವೆ. ಅದೇ ರೀತಿ ಉತ್ತರ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲೂ ವ್ಯಾಪಕ ಪ್ರಮಾಣದ ಮಳೆಯಾಗಲಿದೆ. ಕೆಲವೆಡೆ ಭಾರಿ ಮಳೆಯಾಗುವ ಸಾಧ್ಯತೆಗಳಿವೆ ಎಂದು ಹೇಳಿದೆ.

# ಆಪರೇಶನ್ ಥಿಯೇಟರ್ ಉಪಕರಣಗಳ ಖರೀದಿ ಅವ್ಯವಹಾರ ಆರೋಪದಲ್ಲಿ ಹುರುಳಿಲ್ಲ: ಡಾ. ಶರಣಪ್ರಕಾಶ ಪಾಟೀಲ ಸ್ಪಷ್ಟನೆ



**ಬೆಂಗಳೂರು, ಸೆ. 23 :** ಬಿಜೆಪಿಯವರದು ಆರೋಪ ಮಾಡುವುದು ಮತ್ತು ಅದನ್ನು ಸಾಬೀತುಪಡಿಸದೇ ಓಡಿ ಹೋಗುವ (ಹಿಟ್ ಅಂಡ್ ರನ್) ಪಾಲಿಸಿ ಅನುಸರಿಸುತ್ತಿದ್ದಾರೆ. ಆಪರೇಶನ್ ಥಿಯೇಟರ್ ಉಪಕರಣಗಳ ಖರೀದಿ ಅವ್ಯವಹಾರ ಆರೋಪದಲ್ಲಿ ಯಾವುದೇ ಹುರುಳಿಲ್ಲ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ತಿಳಿಸಿದರು. ವಿಧಾನಪರಿಷತ್ನ ಬಿಜೆಪಿ ಸದಸ್ಯ ಎನ್. ರವಿಕುಮಾರ್ ಟೀಕೆ ಕುರಿತು ತಾಲ್ಲೂಕಿನ ಸುಲೇಪೇಟದಲ್ಲಿ ಸೋಮವಾರ ಪ್ರತಿಕ್ರಿಯಿಸಿದ ಅವರು, 'ಆಪರೇಷನ್ ಥಿಯೇಟರ್ ಉಪಕರಣಗಳ ಖರೀದಿಯಲ್ಲಿನ ಅವ್ಯವಹಾರದ ಆರೋಪ ಶುದ್ಧ ಸುಳ್ಳು. ಬಿಜೆಪಿಯವರಿಗೆ ಅಧಿಕಾರದ ಹಪಾಹಪಿತನ ಹೆಚ್ಚಾಗಿದೆ. ಅವರು ದಿನಕ್ಕೊಂದು ನಾಟಕದ ಮೂಲಕ ರಾಜ್ಯ ಸರ್ಕಾರ ಮತ್ತು ಸಚಿವರಿಗೆ ಕೆಟ್ಟ ಹೆಸರು ತರಲು ಯತ್ನಿಸುತ್ತಿದ್ದಾರೆ' ಎಂದು ದೂರಿದರು.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಕಾಯ್ದೆ (ಕೆಟಿಪಿಪಿ) ಪ್ರಕಾರವೇ ಟೆಂಡರ್ ಕರೆಯಲಾಗಿದೆ. ಇದರಲ್ಲಿ ಅವ್ಯವಹಾರಕ್ಕೆ ಅವಕಾಶವೇ ಇಲ್ಲ. ಸರ್ಕಾರಕ್ಕೆ ಕೆಟ್ಟ ಹೆಸರು ತರುವ ಬಿಜೆಪಿಯವರ ದುರುದ್ದೇಶ ಫಲಿಸುವುದಿಲ್ಲ ಎಂದರು.

ಸುಳ್ಳು ಆರೋಪ ಮಾಡಿದರೆ ಮಾನಹಾನಿ ಮೊಕದ್ದಮೆ ದಾಖಲಿಸಬಹುದಲ್ಲವೇ ಎಂದು ಮಾಧ್ಯಮದವರು ಪ್ರಶ್ನಿಸಿದಾಗ, ಹೀಗೆ ಮಾಡಿದರೆ ಪ್ರಜಾಪ್ರಭುತ್ವದಲ್ಲಿ ಇವರಿಗೆ ನಂಬಿಕೆಯಿಲ್ಲ. ವಿಪಕ್ಷಗಳ ನಾಯಕರನ್ನು ಮಾತನಾಡಲು ಬಿಡದೇ ಹತ್ತಿಕ್ಕಲಾಗುತ್ತಿದೆ ಎಂದು ಆರೋಪಿಸುತ್ತಾರೆ. ಹೀಗಾಗಿ ಬಿಜೆಪಿಯವರು ತಮ್ಮ ಹಳೆ ಚಾಳಿ ಮುಂದುವರಿಸಿದರೆ ಅವರ ವಿರುದ್ಧ ಕಾನೂನು ಕ್ರಮಕ್ಕೆ ಪರಿಶೀಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಅಧಿಕಾರಿಗಳಿಗೆ ಟೆಂಡರ್ ಪ್ರಕ್ರಿಯೆಯ ಸಮಗ್ರ ದಾಖಲೆ ಕೊಡಲು ಸೂಚನೆ ನೀಡಿದ್ದೇನೆ. ಬೆಂಗಳೂರಿನಲ್ಲಿಯೇ ಮಾಧ್ಯಮ ಗೋಷ್ಠಿ ನಡೆಸಿ ಆರೋಪಕ್ಕೆ ತಕ್ಕ ಉತ್ತರ ಕೊಡುತ್ತೇನೆ ಎಂದರು. 'ರಾಜ್ಯಪಾಲರ ಮೂಲಕ ಸರ್ಕಾರವನ್ನು ಪ್ರಶ್ನಿಸಲಾಗುತ್ತಿದೆ. ಜತೆಗೆ ಅಡೆತಡೆ ಮಾಡಲಾಗುತ್ತಿದೆ. ಯಾರು ಏನೇ ತಿಪ್ಪರಲಾಗ ಹಾಕಿದರೂ ಬಡವರ ಪರವಾದ ಮತ್ತು ಅಭಿವೃದ್ಧಿ ಪರವಾದ ಕಾಂಗ್ರೆಸ್ ಸರ್ಕಾರದ ನಮ್ಮ ನಿಲುವು ಬದಲಾಗುವುದಿಲ್ಲ. ರಾಜ್ಯ ಸರ್ಕಾರಕ್ಕೆ ಜನರ ದೃಷ್ಟಿಯಲ್ಲಿ ಕೆಟ್ಟ ಸರ್ಕಾರ ಎಂಬ ಹಣೆಪಟ್ಟಿ ಅಂಟಿಸಲು ಬಿಜೆಪಿ ಯತ್ನಿಸುತ್ತಿದೆ. ಇದರಲ್ಲಿ ಅವರು ಯಶಸ್ವಿಯಾಗುವುದಿಲ್ಲ' ಎಂದರು.

# ಮುನಿರತ್ನ ವಿರುದ್ಧ ದಾಖಲಾದ ಪ್ರಕರಣಗಳ ವಿಚಾರಣೆ ವಿಶೇಷ ತನಿಖಾ ತಂಡ ರಚನೆ




**ಬೆಂಗಳೂರು, ಸೆ.23 :** ಅತ್ಯಾಚಾರ, ಹನಿಟ್ರ್ಯಾಪ್ ಷಡ್ಯಂತ್ರ ಪ್ರಕರಣದಲ್ಲಿ ನ್ಯಾಯಾಂಗ ಬಂಧನದಲ್ಲಿರುವ ಬಿಜೆಪಿ ಶಾಸಕ ಮುನಿರತ್ನ ಅವರನ್ನು ಸಿಐಡಿಯ ವಿಶೇಷ ತನಿಖಾ ದಳ (ಎಸ್‌ಐಟಿ) ವಶಕ್ಕೆ ತೆಗೆದುಕೊಂಡು ತೀವ್ರ ವಿಚಾರಣೆ ನಡೆಸಿದೆ. ರಾಮನಗರ ಜಿಲ್ಲೆಯ ಕಗ್ಗಲೀಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಅತ್ಯಾಚಾರ ಪ್ರಕರಣದ ಸಂಬಂಧ ಬಂಧಿತ ಮುನಿರತ್ನಗೆ ನ್ಯಾಯಾಂಗ ಬಂಧನದಲ್ಲಿದ್ದು, ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಅವರನ್ನು ವಶಕ್ಕೆ ತೆಗೆದುಕೊಂಡು ಎಡಿಜಿಪಿ ಬಿಕೆ ಸಿಂಗ್ ನೇತೃತ್ವದ ಎಸ್ ಐಟಿ ಅಧಿಕಾರಿಗಳು ವಿಚಾರಣೆ ಕೈಗೊಂಡಿದ್ದಾರೆ.

ಇದಕ್ಕೂ ಮೊದಲು ಮುನಿರತ್ನ ವಿರುದ್ಧ ದಾಖಲಾಗಿದ್ದ ಜಾತಿ ನಿಂದನೆ ಯಲಿ ಹಾಗೂ ಕೊಲೆ ಬೆದರಿಕೆ ಪ್ರಕರಣಗಳೂ ಜಂಟಿ ಸೇರಿ ಒಟ್ಟು ಮೂರು ಪ್ರಕರಣಗಳ ತನಿಖೆ ನಡೆಸಲು ಸರ್ಕಾರ ಎಸ್‌ಐಟಿ ರಚಿಸಿದ್ದು,ಪ್ರಕರಣ ಸಂಬಂಧದ ಎಲ್ಲಾ ಕೇಸ್ ಗಳ ಕಡತಗಳನ್ನು ತರಸಿಕೊಂಡು ಪರಿಶೀಲನೆ ಕೈಗೊಂಡಿದೆ. ಎಸ್ ಐಟಿಯಲ್ಲಿರುವ ಬಿಕೆ ಸಿಂಗ್ ಅವರಲ್ಲದೇ ಐಜಿಪಿ ಲಾಭುರಾಮ್ ಸೇರಿ ಮೂವರು ಐಪಿಎಸ್ ಅಧಿಕಾರಿಗಳು ಪ್ರಕರಣಗಳ ಸಂಪೂರ್ಣ ಮಾಹಿತಿಯನ್ನು ಪಡೆದುಕೊಂಡಿದ್ದಾರೆ. ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿ, ಮನವಿ ಮಾಡಿ ಬಾಡಿ ವಾರಂಟ್ ಮೇಲೆ ಆರೋಪಿ ಮುನಿರತ್ನರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗಿದೆ. ಆರೋಪಿಯ ಪ್ರಾಥಮಿಕ ವಿಚಾರಣೆ ನಡೆಸಿ ಹೇಳಿಕೆ ದಾಖಲಿಸಿಕೊಂಡಿದ್ದಾರೆ.

ನ್ಯಾಯಾಧೀಶರ ಎದುರು ಸಿಆರ್‌ಪಿಸಿ 164ರ ಅಡಿ ಸಂತ್ರಸ್ತೆ ಹೇಳಿಕೆ ದಾಖಲು ಮಾಡಲಾಗಿದೆ. ನ್ಯಾಯಾಲಯವು ಆರೋಪಿಯನ್ನು ತಮ್ಮ ವಶಕ್ಕೆ ನೀಡಿದರೆ ಸ್ಥಳ ಮಹಜರು ನಡೆಸಿ, ಹೇಳಿಕೆಯನ್ನು ವಿಡಿಯೊ ರೆಕಾರ್ಡ್ ಮಾಡಿಕೊಳ್ಳಲಾಗು– ವುದು ಎಂದು ಎಸ್‌ಐಟಿ ಮೂಲಗಳು ತಿಳಿಸಿವೆ.

ಬೆದರಿಕೆ ಆರೋಪ: ಕಗ್ಗಲೀಪುರ ಠಾಣೆಯಲ್ಲಿ ಸಂತ್ರಸ್ತ ನೀಡಿದ ದೂರು ಆಧರಿಸಿ ಎಫ್‌ಐಆರ್ ದಾಖಲಾಗಿದ್ದು, ಆರೋಪಿ ಕಡೆಯ ವರು ಸಂತ್ರಸ್ತೆ ಹಾಗೂ ಅವರ ಕುಟುಂಬದವರಿಗೆ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಲಾಗಿದೆ. ಸಂತ್ರಸ್ತ ಕಡೆಯವರು ಯಶವಂತಪುರ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

# ಎಸ್.ಜೆ.ಎಸ್. ಎಂಟರ್‌ಪ್ರೈಸಸ್ ಕಂಪನಿಯ 191 ಕಾಯಂ ನೌಕರರ ವಜಾ ಮಹಿಳಾ ನೌಕರರಿಗೆ ಲೈಂಗಿಕ ಕಿರುಕುಳ: ಕಾರ್ಮಿಕರ ಸಂಘ ಆರೋಪ



**ಬೆಂಗಳೂರು, ಸೆ. 23 :** ಯಶವಂತಪುರ ವಿಧಾನಸಭಾ ಕ್ಷೇತ್ರದ ಕೆಂಗೇರಿ ಹೊಬಳಿಯ ಕನಕಪುರ ರಸ್ತೆಯಲ್ಲಿರುವ ಎಸ್.ಜೆ.ಎಸ್. ಎಂಟರ್ ಪ್ರೈಸಸ್ ಲಿಮಿಟೆಡ್ ಕಂಪನಿಯಲ್ಲಿ 5 ರಿಂದ 35 ವರ್ಷ ಅನುಭವವಿದ್ದ 191 ಮಂದಿ ಕಾಯಂ ಕಾರ್ಮಿಕರನ್ನು ಕೆಲಸದಿಂದ ವಜಾಗೊಳಿಸಿದ್ದು, ಇದನ್ನು ಪ್ರತಿಭಟಿಸಿ ನೌಕರರು ಆಗಸ್ಟ್ 7 ರಿಂದ ಆಡಳಿತ ಮಂಡಳಿ ವಿರುದ್ಧ ಹೋರಾಟ ಮಾಡುತ್ತಿದ್ದಾರೆ. ಕಳೆದ 45 ದಿನಗಳಿಂದ ನಡೆಸುತ್ತಿರುವ ಪ್ರತಿಭಟನೆಗೆ ಆಡಳಿತ ಮಂಡಳಿ ಮಣಿದಿಲ್ಲ. ನೌಕರರು ಅಕ್ಷರಶಃ ಬೀದಿಗೆ ಬೀಳುವಂತಾಗಿದೆ. ಇದನ್ನು ವಿರೋಧಿಸಿ ಒಂದು ವಾರದಿಂದ ಅಮರಣಾಂತ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದು, 7 ಜನ ಕಾರ್ಮಿಕರು ತೀವ್ರ ಅಸ್ವಸ್ಥರಾಗಿದ್ದಾರೆ. ಇಷ್ಟಾದರೂ ಸಂಸ್ಥೆ ಮಾಲೀಕರು. ಆಡಳಿತ ಅಧಿಕಾರಿಗಳು ಯಾವುದಕ್ಕೂ ಸ್ಪಂದಿಸುತ್ತಿಲ್ಲ ಎಂದು ಕಾರ್ಮಿಕರು ಅಳಲು ತೋಡಿಕೊಂಡಿದ್ದಾರೆ.

ಸಂಸ್ಥೆ ಈ ಮಟ್ಟಕ್ಕೆ ಬೆಳೆಯಲು ಕಾರ್ಮಿಕರ ಶ್ರಮ, ನಿಷ್ಠೆ, ಪ್ರಾಮಾಣಿಕತೆ ಕಾರಣ. ಸಂಬಳಲ್ಲದೇ ಕಷ್ಟವಾಗಿದ್ದು, ಮಕ್ಕಳ ಶಾಲಾ ಶುಲ್ಕ ಪಾವತಿ ಮಾಡಲು ಸಾಧ್ಯವಾಗುತ್ತಿಲ್ಲ. ನಮ್ಮನ್ನು ಕೆಲಸದಿಂದ ತೆಗೆದುಹಾಕಲು ಪ್ರಯತ್ನ ನಡೆಸಿದ ಕಾರಣ ಕಾರ್ಮಿಕ ಸಂಘವನ್ನು ರಚನೆ ಮಾಡಿಕೊಂಡು ನಮ್ಮ ಹಕ್ಕುಗಳಿಗಾಗಿ ಹೋರಾಟ ಮಾಡುತ್ತಿದ್ದೇವೆ. ಇದಾದ ಬಳಿಕ ಒಂದಲ್ಲ ಒಂದು ರೀತಿ ಕಿರುಕುಳಗಳ ಕೊಡುತ್ತಿದ್ದಾರೆ. ಮಹಿಳಾ ಕಾರ್ಮಿಕರಿಗೆ ಲೈಂಗಿಕ ಕಿರುಕುಳ ಮತ್ತು ಮಾನಸಿಕ ಹಿಂಸೆ ಕೊಡುತ್ತಿದ್ದಾರೆ. ಸುಳ್ಳು ದೂರುಗಳನ್ನು ನೀಡಿ ಹಿಂಸಿಸುತ್ತಿದ್ದಾರೆ ಎಂದು ದೂರಿದ್ದಾರೆ. ಕಾರ್ಮಿಕ ಸಂಘದ ಅಧ್ಯಕ್ಷ ರಜನಿಕಾಂತ್ ಮಾತನಾಡಿ, ಆಡಳಿತ ಮಂಡಳಿ ದೌರ್ಜನ್ಯ, ದಬ್ಬಾಳಿಕೆ ಮುಖಾಂತರ 174ಕಾರ್ಮಿಕರನ್ನು ನೋಟಿಸ್ ನೀಡದೇ ವಜಾ ಮಾಡಿದ್ದಾರೆ, ಈ ಕುರಿತು ಕಾರ್ಮಿಕ ಇಲಾಖೆಗೆ ದೂರು ಸಲ್ಲಿಸಲಾಯಿತು, ಮೂರು ಸಭೆಗಳು ನಡೆದರೂ ಪ್ರಯೋಜನವಾಗಿಲ್ಲ. ಮುಖ್ಯಮಂತ್ರಿಗಳು ಮತ್ತು ಕಾರ್ಮಿಕ ಸಚಿವರಿಗೆ ಈಗಾಗಲೇ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.

ಪ್ರಧಾನ ಕಾರ್ಯದರ್ಶಿ ಬಿ.ಸಿ.ಹರೀಶ್ ಮಾತನಾಡಿ, ಕಾರ್ಮಿಕರಿಗೆ ವಿನಾಕಾರಣ ಕಿರುಕುಳ ನೀಡುತ್ತಿದ್ದಾರೆ. ಸತತ ಉಪವಾಸ ಸತ್ಯಾಗ್ರಹ ಮಾಡುತ್ತಿದ್ದೇವೆ ಎಂದರು.

# ದರ್ಶನ್ ಜಾಮೀನು ಅರ್ಜಿ ವಿಚಾರಣೆ ಮುಂದೂಡಿದ ನ್ಯಾಯಾಲಯ



**ಬೆಂಗಳೂರು, ಸೆ. 23 :** ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದ ಆರೋಪಿ ದರ್ಶನ್ ಇತ್ತೀಚೆಗಷ್ಟೇ ಸಲ್ಲಿಸಿದ್ದ ಜಾಮೀನು ಅರ್ಜಿ ವಿಚಾರಣೆ ನಡೆಸಿದ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ಇದೀಗ ಅರ್ಜಿ ವಿಚಾರಣೆಯನ್ನು ಇದೇ ಸೆ. 27ಕ್ಕೆ ಮುಂದೂಡಿದೆ.

ತನ್ನ ವಿರುದ್ಧ ಪೊಲೀಸರು ಚಾರ್ಜ್‌ಶೀಟ್ ಸಲ್ಲಿಸಿದ ಎರಡು ವಾರಗಳ ಬಳಿಕ ದರ್ಶನ್ಜಾಮೀನು ಅರ್ಜಿ ಸಲ್ಲಿಸಿದ್ದರು. ಇಂದು ವಿಚಾರಣೆ ನಡೆಸಿದ ನ್ಯಾಯಾಲಯ ಇದೀಗ ಅರ್ಜಿ ವಿಚಾರಣೆಯನ್ನು ಸೆ.27ಕ್ಕೆ ಮುಂದೂಡಿಕೆ ಮಾಡಿದೆ.

ಇನ್ನು ಇದೇ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ಮೊದಲ ಆರೋಪಿ ಪವಿತ್ರಾ ಗೌಡ ಪ್ರಸ್ತುತ ಬೆಂಗಳೂರಿನ ಪರಪ್ಪನ ಜೈಲಿನಲ್ಲಿ ಶಿಕ್ಷೆ ಅನುಭವಿಸುತ್ತಿದ್ದು, ಇತ್ತೀಚೆಗಷ್ಟೇ ಜಾಮೀನಿಗೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿ ವಿಚಾರಣೆಯನ್ನು ಇಂದೇ ನಡೆಸಿದ ಕೋರ್ಟ್, ಅರ್ಜಿ ವಿಚಾರಣೆಯನ್ನು ಸೆ.25ಕ್ಕೆ ಮುಂದೂಡಿದೆ.

# ಕಾಂಗ್ರೆಸ್ ರಾಜಭವನ ದುರ್ಬಳಕೆ ಮಾಡಿಕೊಂಡ ಬಗ್ಗೆ ದೊಡ್ಡ ಇತಿಹಾಸವೇ ಇದೆ: ಮಹೇಶ್ ಟೆಂಗಿನಕಾಯಿ



**ಹುಬ್ಬಳ್ಳಿ, ಸೆ. 23 :** ಬಿಜೆಪಿ ರಾಜಭವನವನ್ನು ಯಾವುದೇ ರೀತಿಯಿಂದ ದುರ್ಬಳಕೆ ಮಾಡಿಕೊಂಡಿಲ್ಲ. ಆದರೆ ಕಾಂಗ್ರೆಸ್ ರಾಜಭವನವನ್ನು ದುರ್ಬಳಕೆ ಮಾಡಿಕೊಂಡ ಬಗ್ಗೆ ದೊಡ್ಡ ಇತಿಹಾಸವೇ ಇದೆ ಎಂದು ಶಾಸಕ ಮಹೇಶ ಟೆಂಗಿನಕಾಯಿ ಆರೋಪಿಸಿದರು. ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೂರುಗಳು ಬಂದ ಹಿನ್ನೆಲೆಯಲ್ಲಿ ಪರಿಶೀಲಿಸಲು, ಮಾಹಿತಿ ಪಡೆಯಲು ರಾಜ್ಯಪಾಲರು ಮುಂದಾಗಿದ್ದಾರೆ ಇದರಲ್ಲಿತಪ್ಪೇನಿದೆ. ಅಂತಹ ಅಧಿಕಾರ ರಾಜ್ಯಪಾಲರಿಗಿದೆ ಎಂದರು.

ಮುಡಾ, ವಾಲ್ಮೀಕಿ ನಿಗಮದಲ್ಲಿ ಹಗರಣ ಆಗಿಲ್ಲವೆಂದರೆ ಸಿಎಂಗೆ ಭಯ ಯಾಕೆ. ಆರೋಪದ ಹಿನ್ನೆಲೆಯಲ್ಲಿ ನೈತಿಕ ಹೊಣೆ ಹೊತ್ತು ಈ ವೇಳೆಗೆ ಸಿಎಂ ರಾಜೀನಾಮೆ ನೀಡಬೇಕಾಗಿತ್ತು. ಅದು ಬಿಟ್ಟು ಭಂಡತನದಿಂದ ರಾಜ್ಯಪಾಲರ ವಿರುದ್ದವೇ ಆರೋಪಕ್ಕಿಳಿದಿದ್ದಾರೆ ಎಂದು ಹೇಳಿದರು.ರಾಜಭವನದಿಂದ ಯಾವ ದಾಖಲೆ ಮಾಹಿತಿ ಸೋರಿಕೆ ಆಗಿರದು. ನಟ ದರ್ಶನ ವಿಚಾರದಲ್ಲಿ ಜೈಲಿನ ಹಲವು ಮಾಹಿತಿಗಳು ಹೇಗೆ ಹೊರಬಂದವು? ಸರ್ಕಾರ ಇದಕ್ಕೆ ಉತ್ತರ ನೀಡಬೇಕು ಎಂದು ಅವರು ಆಗ್ರಹಿಸಿದರು.

ತಿರುಪತಿ ಪ್ರಸಾದ ಪ್ರಕರಣ ದುರ್ದೈವದ ಸಂಗತಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಆಗಲೇಬೇಕು. ಹಿಂದೂ ಧರ್ಮಕ್ಕೆ ಧಕ್ಕೆ ತರುವ ಹುನ್ನಾರವಿದು ಎಂದು ಟೆಂಗಿನಕಾಯಿ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಗ್ಯಾರಂಟಿಗಳ ಸಮರ್ಪಕ ಅನುಷ್ಠಾನದಲ್ಲಿ ವಿಫಲವಾಗಿದ್ದು, ಅಭಿವೃದ್ಧಿಗೂ ಅನುದಾನ ಇಲ್ಲವಾಗಿದೆ. ಗ್ಯಾರಂಟಿಗಳಿಂದ ಅಭಿವೃದ್ಧಿಗೆ ಅನುದಾನ ದೊರೆಯುತ್ತಿಲ್ಲ. ಗ್ಯಾರಂಟಿಗಳನ್ನು ಬಂದ್ ಮಾಡಬೇಕೆಂದು ಕಾಂಗ್ರೆಸ್ ಶಾಸಕರೇ ಖಾಸಗಿಯಾಗಿ ಹೇಳುತ್ತಿದ್ದಾರೆ ಎಂದರು.

# ಮಹಾಲಕ್ಷ್ಮೀ ಕೊಲೆ ಪ್ರಕರಣದ ಆರೋಪಿಯ ಗುರುತು ಪತ್ತೆ: ಪೊಲೀಸರ ಶೋಧನೆ

**ಬೆಂಗಳೂರು, ಸೆ. 23 :** ವೈಯಾಲಿಕಾವಲ್ನ ಮನೆಯೊಂದರಲ್ಲಿ ಮಹಾಲಕ್ಷ್ಮಿ ಎನ್ನುವ ಮಹಿಳೆಯ ಶವವನ್ನು ತುಂಡು ತುಂಡು ಮಾಡಿ ಫ್ರಿಡ್ಜ್‌ನಲ್ಲಿಟ್ಟಿರುವ ಪ್ರಕರಣವು ಎಲ್ಲರನ್ನೂ ಬೆಚ್ಚಿಬೀಳಿಸುವಂತಿದೆ. ಈ ಕೇಸ್ ತನಿಖೆ ನಡೆಸುತ್ತಿರುವ ಪೊಲೀಸರಿಗೆ ಕೊಲೆ ಆರೋಪಿ ಯಾರು ಎನ್ನುವ ಸುಳಿವು ಸಿಕ್ಕಿದೆ ಎಂದು ಸಿಟಿ ಪೊಲೀಸ್ ಕಮೀಷನರ್ ಬಿ.ದಯಾನಂದ್ ಅವರು ಈ ಕೇಸ್ ಬಗ್ಗೆ ಮಹತ್ವದ ಮಾಹಿತಿ ನೀಡಿದ್ದಾರೆ. ವೈಯಾಲಿಕಾವಲ್ ನಿವಾಸಿ ಮಹಾಲಕ್ಷ್ಮೀ ಕೊಲೆ ಪ್ರಕರಣದ ಆರೋಪಿಯ ಗುರುತು ಪತ್ತೆಯಾಗಿದ್ದು, ಆತನಿಗಾಗಿ ಶೋಧ ಮುಂದುವರಿದಿದೆ. ಆರೋಪಿಯನ್ನು ಶೀಘ್ರದಲ್ಲೇ ಬಂಧಿಸುತ್ತೇವೆ ಎಂದು ಹೇಳಿದ್ದಾರೆ. ಕೊಲೆ ಆರೋಪಿಯು ಹೊರ ರಾಜ್ಯದವನು ಎಂಬ ಮಾಹಿತಿ ಪೊಲೀಸರಿಗೆ ಸಿಕ್ಕಿದೆ. ಆತ ಬೆಂಗಳೂರಿನಲ್ಲೇ ವಾಸವಾಗಿದ್ದ ಎಂಬ ವಿಚಾರ ತಿಳಿದುಬಂದಿದೆ ಎಂದು ಮಾಹಿತಿ ನೀಡಿದ್ದಾರೆ. ಆದರೆ ಆರೋಪಿಯ ಹೆಸರು, ಫೋಟೋ ಹಾಗೂ ಇನ್ನಿತರ ವಿವರಗಳನ್ನು ಪೊಲೀಸರು ಬಹಿರಂಗಪಡಿಸಿಲ್ಲ.ಆರೋಪಿಗಾಗಿ ಹುಡುಕಾಟ ಶುರು ಮಾಡಿರುವ ಪೊಲೀಸರು ಹೊರ ರಾಜ್ಯಗಳಿಗೆ ಎರಡು ತಂಡಗಳಾಗಿ ಹೊರಟಿದ್ದಾರೆ. ಪಶ್ಚಿಮ ಬಂಗಾಳ ಹಾಗೂ ಬಿಹಾರಕ್ಕೆ ಪೊಲೀಸರು ತೆರಳಿದ್ದು ಕೊಲೆ ಆರೋಪಿಗಾಗಿ ಬಲೆ ಬೀಸಿದ್ದಾರೆ ಎನ್ನಲಾಗಿದೆ.

**ಏನಿದು ಪ್ರಕರಣ :** ನಿನ್ನೆ ಮಹಾಲಕ್ಷ್ಮಿ ಎನ್ನುವ ಮಹಿಳೆಯ ಮೃತದೇಹವನ್ನು ಪೀಸ್ ಪೀಸ್ ಮಾಡಿ ಫ್ರಿಡ್ಜ್‌ನಲ್ಲಿಟ್ಟಿರುವ ಭಯಾನಕ ಸಂಗತಿಯೊಂದು ನಗರದ ವೈಯಾಲಿಕಾವಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೆಳಕಿಗೆ ಬಂದಿತ್ತು. ಈ ಹಿಂದೆ ದೆಹಲಿಯಲ್ಲಿ ನಡೆದ ಶ್ರದ್ಧಾ ಕೊಲೆ ಮಾದರಿಯಲ್ಲೇ ಮಹಾಲಕ್ಷ್ಮಿ ಅವರನ್ನು ಕೊಲೆ ಮಾಡಿ, ಮೃತದೇಹವನ್ನು 50 ತುಂಡುಗಳಾಗಿ ಕತ್ತರಿಸಿ ಮನೆಯ ಫ್ರಿಡ್ಜ್‌ನಲ್ಲಿ ಇಡಲಾಗಿತ್ತು.ಮನೆಯಲ್ಲಿ ಕೆಟ್ಟ ವಾಸನೆ ಬರುತ್ತಿದ್ದ ಅನುಮಾನದ ಮೇರೆಗೆ ಮಾಲೀಕರು ಈಕೆಯ ಸಂಬಂಧಿಕರಿಗೆ ಮಾಹಿತಿ ನೀಡಿದ ಬಳಿಕ ಮೃತರ ತಾಯಿ ಮನೆಗೆ ಬಂದಿದ್ದರು. ಫ್ರಿಡ್ಜ್ ತೆರೆದು ನೋಡಿದಾಗ ಒಳಗೆ ಪೀಸ್ ಪೀಸ್ ಆಗಿದ್ದ ಮಹಾಲಕ್ಷ್ಮಿಯ ಮೃತದೇಹ ಕಂಡು ಕಿರುಚಿಕೊಂಡು ಓಡಿದ್ದರು. ಬಳಿಕ ಪೊಲೀಸರು ಸ್ಥಳಕ್ಕಾಗಮಿಸಿ, ಕೇಸ್ ದಾಖಲಿಸಿಕೊಂಡಿದ್ದರು. ಮರಣೋತ್ತರ ಪರೀಕ್ಷೆಗೆ ದೇಹದ ತುಂಡುಗಳನ್ನು ಕಳಿಸಿಕೊಟ್ಟಿದ್ದರು.

ಮೃತ ಮಹಾಲಕ್ಷ್ಮಿಯು ಮೆನ್ಸ್ ಬ್ಯೂಟಿ ಪಾರ್ಲರ್‌ನಲ್ಲಿ ಕೆಲಸ ಮಾಡಿಕೊಂಡಿದ್ದ ಉತ್ತರಾಖಂಡದ ಅಶ್ರಫ್ ಎಂಬಾತನ ಜೊತೆ ಸಲುಗೆಯಿಂದ ಇದ್ದರು. ಹಾಗಾಗಿ ಈತನ ಮೇಲೆ ಮಹಾಲಕ್ಷ್ಮಿ ಗಂಡ ಹಾಗೂ ಕುಟುಂಬಸ್ಥರು ದೂರು ನೀಡಿದ್ದರು. ಅಲ್ಲದೆ, ಮಹಾಲಕ್ಷ್ಮಿ ಜೊತೆ ಕೆಲಸ ಮಾಡುತ್ತಿದ್ದ ಮುಕ್ತ, ಶಶಿಧರ್, ಸುನೀಲ್ ಎಂಬುವವರ ಮೇಲೆಯೂ ಕುಟುಂಬಸ್ಥರು ಅನುಮಾನ ವ್ಯಕ್ತಪಡಿಸಿದ್ದರು. ಹಾಗಾಗಿ ಈ ನಾಲ್ವರಿಗಾಗಿ ಪೊಲೀಸರು ಬಲೆ ಬೀಸಿದ್ದರು.ಸದ್ಯ ಅಶ್ರಫ್ನನ್ನು ಪೊಲೀಸರು ವಶಕ್ಕೆ ಪಡೆದಿದ್ದು, ವಿಚಾರಣೆ ವೇಳೆ ಮಹಾಲಕ್ಷ್ಮಿ ಜೊತೆಗೆ ನನಗೆ ಅಫೇರ್ ಇದ್ದಿದ್ದು ನಿಜ ಎಂದು ಸತ್ಯ ಒಪ್ಪಿಕೊಂಡಿದ್ದಾನೆ ಎಂದು ವರದಿಯಾಗಿದೆ.

ಆರು ತಿಂಗಳ ಹಿಂದೆ ಮಹಾಲಕ್ಷ್ಮಿ ಜೊತೆಗೆ ನಾನು ಕ್ಲೋಸ್ ಆಗಿದ್ದೆ. ಆದ್ರೆ ಈ ಕೊಲೆ ಮಾಡಿರುವುದು ನಾನಲ್ಲ. ನಮ್ಮ ಅಫೇರ್ ವಿಚಾರ ಕುಟುಂಬಸ್ಥರಿಗೆ ತಿಳಿದು ದೊಡ್ಡ ಜಗಳವಾಯ್ತು. ಬಳಿಕ ನಾನು ಮಹಾಲಕ್ಷ್ಮಿ ತಂಟೆಗೆ ಹೋಗಲಿಲ್ಲ. ಆರು ತಿಂಗಳಿಂದ ನಾವಿಬ್ಬರೂ ದೂರ ಇದ್ದೇವೆ. ಈ ಕೊಲೆಗೂ ನನಗೂ ಸಂಬಂಧ ಇಲ್ಲ ಎಂದು ಹೇಳಿಕೆ ನೀಡಿದ್ದಾನಂತೆ. ಆದರೆ ಪೊಲೀಸರು ಆರೋಪಿಯ ಗುರುತು ಪತ್ತೆಯಾಗಿದೆ ಎಂದು ಸುಳಿವು ನೀಡಿದ್ದು, ಅಶ್ರಫ್ ಅಲ್ಲದೆ ಮತ್ಯಾರು ಮಹಾಲಕ್ಷ್ಮಿಯನ್ನು ಕೊಲೆ ಮಾಡಿರಬಹುದು? ಎನ್ನುವ ಪ್ರಶ್ನೆ ಎಲ್ಲರಲ್ಲೂ ಎದುರಾಗಿದೆ. ಸದ್ಯ ಪೊಲೀಸರು ತನಿಖೆಯನ್ನು ಚುರುಕುಗೊಳಿಸಿದ್ದಾರೆ.

# ಕಾಂಗ್ರೆಸ್ ತನ್ನ ಹುಳುಕು ಮುಚ್ಚಿಕೊಳ್ಳಲು ಡಿನೋಟಿಫಿಕೇಶನ್ ಆರೋಪ



**ಧಾರವಾಡ, ಸೆ. 23 :** ದ್ವೇಷ ರಾಜಕಾರಣದಲ್ಲಿ ತೊಡಗಿರುವ ಕಾಂಗ್ರೆಸ್ ಸರ್ಕಾರ ತನ್ನ ಹುಳುಕುಗಳನ್ನು ಮುಚ್ಚಿಕೊಳ್ಳಲು ಎಚ್.ಡಿ. ಕುಮಾರಸ್ವಾಮಿ ಹಾಗೂ ಬಿ.ಎಸ್. ಯಡಿಯೂರಪ್ಪ ವಿರುದ್ಧ ಕರ್ನಾಟಕ ಸಚಿವ ಕೃಷ್ಣಬೈರೇಗೌಡ ಅವರು ಡಿನೋಟಿಫಿಕೇಷನ್ ಆರೋಪ ಮಾಡುತ್ತಿದೆ. ಒಂದು ವರ್ಷದಿಂದ ಯಾವುದೇ ಅಭಿವೃದ್ಧಿಯಿಲ್ಲದೇ ಬರೀ ಭಾಷಣದ ಬೊಗಳೆ ಸರ್ಕಾರದಿಂದ ಜನರು ಬೇಸರಗೊಂಡಿದ್ದಾರೆ. ಗ್ಯಾರಂಟಿ ಆಸೆಗೆ ಬಿದ್ದು ಕೆಟ್ಟ ಸರ್ಕಾರ ಅಧಿಕಾರಕ್ಕೆ ತಂದೆವಲ್ಲ ಎಂದು ಜನತೆ ಪಶ್ಚಾತ್ತಾಪ ಪಡುತ್ತಿದ್ದಾರೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಸರ್ಕಾರದ ವಿರುದ್ಧ ತಮ್ಮ ಆಕ್ರೋಶ ಹೊರಹಾಕಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ತಮ್ಮ ಸ್ವತಃ ಹಗರಣಗಳಲ್ಲಿ ಸಿಲುಕಿದ ನಂತರ ಹೀಗಾಗುತ್ತಿದೆ. ಎಚ್.ಡಿ. ಕುಮಾರಸ್ವಾಮಿ ಸಿಎಂ ಆಗಿದ್ದಾಗ ಡಿನೋಟಿಫಿಕೇಷನ್ ಮಾಡಿದ್ದು, ಈಗ ಅವರ ವಿರುದ್ಧವೇ ಆರೋಪ ಹೊರಡಿಸಿದ್ದಾರೆ ಎಂದರು.

ಅಷ್ಟೇ ಅಲ್ಲದೆ 2006-07ರಲ್ಲಿ ಕುಮಾರಸ್ವಾಮಿ ಸಿಎಂ ಆಗಿದ್ದರು. 2013-19ರಿಂದ ಬಿ.ಎಸ್ ಯಡಿಯೂರಪ್ಪ ಅವರು ಸಿಎಂ ಆಗಿದ್ದರು. ಬಳಿಕ 2019ರಲ್ಲಿ ಹೆಚ್.ಡಿ. ಕುಮಾರಸ್ವಾಮಿ ಅವರನ್ನು ಸಿಎಂ ಮಾಡಿದ್ದು ಕಾಂಗ್ರೆಸ್ ಅವರೇ ಆಗ ಅವರಿಗೆ ಇದೆಲ್ಲ ಗೊತ್ತಿರಲಿಲ್ವಾ? ಎಂದು ಪ್ರಲ್ಹಾದ ಜೋಶಿ ಪ್ರಶ್ನಿಸಿದರು.

ಇದೆಲ್ಲ ನೋಡಿದರೆ ಕಾಂಗ್ರೆಸ್ ಅವರೇ ತಮ್ಮ ಹಗರಣಗಳನ್ನು ಮುಚ್ಚಿಹಾಕಲು ಹಾಗೂ ಅವರ ವಿರುದ್ಧ ಮಾತನಾಡಿದವರನ್ನು ಮಟ್ಟ ಹಾಕಲು ಮಾಡುತ್ತಿರುವುದು ಎಂದು ಸ್ಪಷ್ಟವಾಗಿ ಕಾಣುತ್ತದೆ. ಈ ರೀತಿ ಸೇಡಿನ ರಾಜಕಾರಣ ಮಾಡುವವರಿಗೆ ಆದಷ್ಟು ಬೇಗ ಅಂತ್ಯ ಕಾಣುತ್ತಾರೆ ಎಂದು ಹೇಳಿದರು.

### ರಾಹುಲ್ ನೇತೃತ್ವದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲ್ಲ

**ರಾಹುಲ್ ಗಾಂಧಿ ನೇತೃತ್ವದಲ್ಲಿ ನಾವೆಂದೂ ಅಧಿಕಾರಕ್ಕೆ ಬರೋದಿಲ್ಲ ಎಂಬ ಸತ್ಯ ಕಾಂಗ್ರೆಸ್ಸಿನವರಿಗೆ ಅರಿವಾಗಿದೆ. ಹಾಗಾಗಿ ಶತಾಯ-ಗತಾಯ ಕೇಂದ್ರ ಸರ್ಕಾರ ವಿರದ್ಧ ಇಲ್ಲ ಸಲ್ಲದ ಮಾತಾಡುತ್ತಾ ಮನರಂಜನೆಯಲ್ಲಿ ತೊಡಗಿದ್ದಾರೆ ಅಷ್ಟೇ. ಯಾವ ಕಾಲಕ್ಕೂ ಬಿಜೆಪಿಯೇ ಬಲಿಷ್ಠವಾಗಿರಲಿದೆ. ಭಾರತದಲ್ಲಿ ಯಾವುದೇ ಕಾಲಕ್ಕೂ ಬಿಜೆಪಿಯೇ ಅಧಿಕಾರದಲ್ಲಿ ಮುಂದುವರೆಯಲಿದೆ. ಸದ್ಯ ಮೋದಿ ನಾಯಕತ್ವದಲ್ಲಿ ಪ್ರಬಲವಾಗಿದೆ. ಕೆಲವು ವರ್ಷಗಳ ನಂತರ ಮತ್ಯಾರೋ ಪ್ರಬಲ ಬಿಜೆಪಿ ನೇತಾರರು ಮುಂಚೂಣಿಗೆ ಬರುತ್ತಾರೆ. ಬಿಜೆಪಿಯಲ್ಲಿ ನಾಯಕತ್ವಕ್ಕೆ ಕೊರತೆಯಿಲ್ಲ. ಆದರೆ, ಕಾಂಗ್ರೆಸ್ ಮಾತ್ರ ರಾಹುಲ್ ಗಾಂಧಿಗೆ ಜೋತು ಬಿದ್ದು ಹಾಳಾಗುತ್ತಿದೆ. ಹತಾಶೆಯಲ್ಲಿ ಕೇಂದ್ರದ ನಿರ್ಣಯ ವಿರೋಧಿಸುವ ಕಾಂಗ್ರೆಸ್ ಮುಂದೆಯೂ ಅಧಿಕಾರಕ್ಕೆ ಬರುವುದು ಅಸಾಧ್ಯ ಎಂಬ ಹತಾಶೆಯಲ್ಲಿ ಕಾಂಗ್ರೆಸ್, ಒಂದು ದೇಶ ಒಂದು ಚುನಾವಣೆಗೆ ವಿರೋಧ ವ್ಯಕ್ತಪಡಿಸುತ್ತಿದೆ ಎಂದು ಜೋಶಿ ಪ್ರತಿಕ್ರಿಯಿಸಿದರು**

**– ಪ್ರಹ್ಲಾದ ಜೋಶಿ, ಕೇಂದ್ರ ಸಚಿವರು.**

# ಹೆತ್ತವರ ಮುಂದೆಯೇ ಕೊಚ್ಚಿಕೊಂದ ಯುವತಿ ಮನೆಯವರು

**ಕಲಬುರಗಿ, ಸೆ. 23 :** ನಗರದ ಹೊರವಲಯದಲ್ಲಿರುವ ನಾಗನಹಳ್ಳಿ ಗ್ರಾಮದಲ್ಲಿ ಸುಮಿತ್ ಮಲ್ಲಾಬಾದ್ ಎಂಬ 19 ವರ್ಷದ ಯುವಕನನ್ನು ಭೀಕರವಾಗಿ ಕೊಲೆ ಮಾಡಲಾಗಿದೆ. ತಂದೆ-ತಾಯಿಯೊಂದಿಗೆ ಮುಂಬೈನಲ್ಲಿ ವಾಸವಾಗಿದ್ದ ಸುಮಿತ್, ಮುಂಬೈನಲ್ಲಿ ಪದವಿ ವಿದ್ಯಾಭ್ಯಾಸ ಮಾಡುತ್ತಿದ್ದ. ಕಳೆದ ವಾರವಷ್ಟೇ ತಾಯಿಯೊಂದಿಗೆ ಕಲಬುರಗಿಗೆ ಆಗಮಿಸಿದ್ದ. ಇನ್ನೂ ಇದೇ ಊರಲ್ಲಿ ಸುಮಿತ್ ಸಹೋದರ ಸಚಿನ್ ಕೂಡ ವಾಸವಾಗಿದ್ದ. ಸಚಿನ್ ನಾಗನಹಳ್ಳಿ ಗ್ರಾಮದ ತನ್ನದೆ ಏರಿಯಾದ ಯುವತಿಗೆ ಪ್ರೀತಿಸುತ್ತಿದ್ದನಂತೆ. ಈ ವಿಚಾರ ಯುವತಿಯ ಮನೆಯವರಿಗೆ ಗೊತ್ತಾಗಿ ಸಾಕಷ್ಟು ಭಾರಿ ನ್ಯಾಯ ಪಂಚಾಯತಿ ಮಾಡಿದ್ದರಂತೆ. ಆದ್ರೆ, ಅದು ಬಗೆಹರೆದಿಲ್ಲ.

ನಿನ್ನೆ ಸಂಜೆ ಸಚಿನ್ ಮನೆಗೆ ಯುವತಿಯ ಸಹೋದರ ಮತ್ತು ಆತನ ಕೆಲ ಸ್ನೇಹಿತರು ಎಂಟ್ರಿ ಕೊಟ್ಟಿದ್ದಾರೆ. ಆಗ ಸಚಿನ್ ಮನೆಯಲ್ಲಿರದ ಕಾರಣ ಆತನ ತಾಯಿ ಮತ್ತು ಸಹೋದರನ ಜೊತೆ ಗಲಾಟೆ ತೆಗೆದಿದ್ದಾರೆ. ಬಳಿಕ ಗಲಾಟೆ ವಿಕೋಪಕ್ಕೆ ತೆರಳಿ ಸುಮಿತ್‌ನನ್ನ ಚಾಕುವಿನಿಂದ ಇರಿದು ಎಸ್ಕೇಪ್ ಆಗಿದ್ದಾರೆ.

ಇತ್ತ ಕಣ್ಣೆದುರೆ ಹೆತ್ತ ಮಗನಿಗೆ ಚಾಕುವಿನಿಂದ ಇರಿದಿರೋದನ್ನ ಕಂಡ ತಾಯಿ, ಮಗನನ್ನ ಉಳಿಸಿಕೊಳ್ಳಲು ಕಲಬುರಗಿ ನಗರದ ಜಿಮ್ಸ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದ್ರೆ, ಹಲವಾರು ಗಂಟೆಗಳ ಕಾಲ ನಡೆದ ಚಿಕಿತ್ಸೆ ಕೊನೆಗೂ ಫಲಕಾರಿಯಾಗದೆ ಬೆಳಗ್ಗೆ ಸುಮಿತ್ ಸಾವನ್ನಪ್ಪಿದ್ದಾನೆ. ಇನ್ನು ಮಗ ಸಚಿನ್ ಆ ಹುಡುಗಿಯ ಜೊತೆ ಸ್ನೇಹ ಬೆಳೆಸಿರುವ ವಿಚಾರಕ್ಕೆ ಸಂಬಂಧಿಸಿದಂತೆ ಈ ಹಿಂದೆ ಮಾತುಕತೆ ಮೂಲಕ ರಾಜಿ ಪಂಚಾಯ್ತಿ ಮಾಡಿ, ನನ್ನ ಮಗ ಅವನ ಪಾಡಿಗೆ ಅವನು ಕೆಲಸ ಮಾಡಿಕೊಂಡಿದ್ದ. ಆದ್ರೆ, ಅದೇ ವಿಚಾರಕ್ಕೆ ಇದೀಗ ಗಲಾಟೆ ತೆಗೆದು ನನ್ನ ಇನ್ನೊಬ್ಬ ಮಗ ಏನು ತಪ್ಪು ಮಾಡದೆ ಇದ್ದರೂ ದುಷ್ಕರ್ಮಿಗಳು ಕೊಲೆ ಮಾಡಿದ್ದಾರೆ. ಅವರಿಗೆ ಯಾವುದೇ ಕಾರಣಕ್ಕೂ ಬಿಡೋದಿಲ್ಲ ಎಂದು ಆ ಹೆತ್ತ ಜೀವ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಒಂದು ಜೀವದ ಬದುಕಿಗೆ ಎರಡು ಜೀವ ಹೋಗುವುದು ಗ್ಯಾರಂಟಿ ಎಂದು ಆಕ್ರೋಶದ ಕಟ್ಟೆ ಒಡೆದಿದೆ. ಇನ್ನು ಕೊಲೆ ಪ್ರಕರಣ ಬೆಳಕಿಗೆ ಬರುತ್ತಿದ್ದಂತೆ ಖುದ್ದು ಕಲಬುರಗಿ ಪೊಲೀಸ್ ಕಮಿಷನರ್ ಡಾ ಶರಣಪ್ಪ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.




ಬ್ಯಾಂಕ್ ಪಿಂಚಣಿದಾರರ ಸಮನ್ವಯ ಸಮಿತಿ ಮತ್ತು ನಿವೃತ್ತ ಸಂಘಟನೆಗಳ ಸದಸ್ಯರು ತಮ್ಮ ವಿವಿಧ ಬೇಡಿಕೆಗಳನ್ನು ಒತ್ತಾಯಿಸಿ ಸೋಮವಾರ ಬೆಂಗಳೂರಿನ ಫ್ರೀಡಂ ಪರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

# ಟಿಪ್ಪು, ಔರಂಗಜೇಬ್ ಕುರಿತ ಹೇಳಿಕೆಗೆ ವಿಷಾದವಿಲ್ಲ: ಯತ್ನಾಳ್

**ಬಾಗಲಕೋಟೆ, ಸೆ. 23 :** ಜಿಲ್ಲೆಯ ಮುಧೋಳ ಪಟ್ಟಣದಲ್ಲಿ ಟಿಪ್ಪು ಸುಲ್ತಾನ್ ಮತ್ತು ಔರಂಗಜೇಬ್ ಕುರಿತ ನನ್ನ ಹೇಳಿಕೆಗೆ ನಾನು ಬದ್ಧ. ಇದಕ್ಕೆಲ್ಲ ವಿಷಾದ ವ್ಯಕ್ತಪಡಿಸುವುದಿಲ್ಲ. ಕ್ಷಮೆಯನ್ನೂ ಕೇಳುವುದಿಲ್ಲ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ್ ತಿಳಿಸಿದರು.



ಮುಸ್ಲಿಂ ಮತ್ತು ಅಹಿಂದ ನಾಯಕರು ತಮ್ಮ ಹೇಳಿಕೆಯನ್ನು ಖಂಡಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಯತ್ನಾಳ್, ಅಂಬೇಡ್ಕರ್ ಅವರ ಬಗ್ಗೆ ಸರಿಯಾಗಿ ಓದಿದ್ದರೆ, ಸ್ವಾಭಿಮಾನ ಅಂಬೇಡ್ಕರ್ ಬಗ್ಗೆ ಗೌರವವಿದ್ದರೆ, ಇವರು ಟಿಪ್ಪು ಮತ್ತು ಆತನ ಜೀವನದ ಬೆನ್ನು ಹತ್ತಲ್ಲ. ಈ-ಹಿಂದ, ಅ-ಹಿಂದ ನಾಯಕರ ಕೆಲಸ ಏನಿದೆ?. ಟಿಪ್ಪು ಸುಲ್ತಾನ್, ಔರಂಗಜೇಬ್ ಬಗ್ಗೆ ನಾನು ಎಷ್ಟೇ ಬೈಯ್ದರೂ, ಅದಕ್ಕೆ ನಾನು ಕ್ಷಮೆ ಬೇಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ನಾನು ನನ್ನ ಹೇಳಿಕೆಗೆ ಬದ್ಧನಾಗಿದ್ದೇನೆ. ಆದರೆ, ಪಾಪ ಪೊಲೀಸರ ಮೇಲೆ ಒತ್ತಡ ಹಾಕಿದ ಕಾರಣಕ್ಕೆ ಅವರು ನನ್ನ ಮೇಲೆ ಸುಮೋಟೋ ಕೇಸ್ ಹಾಕಿದ್ದಾರೆ. ಅದು ಪೊಲೀಸರ ತಪ್ಪಲ್ಲ. ತಪ್ಪೇನಿದ್ದರೂ ಅಲ್ಲಿಯ ಸಚಿವರದ್ದು. ಇಲ್ಲೊಬ್ಬ ಸಚಿವ ಕಳೆದ ಲೋಕಸಭಾ ಚುನಾವಣೆಯಲ್ಲಿ ತನ್ನ ಮಗಳನ್ನು ಅಲ್ಲಿ ನಿಲ್ಲಿಸಿದ್ದ. ಅಲ್ಲಿ ಅವಮಾನಕಾರಿಯಾಗಿ ಸೋಲುಂಡ ಕಾರಣ ಒತ್ತಡದಿಂದ ನನ್ನ ಮೇಲೆ ಪೊಲೀಸರ ಮೂಲಕ ಕೇಸ್ ಹಾಕಿಸಿದ್ದಾರೆ ಎಂದು ದೂರಿದರು.


**ರಮೇಶ ಜಾರಕಿಹೊಳಿ ಸಿಟ್ಟು ಕಡಿಮೆಯಾಗಿಲ್ಲ :** ಸಿಡಿ ಬಿಡುಗಡೆಯಿಂದ ರಮೇಶ ಜಾರಕಿಹೊಳಿ ಅವರಿಗೆ ದೊಡ್ಡ ಅಪಮಾನವಾಗಿದೆ. ಇದರ ಹಿಂದೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ ಇದ್ದಾರೆ ಎಂಬ ಸಿಟ್ಟು ಅವರಿಗಿದೆ, ಅವರ ಸಿಟ್ಟು ಕಡಿಮೆಯಾಗಿಲ್ಲ. ರಮೇಶ ಜಾರಕಿಹೊಳಿ ತೆಗೆದುಕೊಳ್ಳುವ ನಿರ್ಧಾರಕ್ಕೆ ನಾವು ಬದ್ಧರಿದ್ದೇವೆ ಎಂದು ಬಿಜೆಪಿ ಹಿರಿಯ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಹೇಳಿದರು.

ವಿಜಯೇಂದ್ರವರನ್ನು ರಾಜಾಧ್ಯಕ್ಷರನ್ನಾಗಿ ನಾನು ಒಪ್ಪುವುದಿಲ್ಲ ಎಂಬ ರಮೇಶ ಜಾರಕಿಹೊಳಿ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಕೆಲ ದಿನಗಳ ಹಿಂದೆ ನಡೆದ ಸಭೆಯಲ್ಲಿ ಸಂಧಾನವಾಗಿಲ್ಲ. ಅಲ್ಲಿ ನಮ್ಮ ಭಾವನೆಗಳನ್ನು ಹೇಳಿದ್ದೇವೆ. ಈ ಹಿಂದೆ ರಮೇಶ್ ಜಾರಕಿಹೊಳಿ ಮೇಲೆ ದೊಡ್ಡ ಷಡ್ಯಂತ್ರ ನಡೆದಿದೆ. ಅವರಿಂದ ಅತ್ಯಾಚಾರವಾಗಿದೆ ಎಂದು ಸಾಬೀತು ಮಾಡಲು ಹೋದರು. ಆದರೆ, ಮಹಿಳೆ ಅದು ಸಮ್ಮತಿಯಿಂದಲೇ ಆಗಿದ್ದು ಎಂದು ಹೇಳಿಕೆ ಕೊಟ್ಟಿದ್ದಾಳೆ. ಆದರೆ, ಈ ಘಟನೆಯಿಂದ ರಮೇಶ್ ಜಾರಕಿಹೋಳಿ ಅವರಿಗೆ ಬಹಳ ದೊಡ್ಡ ಅಪಮಾನವಾಗಿದೆ. ಅವರ ಸಿಟ್ಟು ಕಡಿಮೆಯಾಗಿಲ್ಲ ಎಂದರು.

ವಿಜಯೇಂದ್ರ ಅವರ ಬಿಜೆಪಿ ರಾಜ್ಯಾಧ್ಯಕ್ಷ ಕುರ್ಚಿಯ ಕಾಲುಗಳು ಅಲ್ಲಾಡುತ್ತಿವೆ ಎಂಬ ಸಚಿವ ಎಂ.ಬಿ. ಪಾಟೀಲ ಹೇಳಿಕೆ ವಿಚಾರವಾಗಿಯೂ ಪ್ರತಿಕ್ರಿಯಿಸಿದ ಯತ್ನಾಳ, ವಿಜಯೇಂದ್ರ ಜತೆ ನಮ್ಮ ಎಂ.ಬಿ. ಪಾಟೀಲರು ಆತ್ಮೀಯರಿದ್ದಾರೆ. ಅವರವರು ಮಾತನಾಡುತ್ತಿರಬಹುದು. ಯಾಕೆಂದರೆ, ಬಿಜೆಪಿ ಮತ್ತು ಕಾಂಗ್ರೆಸ್‌ನಲ್ಲಿ ಅಲಯನ್ಸ್ ಪಾರ್ಟಿಗಳಿವೆ. ಎಂ.ಬಿ. ಪಾಟೀಲರದ್ದು ವಿಜಯೇಂದ್ರ ಹಾಗೂ ಯಡಿಯೂರಪ್ಪ ಜತೆ ಸ್ವಲ್ಪ ದೋಸ್ತಿ ಇದೆ ಎಂದು ಹೇಳಿದರು.

## ಬಿಜೆಪಿ ಮೇಲೆ ಗೂಬೆ ಕೂರಿಸುವ ಯತ್ನ

# ಸಂವಿಧಾನ ಬದಲಾವಣೆ ಮಾಡುತ್ತೇನೆಂದದ್ದು ಇಂದಿರಾ: ಸೂಲಿಬೆಲೆ



### ಪ್ರಿಯಾಂಕ್‌ಗೆ ತಿವಿದ ಸೂಲಿಬೆಲೆ

**ಸಂವಿಧಾನವನ್ನು ಎಷ್ಟು ಬಾರಿಯಾದರೂ ತಿದ್ದುಪಡಿ ಮಾಡಿ. ಆದರೆ, ಅದರ ಮೂಲ ಆಶಯವನ್ನು ಯಾರೂ ಬದಲಾವಣೆ ಮಾಡಬೇಡಿ ಎಂದು ಅಂಬೇಡ್ಕರ್ ಅವರೇ ಸಂವಿಧಾನದಲ್ಲಿ ಉಲ್ಲೇಖಿಸಿದ್ದಾರೆ. ತುರ್ತು ಪರಿಸ್ಥಿತಿ ಹೇರಿದ ಮದದಲ್ಲಿ ಕಾಂಗ್ರೆಸ್ ಎಷ್ಟರ ಮಟ್ಟಿಗೆ ಹೋಗಿತ್ತು ಅಂದ್ರೆ ಇಂದಿರಾ ಇಸ್ ಇಂಡಿಯಾ, ಇಂಡಿಯಾ ಇಸ್ ಇಂದಿರಾ ಎಂದು ಹೇಳಿದ್ದಾರೆ. ನನ್ನ ವಿರುದ್ಧ ಮಾತನಾಡಿದರೆ ಕಲಬುರಗಿಗೆ ಬರಲು ಬಿಡೋಲ್ಲ ಎಂದು ಈಗ ಹೇಳುವ ಇಲ್ಲಿಯ ಕಲಬುರಗಿಯ ನಾಯಕರು. ಅಂದು ಇದೇ ಮಾತು ಇಂದಿರಾ ಗಾಂಧಿ ಹೇಳಿದ್ರು ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಗೆ ತಿವಿದರು.**

**ಈ ದೇಶಕ್ಕೆ ಯಾವಾಗ ಯಾವಾಗ ಆಪತ್ತು ಬಂದಿದೆಯೋ ಅಂದು ಸ್ಥಳಕ್ಕೆ ಧಾವಿಸಿ ಆಪತ್ಬಾಂದವ ರೀತಿಯಲಿ ಕೆಲಸ ಮಾಡಿದ್ದು ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರೆಸ್ಸೆಸ್) ಮಾತ್ರ. ಅದೇ ಆರೆಸ್ಸೆಸ್ ಅಂದರೆ ಇಂದು ಮುಗಿಬೀಳುವ ಕಾಂಗ್ರೆಸ್ ಪಕ್ಷಕ್ಕೆ ಸಂಘದ ವಿರುದ್ಧ ಮಾತನಾಡುವ ಯಾವ ನೈತಿಕತೆಯೂ ಇಲ್ಲ.**

**– ಚಕ್ರವರ್ತಿ ಸೂಲಿಬೆಲೆ, ಯುವಾ ಬ್ರಿಗೇಡ್ ಸ್ಥಾಪಕ, ಚಿಂತಕ.**

**ಕಲಬುರಗಿ, ಸೆ. 23 :** ದೇಶದ ಮೇಲೆ ತುರ್ತು ಪರಿಸ್ಥಿತಿ ಹೇರಿ, ಅಂಬೇಡ್ಕರ್ ಅವರ ಆಶಯಕ್ಕೆ ದಕ್ಕೆ ತಂದವರು ಅಂದಿನ ಪ್ರಧಾನಿ ಇಂದಿರಾ ಗಾಂಧಿ ಅವರು. ಮೊಟ್ಟ ಮೊದಲ ಬಾರಿಗೆ ಸಂವಿಧಾನ ಬದಲಾವಣೆ ಮಾಡ್ತೀವಿ ಎಂದು ಹೇಳಿದ್ದು 1976ರಲ್ಲಿ ಅಂದಿನ ಪ್ರಧಾನಿ ಇಂದಿರಾಗಾಂಧಿ. ಆದರೆ, ಇಂದಿನ ಕಾಂಗ್ರೆಸ್ ಪಕ್ಷದವರು ಈ ಬಗ್ಗೆ ಬಾಯ್ಮುಚ್ಚಿಕೊಂಡಿದ್ದು, ಬಿಜೆಪಿ ಸಂವಿಧಾನದ ವಿರೋಧಿ ಎಂಬ ಹೇಳಿಕೆ ನೀಡುತ್ತಾ ಇತರರ ತಲೆ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಯುವ ಬ್ರಿಗೇಡ್ ಸ್ಥಾಪಕ, ಖ್ಯಾತ ಚಿಂತಕ, ವಾಗ್ಮಿ ಚಕ್ರವರ್ತಿ ಸೂಲಿಬೆಲೆ ಆರೋಪಿಸಿದರು.

ನಗರದ ಕೋಟೆಯ ಮುಂಭಾಗದಲ್ಲಿನ ಹಿಂದು ಮಹಾಗಣಪತಿ ಸಮಿತಿ ಆಯೋಜಿಸಿದ್ದ ತುರ್ತು ಪರಿಸ್ಥಿತಿ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ದಿಕ್ಸೂಚಿ ಭಾಷಣ ಮಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಸರ್ವಾಧಿಕಾರಿಯಂತೆ ಆಡಳಿತ ನಡೆಸುತ್ತಿದ್ದಾರೆ ಎಂದು ಬೊಬ್ಬೆ ಹೊಡೆಯುವ ಕಾಂಗ್ರೆಸ್ ನಾಯಕರು, ಇಂದಿರಾ ಗಾಂಧಿ ಅವರು ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿದ್ದು ಸರ್ವಾಧಿಕಾರಿ ಧೋರಣೆ ಅಲ್ಲವೇ? ಅವರು ಅಂಬೇಡ್ಕರ್ ಅವರ ಸಂವಿಧಾನ ವಿರೋಧಿ ನಡೆಯಾಗಿರಲಿಲ್ಲವೇ? ಎಂದು ಪ್ರಶ್ನಿಸಿದ ಅವರು ಪ್ರಧಾನಿ ನರೇಂದ್ರ ಮೋದಿ ಅವರು ಸಂವಿಧಾನ ಬದಲಾವಣೆ ಸಾಧ್ಯವೇ ಇಲ್ಲ ಎಂದು ಪದೇ ಪದೇ ಹೇಳಿಕೊಂಡು ಬಂದಿದ್ದರೆ. ಆದರೆ, ಈ ಮಾತನ್ನು ಯಾರು ಹೇಳಲೆ ಇಲ್ಲ. ಬರೀ ಬದಲಾವಣೆ ಮಾಡ್ತಿನಿ ಅನೋದು ಮಾತ್ರ ಹೆಚ್ಚು ಹೇಳ್ತಾರೆ. ಗಾಂಧಿ ಕುಟುಂಬದವರು ಪ್ರಧಾನಿಯಾಗಿದ್ದಾಗ, 75 ಬಾರಿ ಕಾಂಗ್ರೆಸ್ ಪಕ್ಷ ಸಂವಿಧಾನದ ತಿದ್ದುಪಡಿ ಮಾಡಿದ್ದಾರೆ. ಗಾಂಧಿ ಕುಟುಂಬದ ಒಂದೇ ಮನೆಯಿಂದ 58 ಬಾರಿ ಸಂವಿಧಾನದ ತಿದ್ದುಪಡಿಯಾಗಿದೆ ಎಂದರು.


ನರೇಂದ್ರ ಮೋದಿ 8 ಬಾರಿ ಸಂವಿಧಾನದ ತಿದ್ದುಪಡಿ ಮಾಡಿದ್ದಾರೆ. ಅದರಲ್ಲಿ ಒಂದು ಎಂದರೆ ಮೀಸಲಾತಿಯನ್ನು ಹತ್ತು ವರ್ಷಗಳ ಕಾಲ ಮುಂದುವರೆಸಬೇಕು ಎಂಬುದಾಗಿದೆ. ಈ ದೇಶಗಳ ಪ್ರಜೆಗಳ ಮೇಲೆ ಸರ್ವಾಧಿಕಾರಿಯಂತೆ ತುರ್ತು ಪರಿಸ್ಥಿತಿ ಹಾಕಿದ್ದರು ಎಂದರು.

ವೇದಿಕೆಯಲ್ಲಿ ಹಿಂದೂ ಮಹಾಗಣಪತಿ ಸಮಿತಿ ಅಧ್ಯಕ್ಷ ನಾಗೇಂದ್ರ ಕಾಬಡೆ, ವಿಧಾನ ಪಂರಿಷಂತು ಸದಸ್ಯ ಬಿ.ಜಿ. ಪಾಟೀಲ್, ಶಾಸಕ ಬಸವರಾಜ ಮತ್ತಿಮಡು, ಯುವ ಮುಖಂಡ ನಿತೀನ್ ಗುತ್ತೇದಾರ್, ಸ್ವಾಗತ ಸಮಿತಿ ಅಧ್ಯಕ್ಷ ಸುರೇಶ್ ಟೆಂಗಳಿ, ಶರಣು ಪಪ್ಪಾ, ಅಂಬಾಜಿ ಶಿವಾಜಿ, ರಮೇಶ್ ಚಿತಕೋಟೆ, ಉಮೇಶ್ ಪಾಟೀಲ್, ಸಿದ್ದರಾಜ ಬಿರಾದಾರ, ಶಿವಯೋಗಿ ನಾಗರಹಳ್ಳಿ ಪರಮೇಶ್ವರ ಆಲಗೂಡ್, ಸಂತೋಷ್ ಪೂಜಾರಿ ಸೇರಿದಂತೆ ಹಲವು ಸದಸ್ಯರು ಉಪಸ್ಥಿತರಿದ್ದರು.

## ಸಿದ್ದರಾಮಯ್ಯ ರಾಜೀನಾಮೆ ಕೊಡುತ್ತಾರೋ

# ಇಲ್ಲ ಜೈಲಿಗೆ ಹೋಗುತ್ತಾರೋ ಗೊತ್ತಿಲ್ಲ ಕಾಂಗ್ರೆಸ್ ಸರ್ಕಾರ ಮಾತ್ರ ಇರಲ್ಲ: ಈಶ್ವರಪ್ಪ

**ವಿಜಯಪುರ, ಸೆ. 23 :** ಮುಖ್ಯಮಂತ್ರಿ ಸಿದ್ದರಾಮಯ್ಯ ಖುರ್ಚಿ ಮೇಲೆ ಎಲ್ಲರೂ ಕಣ್ಣಿಟ್ಟಿದ್ದಾರೆ. ಆದರೂ, ಅವರ ಖುರ್ಚಿ ಅಲುಗಾಡುತ್ತಿಲ್ಲ ಎನ್ನುತ್ತಾ ಎಲ್ಲರೂ ಮೇಲ್ನೋಟಕ್ಕೆ ಬೆಂಬಲ ಕೊಡುತ್ತಿದ್ದಾರೆ. ಎಂ.ಬಿ. ಪಾಟೀಲ್ ಸೇರಿದಂತೆ ಎಲ್ಲರಿಗೂ ಮುಖ್ಯಮಂತ್ರಿ ಆಗಬೇಕು ಹಂಬಲ ಇದೆ. ಅಷ್ಟೂಕ್ಕೂ ಸಿದ್ದರಾಮಯ್ಯ ಪರಿಸ್ಥಿತಿ ಏನಾಗುತ್ತೋ ಗೊತ್ತಿಲ್ಲ. ರಾಜೀನಾಮೆ ಕೊಡುತ್ತಾರೋ, ಇಲ್ಲ ಜೈಲಿಗೆ ಹೋಗುತ್ತಾರೋ ಗೊತ್ತಿಲ್ಲ. ಆದರೆ ಸರ್ಕಾರ ಮಾತ್ರ ಬಿದ್ದುಹೋಗುತ್ತದೆ ಎಂದು ಮಾಜಿ ಡಿಸಿಎಂ ಕೆ.ಎಸ್. ಈಶ್ವರಪ್ಪ ಹೇಳಿದರು.



ನಗರದಲ್ಲಿ ಸುದ್ದಿಗಾರರ ಜತೆಗೆ ಮಾತನಾಡಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಕುರ್ಚಿ ಗಟ್ಟಿಯಿಲ್ಲ ಎನ್ನುವ ಎಂ.ಬಿ. ಪಾಟೀಲ್ ಅವರ ಖುರ್ಚಿ ಏನಾಗುತ್ತಿದೆ? ಅವರ ಕಣ್ಣು ಸಿಎಂ ಖುರ್ಚಿ ಮೇಲಿದೆ. ಅವರು ತೋರಿಕೆಗಾಗಿ ಮೇಲೆ ಸಿಎಂಗೆ ಬೆಂಬಲ ಎನ್ನುತ್ತಾರೆ. ಒಳಗೆ ಅವರಿಗೂ ಸಿಎಂ ಆಗುವ ಹಂಬಲವಿದೆ. ಅವರು ಸಿಎಂ ಆಗಲು ನನ್ನ ತಕರಾರು ಇಲ್ಲ. ಅವರು ಕಾಂಗ್ರೆಸ್ ಪಕ್ಷಕ್ಕೆ ದುಡಿದಿದ್ದಾರೆ. ಕೇವಲ ಎಂ.ಬಿ. ಪಾಟೀಲರಲ್ಲ, ಬಹುತೇಕ ರಾಜಕಾರಣಿಗಳಿಗೂ ಇದೇ ರೀತಿ ಹಂಬಲವಿದೆ ಎಂದರು.

ಇದೇ ವೇಳೆ, ಸಿಎಂ ಸಿದ್ದರಾಮಯ್ಯನವರು ಈ ಹಿಂದಿನ ನಮ್ಮ ಸರ್ಕಾರದ ಯೋಜನೆಗಳನ್ನು ರದ್ದು ಮಾಡಿದ್ದಾರೆ. ಆಗ ನಮ್ಮ ಸರ್ಕಾರ ಅನುದಾನ ಕೊಟ್ಟಿತ್ತು. ಈಗ ಅವೆಲ್ಲ ಅರ್ಧಂಬರ್ಧ ಕೆಲಸ ಆಗಿದ್ದು, ಅಂತಹ ಕಾಮಗಾರಿಗಳನ್ನು ರದ್ದು ಮಾಡಿದ್ದಾರೆ. ಇದು ಹಿಂದುಳಿದ, ದಲಿತರಿಗೆ ಮಾಡಿದಂತಹ ಮೋಸ. ಸಿದ್ದರಾಮಯ್ಯನವರೇ ನೀವು ಹಿಂದುಳಿದ, ದಲಿತರ ಚಾಂಪಿಯನ್ ಅನಿಸಿಕೊಂಡವರು. ಇದೀಗ ಅನ್ಯಾಯದ ಆಪಾದನೆ ಹೊತ್ತುಕೊಳ್ಳಬೇಕಾಗುತ್ತದೆ. ಹೀಗಾಗಿ ನೀವು ರದ್ದು ಮಾಡಿದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅನುದಾನ ಕೊಡಿ ಎಂದು ಈಶ್ವರಪ್ಪ ಒತ್ತಾಯಿಸಿದರು. ಮಾಜಿ ಸಿಎಂ ಯಡಿಯೂರಪ್ಪನವರ ಡಿನೊಟಿಫಿಕೇಷನ್ ಪ್ರಕರಣದಲ್ಲಿ ಲೋಕಾಯುಕ್ತ ವಿಚಾರಣೆ ಬಗ್ಗೆ ಪ್ರತಿಕ್ರಿಯಿಸಿದ ಅವರು, ಡಿನೋಟಿಫಿಕೇಷನ್ ಕೇಸ್ ಏನಾಯ್ತು ಎಂಬುದು ಗೊತ್ತಿಲ್ಲ. ಆದರೆ, ರಾಜ್ಯದಲ್ಲಿ ಇಂದು ಸೈದ್ಧಾಂತಿಕವಾಗಿ ಚರ್ಚೆಗಳು ನಡೆಯುತ್ತಿಲ್ಲ. ಎಲ್ಲರಲ್ಲೂ ವೈಯಕ್ತಿಕವಾಗಿ ದಾಳಿ ನಡೆಯುತ್ತಿದೆ. ರಾಜಕಾರಣ ಹೇಗೆ ನಡೆಯುತ್ತಿದೆ ಎಂದರೆ, ಅದನ್ನು ನೋಡಿ ಜನರಿಗೂ ಬೇಜಾರಾಗುತ್ತಿದೆ ಎಂದು ಹೇಳಿದರು.

ಅಲ್ಲದೇ, ಬಿಜೆಪಿ ಶಾಸಕ ಮುನಿರತ್ನ ಪ್ರಕರಣದ ವಿಚಾರವಾಗಿ ಮಾತನಾಡಲು ನಮಗೆ ಅಸಹ್ಯವಾಗುತ್ತಿದೆ. ಅದೇ ದರ್ಶನ, ಅದೇ ಪ್ರಜ್ವಲ್, ಅದೇ ಮುನಿರತ್ನ ವಿಚಾರ ಮಾಧ್ಯಮಗಳು ಸ್ವಲ್ಪ ಬಿಡಬೇಕು. ಈ ತರಹ ಪ್ರಕರಣಗಳು ಅಸಹ್ಯ. ನಾನು ಇವುಗಳ ಬಗ್ಗೆ ಮಾತನಾಡಲ್ಲ ಎಂದ ಈಶ್ವರಪ್ಪ ಪ್ರತಿಕ್ರಿಯೆ ಕೊಡಲು ನಿರಾಕರಿಸಿದರು.

# ಶ್ರೀಶೈಲ ಜಗದ್ಗುರುಗಳಿಂದ ಸಿದ್ಧಾಂತ ಶಿಖಾಮಣಿ ಭವ್ಯ ಮೆರವಣಿಗೆ

**ಬೀದರ್, ಸೆ. 23 :** ಶ್ರೀ ಸಿದ್ಧಾಂಥ ಶಿಖಾಮಣಿ ಅಭಿಯಾನ, ಶ್ರಾವಣ ಶಿವ ದರ್ಶನ ಸಂಚಾರ ಸಮಾರೋಪ ಹಾಗೂ ಶ್ರೀ ಜಗದ್ಗುರು ಪಂಚಾಚಾರ್ಯ ರಾಷ್ಟ್ರೀಯ ಪುರಸ್ಕಾರ ಪ್ರದಾನ ಸಮಾರಂಭದ ನಿಮಿತ್ತ ನಗರದಲ್ಲಿ ಭಾನುವಾರ ಅಲಂಕೃತ ಸಾರೋಟಿನಲ್ಲಿ ಶ್ರೀಶೈಲ ಜಗದ್ಗುರು ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯರ ಭವ್ಯ ಮೆರವಣಿಗೆ ನಡೆಯಿತು.



ಪಾಪನಾಶ ದೇಗುಲದಿಂದ ಆರಂಭಗೊಂಡ ಮೆರವಣಿಗೆಯು ಬೀದರ್-ಭಾಲ್ಕಿ ಮುಖ್ಯರಸ್ತೆಯ ಮೂಲಕ ಸಾಗಿ ಪ್ರತಾಪನಗರದ ಬೆಲ್ದಾಳೆ ಕನ್ವೆನ್ಷನ್ ಹಾಲ್‌ಗೆ ತಲುಪಿ ಸಮಾರೋಪಗೊಂಡಿತು. ಸಾರೋಟಿನಲ್ಲಿ ಶ್ರೀಶೈಲ ಜಗದ್ಗುರು ಇದ್ದರು. ಮುಂಭಾಗದಲ್ಲಿ ಶ್ರೀ ಸಿದ್ಧಾಂಥ ಶಿಖಾಮಣಿ ಬೃಹತ್ ಗ್ರಂಥ, 21 ವಿವಿಧ ಭಾಷೆಗಳಿಗೆ ತರ್ಜುಮೆ ಮಾಡಲಾದ ಗಂಥದ ಪ್ರತಿಗಳನ್ನು ಇಡಲಾಗಿತ್ತು. ಡೊಳ್ಳು ಕುಣಿತ, ವೀರಗಾಸೆ, ಹಲಿಗೆ, ಲಂಬಾಣಿ ನೃತ್ಯ, ಕೋಲಾಟ, ಭಜನೆ, ಮಹಾರಾಷ್ಟ್ರದ ವಾರಕಾರಿ ಕಲಾ ತಂಡ ಸೇರಿದಂತೆ ವಿವಿಧ ಕಲಾ ತಂಡಗಳು, ತಲೆ ಮೇಲೆ ಕುಂಭ ಕಳಸ, ಸಿದ್ಧಾಂಥ ಶಿಖಾಮಣಿ ಗ್ರಂಥದ ಪ್ರತಿ ಹೊತ್ತ ಮಹಿಳೆಯರು ಮೆರವಣಿಗೆಯ ವೈಭವವನ್ನು ಹೆಚ್ಚಿಸಿದರು. ಡಿಜೆದಲ್ಲಿ ಹೊರ ಹೊಮ್ಮಿದ ಸಂಗೀತದ ತಾಳಕ್ಕೆ ತಕ್ಕಂತೆ ಹೆಜ್ಜೆ ಹಾಕಿ ಯುವಕರು ಸಂಭ್ರಮಿಸಿದರು.

ಕಾರ್ಯಕ್ರಮದ ಸ್ವಾಗತ ಸಮಿತಿಯ ಗೌರವಾಧ್ಯಕ್ಷ ಶಿವಶರಣಪ್ಪ ವಾಲಿ ಮೆರವಣಿಗೆಗೆ ಚಾಲನೆ ನೀಡಿದರು. ಜ್ಞಾನ ಶಿವಯೋಗಾಶ್ರಮದ ಡಾ. ರಾಜಶೇಖರ ಶಿವಾಚಾರ್ಯರು, ಕಡಗಂಚಿಯ ವೀರಭದ್ರ ಶಿವಾಚಾರ್ಯರು, ಬಿಡಿಎ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಅಧ್ಯಕ್ಷ ವೈಜಿನಾಥ ಕಮಠಾಣೆ, ಜಿ. ಎನ್. ಸಹಕಾರ ಆಸ್ಪತ್ರೆಯ ಉಪಾಧ್ಯಕ್ಷ ತರುಣ್ ಎಸ್. ನಾಗಮಾರಪಳ್ಳಿ, ಲಕ್ಷ್ಮೀ ಆಲೂರೆ, ಕಾವೇರಿ ಸ್ವಾಮಿ, ಮಂಗಲಾ ಮರಕಲೆ ಮತ್ತಿತರರು ಪಾಲ್ಗೊಂಡಿದ್ದರು.

# ಹಂಪಿ ಕನ್ನಡ ವಿವಿ ಉದ್ದೇಶವೇ ಗ್ರಾಮೀಣ ಜನರಿಗೆ ಸಂದೇಶ ತಲುಪಿಸುವುದು



**ಕಲಬುರಗಿ, ಸೆ. 23 :** ಜನರ ಬಳಿಗೆ ಹೋಗಿ ಸಂಶೋಧನಾ ವಿಷಯಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಮಹೋನ್ನತ ಉದ್ದೇಶ ಹಂಪಿ ಕನ್ನಡ ವಿವಿ ಧ್ಯೇಯ ಹೊಂದಿದೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಡಿ.ವಿ. ಪರಶಿವಮೂರ್ತಿ ಹೇಳಿದರು.

ಜಿಲ್ಲೆಯ ಅಳ್ಳೊಳ್ಳಿ ಗದ್ದುಗೆ ಮಠದ ನಾಗೇಂದ್ರ ನಾಟ್ಯ ಸಂಘದ ರಂಗಮಂದಿರದಲ್ಲಿ ಹಂಪಿ ಕನ್ನಡ ವಿವಿ ಶ್ರೀರಂಗ ದತ್ತಿನಿಧಿ ಹಾಗೂ ನಾಟಕ ವಿಭಾಗ ಸಂಗೀತ ಮತ್ತು ನೃತ್ಯ ವಿಭಾಗ ಹಾಗೂ ಶ್ರೀ ಅಯ್ಯಪ್ಪಯ್ಯ ಮಹಾತ್ಮಪೀಠ ಗದ್ದಗಿ ಅಳ್ಳೊಳ್ಳಿ ಮತ್ತು ತಾಲ್ಲೂಕು ಕಸಾಪ ಸಹಯೋಗದಲ್ಲಿ ನಡೆದ ರಂಗಕಲೆ ಮತ್ತು ಸಂಗೀತ ಕ್ಷೇತ್ರಕ್ಕೆ ಚಿತ್ತಾಪುರ ತಾಲ್ಲೂಕಿನ ಕೊಡುಗೆ ಬಗ್ಗೆ ನಡೆದ ರಾಜ್ಯಮಟ್ಟದ ವಿಚಾರ ಸಂಕೀರಣವನ್ನು ಡೋಲಕ್ ಬಾರಿಸುವ ಮೂಲಕ ಚಾಲನೆ ನೀಡಿದ ಅವರು, ನಮ್ಮ ನೆಲದ, ಮಣ್ಣಿನ ಭಾಷೆಯು, ಸಂಸ್ಕೃತಿಯ 1600 ಪುಸ್ತಕಗಳು ಕನ್ನಡ ವಿವಿ ಯಿಂದ ಪ್ರಕಟಿಸಲಾಗಿದೆ. ಅವುಗಳನ್ನು ಓದಲು ವಿವಿ ಆವರಣಕ್ಕೆ ಬನ್ನಿ ಎಂದರು.

ಶಹಾಪುರದ ಆನೆಗುಂದಿ ಸರಸ್ವತಿ ಪೀಠದ ಏಕದಂಡಗಿ ಮಠದ ಅಜ್ಞೇಂದ್ರ ಮಹಾಸ್ವಾಮಿಗಳು ಮಾತನಾಡಿದರು. ಹಂಪಿ ವಿವಿ ಸಂಗೀತ ಮತ್ತು ನೃತ್ಯ, ನಾಟಕ ವಿಭಾಗದ ಸಂಚಾಲಕ ಡಾ. ವೀರೇಶ ಬಡಿಗೇರ ಮಾತನಾಡಿದರು. ತಾಲ್ಲೂಕು ಕಸಾಪ ಅಧ್ಯಕ್ಷ ವೀರೇಂದ್ರಕುಮಾರ ಕೊಲ್ಲೂರ ಅವರು ಕವಿ ಅಕ್ಷಯಕುಮಾರ ಕೂಡ್ಲಿ ವಿರಚಿತ ಪದದಿ ಪ್ರೇಮ. ರಾಧೇ ಶ್ಯಾಮ ಹಾಗೂ ವಿಶ್ವಾರಾಧ್ಯ ವಿಶ್ವಕರ್ಮ ವಿರಚಿತ ಕಲರವ ಕವನ ಸಂಕಲನ ಪುಸ್ತಕಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಅಳ್ಳೊಳ್ಳಿ ಗದ್ದುಗೆ ಮಠದ ನಾಗಪ್ಪಯ್ಯ ಮಹಾಸ್ವಾಮಿ, ಶಿರಸಪ್ಪಯ್ಯ ಮಹಾಸ್ವಾಮಿಗಳು ಸಾನ್ನಿಧ್ಯವಹಿಸಿದ್ದರು. ವಿಚಾರ ಸಂಕೀರಣ ನಿರ್ದೇಶಕ ನರಸಿಂಗರಾವ ಹೇಮನೂರ ಸ್ವಾಗತಿಸಿದರು. ಅಯ್ಯಣ್ಣ ಮಾಸ್ತರ, ಶ್ರೀಧರ ಆಚಾರ್ಯ ಪ್ರಾರ್ಥನಾ ಗೀತೆ ಹಾಡಿದರು. ಬಸವರಾಜ ಬಡಿಗೇರ ಬೋರಗಿ ನಿರೂಪಣೆ ಮಾಡಿದರು.

# ಗರ್ಭಕೋಶ, ಸ್ತನ ಕ್ಯಾನ್ಸರ್ ಭೀತಿ ಬಗ್ಗೆ ಜಾಗೃತಿ

**ಬಳ್ಳಾರಿ, ಸೆ. 23 :** ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ, ಬಳ್ಳಾರಿ ಹಾಗೂ ಬಳ್ಳಾರಿ ಜಿಲ್ಲಾ ಪೊಲೀಸ್ ರವರ ಸಹಯೋಗದೊಂದಿಗೆ ಬಳ್ಳಾರಿ ಜಿಲ್ಲೆಯ ಮಹಿಳಾ ಪೊಲೀಸ್ ಸಿಬ್ಬಂದಿಗೆ ಗರ್ಭಕೋಶದ ಕ್ಯಾನ್ಸರ್ ಮತ್ತು ಎಚ್.ಪಿ.ವಿ. ವ್ಯಾಕ್ಸಿನ್ ಬಗ್ಗೆ ಅರಿವು ಮತ್ತು ತಪಾಸಣಾ ಶಿಬಿರವನ್ನು ಬಳ್ಳಾರಿ ಜಿಲ್ಲಾ ಪೊಲೀಸ್ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು, ಈ ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ಶೋಭರಾಣಿ. ವಿ.ಜೆ ರವರು ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡುತ್ತಾ ಗರ್ಭಕೋಶ ಮತ್ತು ಸ್ತನ ಕ್ಯಾನ್ಸರ್ ನಲ್ಲಿ ಸಾವಿನ ಸಂಖ್ಯೆ ಹೆಚ್ಚು ಕಂಡು ಬರುತ್ತಿದೆ.

ಅದರಲ್ಲಿಯೂ ಶೇಕಡಾ 77% ರಷ್ಟು ಮಹಿಳೆಯರಲ್ಲಿ ಸಾವು - ನೋವುಗಳು ಹೆಚ್ಚಳವಾಗಿದೆ ಅಂದರೆ ಭಾರತದಲ್ಲಿ ಪ್ರತಿ 8 ನಿಮಿಷಕ್ಕೆ ಒಬ್ಬ ಮಹಿಳೆ ಗರ್ಭಕಂಠದ ಕ್ಯಾನ್ಸರ್ ನಿಂದ ಸಾವನ್ನಪ್ಪುತ್ತಿದ್ದಾರೆ.

ಹಾಗಾಗಿಯೇ ಇದರ ಬಗ್ಗೆ ಅರಿವು ಹಾಗೂ ತಪಾಸಣೆಯ ಮಹತ್ವ ಹೆಚ್ಚಿಸಬೇಕೆಂದು ಜಿಲ್ಲೆಯ ಎಲ್ಲಾ ಮಹಿಳಾ ಪೊಲೀಸ್ ಸಿಬ್ಬಂದಿಗೆ ಈ ಶಿಬಿರವನ್ನು ಏರ್ಪಡಿಸಿಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿ ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾದ ಬಳ್ಳಾರಿ ಶಾಖೆಯ ಅಧ್ಯಕ್ಷ ಟಿ.ಜಿ.ವಿಠ್ಠಲ್ ರವರು ಕಾರ್ಯಕ್ರಮದ ಕುರಿತು ಮಾತನಾಡುತ್ತಾ ನಮ್ಮ ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ ಸಂಸ್ಥೆಯು ಕಳೆದ 75 ವರ್ಷಗಳಿಂದ ಆರೋಗ್ಯ ಸೇವೆ ನೀಡುತ್ತಾ ಬಂದಿದೆ. ಹಾಗೆಯೇ ಇದು ಲಾಭದಾಯಕ ಸಂಸ್ಥೆ ಅಲ್ಲದಿರುವುದರಿಂದ ಕೇವಲ ಆರೋಗ್ಯ ಸೇವೆಗಾಗಿ ಇರುವ ಸಂಸ್ಥೆ ಎಂದು ಹೇಳುತ್ತಾ ಆಧುನಿಕ ತಂತ್ರಜ್ಞಾನ ಬಳಸಿ ಗರ್ಭಕಂಠದ ಕ್ಯಾನ್ಸರ್ ಅನ್ನು ನಿಖರವಾಗಿ ಪತ್ತೆ ಹಚ್ಚಿ ಮತ್ತು ಅದರ ತಪಾಸಣೆಯನ್ನು ಕಡಿಮೆ ವೆಚ್ಚದಲ್ಲಿ ಮಾಡಿಕೊಡುವ ವ್ಯವಸ್ಥೆಯನ್ನು ಹೊಂದಿದೆ ಎಂದು ತಿಳಿಸಿದರು.

ನಂತರ ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾದ ಖ್ಯಾತ ಸ್ತ್ರೀರೋಗ ತಜ್ಞರು ಹಾಗೂ ಭಾರತೀಯ ಕುಟುಂಬ ಕಲ್ಯಾಣ ಸಂಸ್ಥೆಯ ಬಳ್ಳಾರಿ ಶಾಖೆಯ ಸದಸ್ಯರೂ ಆದ ಡಾ. ಪ್ರಣೀತಾ ಅಜಯ್ ಮಾತನಾಡಿದ ಗರ್ಭಕೋಶದ ಕ್ಯಾನ್ಸರ್ ಹಾಗೂ ಸ್ಥನ ಕ್ಯಾನ್ಸರ್ ಹೇಗೆ ಹರಡುತ್ತದೆ ಹಾಗೂ ಅದು ಬಾರದ ಹಾಗೇ ಮುನ್ನೆಚ್ಚರಿಕೆ ಕ್ರಮವಹಿಸುವ ಕುರಿತು ಹಾಗೂ ಎಚ್.ಪಿ.ವಿ. ಲಸಿಕೆಯ ಕುರಿತು ಸುದೀರ್ಘವಾದ ಮಾಹಿತಿಯನ್ನು ತಿಳಿಸಿದರು.

### ಪಹಣಿ-ಆಧಾರ ಜೋಡಣೆಗೆ ಮುಂದೆ ಬಾರದ ರೈತರು

# ಬೇನಾಮಿ ಹೆಸರಿನಲ್ಲಿ ಜಮೀನು ಖರೀದಿ: ಪ್ರಭಾವಿಗಳಿಗೆ ಆತಂಕ

**ರಾಯಚೂರು, ಸೆ. 23 :** ರಯತರ ಪಹಣಿಗೆ ಆಧಾರ ಕಾರ್ಡ್ ಜೋಡಣೆ ಅನೇಕ ಸಮಸ್ಯೆಗಳಿಂದ ವಿಳಂಬವಾಗುತ್ತಿದೆ. ಕೆಲ ರೈತರು ಸ್ವಯಂಪ್ರೇರಿತವಾಗಿ ಮುಂದೆ ಬಂದರೆ, ಇನ್ನೂ ಕೆಲವರು ಮುಂದೆಬರುತ್ತಿಲ್ಲ. ಆಧಾರ ಕಾರ್ಡ್ ಜೋಡಣೆ ಕಾರ್ಯಕ್ಕೆ ಸಹಕಾರ ನೀಡುತ್ತಿಲ್ಲ ಎಂಬ ಬೇಸರವೂ ಕಂದಾಯ ಇಲಾಖೆಯ ಅಧಿಕಾರಿಗಳಿಂದ ಕೇಳಿಬರುತ್ತಿದೆ.

ಮತ್ತೊಂದೆಡೆ ಬೇನಾಮಿ ಹೆಸರಿನಲ್ಲಿ ಜಮೀನು ಖರೀದಿ ಮಾಡಿರುವ ಪ್ರಭಾವಿಗಳಿಗೆ ಆತಂಕವೂ ಸೃಷ್ಟಿಯಾಗಿದೆ. ರೈತರಿಗೆ ಪೂರಕವಾಗಿರುವ ಯೋಜನೆಗಳು ಸರಿಯಾಗಿ ಅವರಿಗೆ ತಲುಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಪಹಣಿಯೊಂದಿಗೆ ಆಧಾರ ಜೋಡಣೆ ಮಾಡುವಂಥ ಯೋಜನೆಯನ್ನು ಕಂದಾಯ ಇಲಾಖೆ ಮುಂದಾಗಿದೆ. ಇದನ್ನು ರೈತರು ಸ್ವಾಗತಿಸುತ್ತಿದ್ದಾರೆ. ಅಲ್ಲದೇ ಈ ಕ್ರಮದಿಂದ ರೈತರಿಗೆ ದೊರಕಬೇಕಾದರೆ ಪರಿಹಾರ, ಸರ್ಕಾರದ ಯೋಜನೆಗಳ ನೈಜ ಫಲಾನುಭವಿಗಳಿಗೆ ತಲುಪಲು ಸಹಕಾರಿಯಾಗುತ್ತದೆ. ಭೂಮಿ ಹೊಂದಿದ ಮಾಲೀಕನಿಗೆ ತಿಳಿಯದಂತೆ ಅವರ ಸಂಬಂಧಿಗಳೇ ಜಮೀನನ್ನು ಅಕ್ರಮವಾಗಿ ಹೆಸರಿಗೆ ಮಾಡಿಕೊಳ್ಳುವ ಕಾನೂನು ಬಾಹಿರ ಚಟುವಟಿಕೆಗಳಿಗೆ ಕಡಿವಾಣ ಬೀಳುತ್ತದೆ ಎಂಬ ಅನೇಕ ಸದುದ್ದೇಶಗಳೊಂದಿಗೆ ರೈತರ ಜಮೀನಿನ ಪಹಣಿಯನ್ನು ಆಧಾರ ಕಾರ್ಡ್‌ನೊಂದಿಗೆ ಜೋಡಣೆ ಮಾಡಲಾಗುತ್ತಿದೆ.

ಸಣ್ಣಪುಟ್ಟ ರೈತರು ಸರ್ಕಾರದ ನಿಯಮದ ಪ್ರಕಾರ ಭೂಮಿಯ ಮಿತಿಯೊಳಗಿರುವ ರೈತರು ಸ್ವಯಂಪ್ರೇರಿತರಾಗಿ ಪಹಣಿಯೊಂದಿಗೆ ಆಧಾರ ಜೋಡಣೆಗೆ ಮುಂದಾಗುತ್ತಿದ್ದಾರೆ. ಕೆಲವು ಕಡೆ ಒಂದೇ ಪಹಣಿಯಲ್ಲಿ ಮೂರ್‍ನಾಲ್ಕು ಹೆಸರುಗಳಿರುವ ಮಾಲೀಕರು ಆಧಾರ ಕಾರ್ಡ್ ಜೋಡಣೆಗೆ ಗ್ರಾಮಲೆಕ್ಕಾಧಿಕಾರಿಗಳಿಗೆ ಸಹಕಾರ ನೀಡುತ್ತಿಲ್ಲ. ಇನ್ನೂ ಕೆಲವರು ಆಧಾರ ಕಾರ್ಡ್ ಪರಿಷ್ಕರಣೆಗೊಳಿಸದೇ ಇರುವುದು, ಮತ್ತೊಂದು ಪ್ರಕರಣಗಳಲ್ಲಿ ಆಧಾರ ಕಾರ್ಡ್‌ನ ಮೊಬೈಲ್ ಸಂಖ್ಯೆಯೇ ಬದಲಾವಣೆಯಾಗಿರುವುದು. ಸರ್ಕಾರ ನಿಗದಿಪಡಿಸಿದ ಜಮೀನಿನ ಮಿತಿಗೂ ಹೆಚ್ಚು ಭೂಮಿ ಖರೀದಿ ಮಾಡಿ ಬೇನಾಮಿ ಹೆಸರಿನಲ್ಲಿ ನೋಂದಣಿ ಮಾಡಿದವರಿಗೆ ಸಮಸ್ಯೆಯಾಗಿದೆ. ಇದಕ್ಕೆ ಕಾರಣ ಮನೆಯಲ್ಲಿ ಕೆಲಸ ಮಾಡುವ ಕೂಲಿ ಆಳುಗಳ ಹೆಸರಿನಲ್ಲಿ ಬೇನಾಮಿಯಾಗಿ ಜಮೀನು ಖರೀದಿಸಿ ನೋಂದಣಿ ಮಾಡಿಸಿರುವವರಿಗೆ ಬೇನಾಮಿ ಹೆಸರಿನಲ್ಲಿದ್ದ ಕೆಲಸ ಮಾಡುವ ಹೆಸರಿನಲ್ಲಿದ್ದ ಜಮೀನಿಗೂ ಸರ್ಕಾರದಿಂದಲೇ ದಾಖಲೆಗಳು ಸೃಷ್ಟಿಯಾದರೆ. ಸಮಸ್ಯೆಯೂ ಎದುರಾಗುವ ಸಾಧ್ಯತೆ ಅಲ್ಲಗಳೆವಂತಿಲ್ಲ.

ಪ್ರಭಾವಿಗಳು ತಮ್ಮ ಬೇನಾಮಿ ಜಮೀನನ್ನು ರಕ್ಷಣೆ ಮಾಡಬಹುದು. ತಮ್ಮ ಪ್ರಭಾವ ಕಡಿಮೆಯಾದ ನಂತರ ಬೇನಾಮಿಯಾಗಿ ಖರೀದಿಸಿ ಭೂಮಿಯನ್ನು ಯಾರ ಹೆಸರಿಗೆ ಮಾಡಿರುತ್ತಾರೆ ಅವರೇ ಕಷ್ಟಕ್ಕೆ ಸಿಲುಕುತ್ತಾರೆ. ನಂಬಿಕೆ ದ್ರೋಹ ಮಾಡುವ ಸಾಧ್ಯತೆಗಳಿವೆ. ಈ ಕಾರಣದಿಂದ ಪಹಣಿಯೊಂದಿಗೆ ಆಧಾರ ಕಾರ್ಡ್ ಜೋಡಣೆಗೆ ಹೆಚ್ಚಿನ ಆಸಕ್ತಿ ತೋರುತ್ತಿಲ್ಲ ಎಂಬ ಮಾತುಗಳು ಕೇಳಿ ಬರುತ್ತಿವೆ.

**ರಾಜ್ಯದಲ್ಲಿ ಒಟ್ಟು 4.09 ಕೋಟಿಗೂ ಹೆಚ್ಚು ಭೂ ಮಾಲೀಕರಿದ್ದು, ಇದರಲ್ಲಿ 2.13 ಕೋಟಿ ಭೂಮಾಲೀಕರ ಪಹಣಿಯೊಂದಿಗೆ ಆಧಾರೆ ಜೋಡಣೆಯಾಗಿದೆ. ರಾಜ್ಯದಲ್ಲಿ ಅತಿ ಕಡಿಮೆ ಪ್ರಮಾಣದಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ 81 ಸಾವಿರ ಆಧಾರ ಜೋಡಣೆಯಾಗಿದೆ.**

**ಜಿಲ್ಲೆವಾರು ವಿವರ: ಬೆಳಗಾವಿ-25.80 ಲಕ್ಷ, ಬಾಗಲಕೋಟೆ-8.24 ಲಕ್ಷ, ವಿಜಯಪುರ-7.95 ಲಕ್ಷ, ಕಲಬುರಗಿ-5.63 ಲಕ್ಷ, ಬೀದರ-3.67 ಲಕ್ಷ, ರಾಯಚೂರು-5.29 ಲಕ್ಷ, ಕೊಪ್ಪಳ-3.67 ಲಕ್ಷ, ಗದಗ-4.89 ಲಕ್ಷ, ಧಾರವಾಡ-4.89 ಲಕ್ಷ, ಉತ್ತರ ಕನ್ನಡ- 11.51 ಲಕ್ಷ, ಹಾವೇರಿ-6.96 ಲಕ್ಷ, ಬಳ್ಳಾರಿ-3.46 ಲಕ್ಷ, ಚಿತ್ರದುರ್ಗ-6.34 ಲಕ್ಷ, ದಾವಣಗೆರೆ-60.69 ಲಕ್ಷ, ಶಿವಮೊಗ್ಗ-4.78 ಲಕ್ಷ, ಉಡುಪಿ- 11.18 ಲಕ್ಷ, ಚಿಕ್ಕಮಗಳೂರು- 5.36 ಲಕ್ಷ, ತುಮಕೂರ-14.61 ಲಕ್ಷ, ಕೋಲಾರ-5.61 ಲಕ್ಷ, ಬೆಂಗಳೂರು ನಗರ-81 ಸಾವಿರ, ಬೆಂಗಳೂರು ಗ್ರಾಮಾಂತರ-2.96 ಲಕ್ಷ, ಮಂಡ್ಯ-12.83 ಲಕ್ಷ, ಹಾಸನ-10.76 ಲಕ್ಷ, ದಕ್ಷಿಣ ಕನ್ನಡ-7.75 ಲಕ್ಷ, ಕೊಡಗು-3.59 ಲಕ್ಷ, ಮೈಸೂರು-8,70 ಲಕ್ಷ, ಚಾಮರಾಜಪೇಟೆ-3.08 ಲಕ್ಷ, ಚಿಕ್ಕಬಳ್ಳಾಪುರ-4.55 ಲಕ್ಷ, ರಾಮನಗರ-4,63 ಲಕ್ಷ, ಯಾದಗಿರಿ-3.92 ಲಕ್ಷ, ವಿಜಯನಗರ-3.63 ಲಕ್ಷ ಪಹಣಿಗಳಿಗೆ ಆಧಾರ ಜೋಡಣೆಯಾಗಿವೆ.**

**ಸರ್ಕಾರದ ಆದೇಶದಂತೆ ಈಗಾಗಲೇ ರೈತರ ಪಹಣಿಯೊಂದಿಗೆ ಆಧಾರ ಜೋಡಣೆ ಕಾರ್ಯವೂ ಪ್ರಗತಿಯಲ್ಲಿದೆ. ಕೆಲ ಭೂ ಮಾಲೀಕರು ಪಹಣಿಯಲ್ಲಿ ಹೆಸರು ಇದ್ದರೆ, ಕೆಲವರು ಬೇರೆಡೆ ಇರುತ್ತಾರೆ. ಅಂಥವರನ್ನು ಸಂಪರ್ಕಿಸಿ ಜೋಡಣೆ ಕಾರ್ಯವನ್ನು ನಡೆಸಲಾಗುತ್ತಿದೆ. ಭೂ ಮಾಲೀಕರು ಪಹಣಿಯೊಂದಿಗೆ ಆಧಾರ ಜೋಡಣೆಗೆ ಕಾರ್ಯಕ್ಕೆ ಹೆಚ್ಚಿನ ಸಹಕಾರ ನೀಡುವುದರಿಂದ ಬೇಗ ಪೂರ್ಣಗೊಳಿಸಲು ಸಾಧ್ಯವಾಗುತ್ತದೆ.**

**- ಸುರೇಶ್ ಶರ್ಮಾ, ತಹಸೀಲ್ದಾರರು, ರಾಯಚೂರು.**



ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸೋಮವಾರ ಮಹಿಳಾ ಹಕ್ಕುಗಳ ಜಾಗೃತಿ ಕಾರ್ಯಕ್ರಮದಲ್ಲಿ ವಿವಿಧ ಸಾಮಾಜಿಕ ಕಾರ್ಯಕರ್ತರು ಭಾಗವಹಿಸಿದ್ದರು.

### ಜಿಲ್ಲಾ ಮಟ್ಟದ ಅಣಕು ಯುವ ಸಂಸತ್ ಸ್ಪರ್ಧೆ

# ಮಕ್ಕಳಲ್ಲಿ ನಾಯಕತ್ವ ಗುಣ ಬೆಳೆಸಲು ಸ್ಪರ್ಧೆ ಸಹಕಾರಿ

**ರಾಯಚೂರು, ಸೆ. 23 :** ಪ್ರೌಢಶಾಲಾ ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ ಬೆಳೆಸಲು, ರಾಜ್ಯದ, ರಾಷ್ಟ್ರದ ವಿಷಯಗಳನ್ನು ಅರಿಯಲು, ಆಡಳಿತ ವ್ಯವಸ್ಥೆ ಕುರಿತು ಮತ್ತು ಸರ್ಕಾರದ ವಿವಿಧ ಯೋಜನೆಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಅಣಕು ಸಂಸತ್‌ನಂಥ ಕಾರ್ಯಕ್ರಮ ಬಹಳ ಸಹಕಾರಿ ಎಂದು ಶಿಕ್ಷಣ ಇಲಾಖೆಯ ನೋಡಲ್ ಅಧಿಕಾರಿ ಬಾಬು ತಿಳಿಸಿದರು.




ಜಿಲ್ಲಾಡಳಿತ, ಜಿಪಂ, ಶಾಲಾ ಶಿಕ್ಷಣ ಇಲಾಖೆ ರಾಯಚೂರು, ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ ಸಹಯೋಗದಲ್ಲಿ ಜಿಪಂನ ಜಲ ನಿರ್ಮಲ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾಮಟ್ಟದ ಅಣಕು ಯುವ ಸಂಸತ್ ಸ್ಪರ್ಧೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಇಂಥ ಕಾರ್ಯಕ್ರಮದಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ ಮತ್ತು ಭಾಷಣ ಮಾಡುವ ಧೈರ್ಯ ಬೆಳೆಯುತ್ತದೆ ಎಂದರು.

ನಿರ್ಣಾಯಕರಾಗಿ ಭಾಗವಹಿಸಿದ್ದ ಸರ್ಕಾರಿ ಪದವಿ ಕಾಲೇಜಿನ ಉಪನ್ಯಾಸಕರಾದ ಡಾ. ಸಂತೋಷ್ ಕುಮಾರ್, ಡಾ. ದೇವರೆಡ್ಡಿ, ಡಾ.ಶಿವರಾಜ್ ಮಾತನಾಡಿದ ಅವರು, ಆಡಳಿತ ಪಕ್ಷ ಮತ್ತು ವಿರೋಧ ಪಕ್ಷದ ಸದಸ್ಯರು ಮಾತನಾಡುವ ಶೈಲಿ, ಮುಖ್ಯಮಂತ್ರಿಗಳ ಜವಾಬ್ದಾರಿ, ಸಭಾ ನಾಯಕರ ಜವಾಬ್ದಾರಿ, ಜೊತೆಗೆ ಭಾಗವಹಿಸಿದ ಸದಸ್ಯರು, ಪ್ರಶ್ನೆ ಕೇಳುವ ರೀತಿ ಮತ್ತು ಉತ್ತರ ಹೇಳುವ ರೀತಿ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಮತದಾರರ ಸಾಕ್ಷರತ ಕ್ಲಬ್‌ನ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ ಕಾರ್ಯಕ್ರಮ ಕುರಿತು ಮಾತನಾಡಿದ ಅವರು, ಯುವ ಸಂಸತ್ ಕಾರ್ಯಕ್ರಮದ ಆಯೋಜನೆ, ಹಿನ್ನೆಲೆ, ಕಾರ್ಯಕ್ರಮದಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಿಗೆ ಆಗುತ್ತಿರುವ ಲಾಭಗಳು ಕುರಿತು ಮಾಹಿತಿ ನೀಡಿದರು.

ಕಲಬುರಗಿ ವಿಭಾಗ ಪ್ರೌಢಶಾಲಾ ಶಿಕ್ಷಕರ ಸಂಘದ ಉಪಾಧ್ಯಕ್ಷ ಡಿ. ವೆಂಕಟೇಶ್ ಜಾಲಿಬೆಂಚಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಆಂಗ್ಲ ವಿಷಯ ಪರೀಕ್ಷಕಿ ಅನಿತಾ ರಾಮುಲು ಸೇರಿ ಅನೇಕರು ಪಾಲ್ಗೊಂಡಿದ್ದರು. ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಅಣಕು ಸಂಸತ್ತು ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳು ಜಿಲ್ಲಾಮಟ್ಟದ ಈ ಒಂದು ಅಣಕು ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ವಿವಿಧ ತಾಲೂಕಿನ ಸಮಾಜ ವಿಜ್ಞಾನ ಶಿಕ್ಷಕರು ಮತ್ತು ಶಿಕ್ಷಣ ಇಲಾಖೆಯ ಸಿಬ್ಬಂದಿಯವರು ಉಪಸ್ಥಿತರಿದ್ದರು. ಶಿಕ್ಷಕ ಮಲ್ಲಪ್ಪ ನಿರೂಪಿಸಿದರು.

# ಚಾರಿತ್ರ್ಯವಂತ ವಿದ್ಯಾರ್ಥಿಗಳ ರೂಪಿಸಿ: ಪಟ್ಟದ್ದೇವರು



**ಬೀದರ್, ಸೆ. 23 :** ಆದರ್ಶ ಜೀವನಕ್ಕಾಗಿ ವಿದ್ಯಾರ್ಥಿಗಳನ್ನ ಚಾರಿತ್ರ್ಯವಂತನ್ನಾಗಿ ನಿರ್ಮಾಣ ಮಾಡುವ ಹೊಣೆಗಾರಿಕೆ ಶಿಕ್ಷಕರ ಮೇಲಿದೆ ಎಂದು ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನುಡಿದರು.

ಇಲ್ಲಿಯ ಗುರುಕೃಪಾ ಕಲ್ಯಾಣ ಮಂಟಪದಲ್ಲಿ, ರೋಟರಿ ಕ್ಲಬ್ ಆಫ್ ಭಾಲ್ಕಿ ಫೋರ್ಟ್ ವತಿಯಿಂದ ಸರ್ವಪಲ್ಲಿ ರಾಧಾಕೃಷ್ಣನ ಅವರ ಜಯಂತಿ ಅಂಗವಾಗಿ ಹಮ್ಮಿಕೊಂಡ ಶಿಕ್ಷಕರ ದಿನಾಚರಣೆ ಸಮಾರಂಭದಲ್ಲಿ ಮಾತನಾಡಿದ ಅವರು, ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾಗಿದೆ. ವಿದ್ಯಾರ್ಥಿಗಳಲ್ಲಿ ಹೃದಯವಂತಿಕೆ ನಿರ್ಮಾಣ ಮಾಡುವ ಕಾರ್ಯ ಶಿಕ್ಷಕರದ್ದಾಗಿದೆ. ನಡೆ, ನುಡಿ, ಆಚಾರ, ವಿಚಾರಗಳನ್ನು ರೂಪಿಸುವಲ್ಲಿ ಶಿಕ್ಷಕರು ಮಹತ್ವದ ಪಾತ್ರ ನಿರ್ವಹಿಸುತ್ತಾರೆ. ಸಮಾಜದಲ್ಲಿ ಶಿಕ್ಷಕರಿಗಿರುವ ಗೌರವ ಮತ್ಯಾರಿಗೂ ಸಿಗುವುದಿಲ್ಲ. ತಂದೆ, ತಾಯಿಗೂ ಗೌರವಿಸದ ರಾಜನೂ ಕೂಡ ಶಿಕ್ಷಕರನ್ನು ಗೌರವಿಸಿದ ಪ್ರಸಂಗಗಳಿವೆ. ರೋಟರಿ ಕ್ಲಬ್‌ನವರು ನಿಸ್ವಾರ್ಥ ಭಾವನೆಯಿಂದ ಸೇವೆ ಸಲ್ಲಿಸಿ ಎಲ್ಲರ ಪ್ರೀತಿಗೆ ಪಾತ್ರರಾಗಿದ್ದಾರೆ ಎಂದರು.

ಡಿವೈಎಸ್‌ಪಿ ಶಿವಾನಂದ ಪವಾಡಶೆಟ್ಟಿ ಮಾತನಾಡಿದ ಅವರು, ಶಿಕ್ಷಕರ ಮಾರ್ಗದರ್ಶನದಡಿ ನಾವೆಲ್ಲರೂ ಉನ್ನತ ಹುದ್ದೆ ಅಲಂಕರಿಸಲು ಸಾಧ್ಯವಾಗಿದೆ. ಆದರೆ ಇಂದಿನ ದಿನಗಳಲ್ಲಿ ಶಿಕ್ಷಕರ ಮೇಲೆ ಇಲ್ಲಸಲ್ಲದ ಆರೋಪಗಳು ಕೇಳಿ ಬರುತ್ತಿರುವುದು ಖೇದಕರ ಸಂಗತಿಯಾಗಿದೆ. ಪೋಕ್ಸೋ ಕಾಯಿದೆ ಮೂಲಕ ಶಿಕ್ಷಕರ ಮೇಲೆ ಪ್ರಕರಣ ದಾಖಲಿಸುವಾಗ ನಮಗೆ ತುಂಬಾ ಬೇಸರವಾಗುತ್ತದೆ. ಕೆಲವು ಸಂದರ್ಭಗಳಲ್ಲಿ ವೈಯಕ್ತಿಕ ದ್ವೇಷಗಳ ಹಿನ್ನಲೆಯಲ್ಲಿ ಶಿಕ್ಷಕರ ಮೇಲೆ ಇಂತಹ ಪ್ರಕರಣಗಳು ದಾಖಲಿಸಲ್ಪಡುತ್ತವೆ. ಶಿಕ್ಷಕರಾದವರು ನಡೆ-ನುಡಿ ಒಂದಾಗಿಸಿಕೊಳ್ಳಬೇಕು ಎಂದರು.

**ಸನ್ಮಾನ :** ರೋಟರಿ ಕ್ಲಬ್ ಆಫ್ ಫೋರ್ಟ್ ವತಿಯಿಂದ ತಾಲ್ಲೂಕಿನ ಹಿರಿಯ ನಿವೃತ್ತ ಶಿಕ್ಷಕ ನಾಮದೇವರಾವ ಪವಾರ ಸೇರಿದಂತೆ ಹಾಲಿ ಉತ್ತಮ 100 ಶಿಕ್ಷಕರಿಗೆ ನೇಶನ್ ಬಿಲ್ಡರ್ ಅವಾರ್ಡ್ ಹಾಗೂ ಎಸ್‌ಎಸ್‌ಎಲ್‌ಸಿ ಟಾಪರ್ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ಮತ್ತು ನಗದು ಗೌರವ ಧನ ನೀಡಿ ಗೌರವಿಸಲಾಯಿತು.

ನ್ಯಾಯವಾದಿ ಸೌರಭ್ ನಾಯಕ್, ಸಂಜುಯ ನಾಯಕ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಇಸಿಓ ಸಹದೇವ ಗೌಡಗಾವೆ, ರೋಟರಿ ಕ್ಲಬ್ ಖಜಾಂಚಿ ಡಾ. ಸಜ್ಜಲ್ ಬಳತೆ, ಮಾಜಿ ಎಜಿಗಳಾದ ಡಾ.ಅಮೀತ ಅಷ್ಟೂರೆ, ಡಾ.ವಸಂತ ಸ್ವರೂಪ ರಾಣಿ ಬಳತೆ ಉಪಸ್ಥಿತರಿದ್ದರು.

# ಸ್ಟ್ಯಾನ್‌ಫೋರ್ಡ್ ಶ್ರೇಷ್ಠ ವಿಜ್ಞಾನಿಗಳ ಪಟ್ಟಿಯಲ್ಲಿ ಕಲಬುರಗಿ ವಿವಿ ಇಬ್ಬರು ಪ್ರಾಧ್ಯಾಪಕರಿಗೆ ಸ್ಥಾನ

**ಕಲಬುರಗಿ, ಸೆ. 23 :** ಅಮೆರಿಕ ಪ್ರತಿಷ್ಠಿತ ಸ್ಟ್ಯಾನ್ ಫೋರ್ಡ್ ವಿಶ್ವವಿದ್ಯಾನಿಲಯ ವಾರ್ಷಿಕವಾಗಿ ಪ್ರಕಟಿಸುವ ವಿಶ್ವದ ಅತ್ಯುತ್ತಮ ವಿಜ್ಞಾನಿಗಳ ಪಟ್ಟಿಯಲ್ಲಿ ಕಲಬುರಗಿ ವಿಶ್ವವಿದ್ಯಾನಿಲಯದ ಇಬ್ಬರು ಪ್ರಾಧ್ಯಾಪಕರು ಸತತ ಎರಡನೇ ಬಾರಿ ಸ್ಥಾನ ಪಡೆದಿದ್ದಾರೆ.



ವಿಶ್ವವಿದ್ಯಾನಿಲಯದ ಗಣಿತಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಪ್ರೊ.ಸಿ.ಸುಲೋಚನಾ ಮತ್ತು ಪ್ರೊ. ಜೆ. ಸಿ.ಉಮಾವತಿ ಅವರುಗಳು ಈ ಗೌರವಕ್ಕೆ ಭಾಜನರಾದ ಇಬ್ಬರು ಪ್ರಾಧ್ಯಾಪಕರಾಗಿದ್ದಾರೆ.

ಇವರು ವಿಶ್ವದರ್ಜೆಯ ಮಟ್ಟದಲ್ಲಿ ಕೈಗೊಂಡ ಸಂಶೋಧನಾ ಪ್ರಕಟನೆಗಳು ಹಾಗೂ ಗುಣಮಟ್ಟದ ಸಂಶೋಧನಾ ಲೇಖನಗಳನ್ನು ವೆಬ್ ಆಫ್ ಸೈನ್ಸ್, ಸ್ಕೋಪಸ್, ಗೂಗಲ್ ಸ್ಕಾಲರ್, ಎಚ್ ಇಂಡೆಕ್ಸ್, ಇಂಪ್ಯಾಕ್ಟ್ ಫ್ಯಾಕ್ಟರ್ ಹಾಗೂ ಸೈಟೇಶನ್ ಸೇರಿದಂತೆ ಹಲವಾರು ಸಂಯೋಜಿತ ಮಾನದಂಡಗಳನ್ನು ಆಧರಿಸಿ ವಿಶ್ವದ ಶೇ. 2ರಷ್ಟು ಅತ್ಯುತ್ತಮ ಸಂಶೋಧಕರನ್ನು ಗುರುತಿಸಿರುವ ಜಾಗತಿಕ ಮಟ್ಟದ ಎಲ್ಸಿವಿಯರ್ ಸಂಸ್ಥೆಯು ಸ್ಟ್ಯಾನ್ ಫೋರ್ಡ್ ವಿಶ್ವವಿದ್ಯಾನಿಲಯದ ಸಹಭಾಗಿತ್ವದಲ್ಲಿ ಸಮೀಕ್ಷೆ ನಡೆಸಿ ಜಾಗತಿಕ ವಿಜ್ಞಾನಿಗಳ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಿದೆ.

ಜಾಗತಿಕ ಮಟ್ಟದ ವಿಜ್ಞಾನಿಗಳ ಪಟ್ಟಿಯಲ್ಲಿ ಹೆಸರು ಪಡೆದಿರುವ ಇಬ್ಬರು ವಿಜ್ಞಾನಿಗಳ ಸಾಧನೆಗೆ ವಿವಿಯ ಕುಲಪತಿ ಪ್ರೊ. ದಯಾನಂದ ಅಗಸರ್, ಕುಲಸಚಿವ ಪ್ರೊ.ರಾಜನಾಳ್ಕರ್ ಲಕ್ಷ್ಮಣ, ಮೌಲ್ಯಮಾಪನ ಕುಲಸಚಿವೆ ಪ್ರೊ. ಮೇಧಾವಿನಿ ಕಟ್ಟಿ, ವಿತ್ತಾಧಿಕಾರಿ ಗಾಯತ್ರಿ ಹರ್ಷ ವ್ಯಕ್ತಪಡಿಸಿ, ಅಭಿನಂದನೆ ಸಲ್ಲಿಸಿದ್ದಾರೆ.

**ವಿದ್ಯಾರ್ಥಿಗಳ ಸಾಧನೆಗೆ ಪ್ರೇರಣೆ**

**ಜಾಗತಿಕ ಖ್ಯಾತ ವಿಜ್ಞಾನಿಗಳ ಪಟ್ಟಿಯಲ್ಲಿ ನಮ್ಮ ವಿಶ್ವವಿದ್ಯಾಲಯದ ಗಣಿತ ವಿಭಾಗದ ವಿಜ್ಞಾನಿಗಳಾದ ಪ್ರೊ.ಸಿ.ಸುಲೋಚನಾ ಹಾಗೂ ಪ್ರೊ. ಜೆ.ಸಿ.ಉಮಾವತಿ ಸ್ಥಾನ ಪಡೆದಿರುವುದು ಹೆಮ್ಮೆಯ ವಿಚಾರ. ವಿಶ್ವದರ್ಜೆ ಮಟ್ಟದಲ್ಲಿ ಕಲಬುರಗಿ ವಿಶ್ವವಿದ್ಯಾನಿಲಯ ಹೆಸರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿದಂತಾಗಿದೆ. ಈ ಇಬ್ಬರು ವಿಜ್ಞಾನಿಗಳ ಸಾಧನೆ ವಿದ್ಯಾರ್ಥಿಗಳ ಸಾಧನೆಗೆ ಪ್ರೇರಣೆಯಾಗಿದೆ.**

**- ಪ್ರೊ. ದಯಾನಂದ ಅಗಸರ, ಕುಲಪತಿ ಕಲಬುರಗಿ ವಿಶ್ವವಿದ್ಯಾನಿಲಯ.**

# ವಿಶ್ವಕರ್ಮ ಸಮಾಜ ವಿಶ್ವಕ್ಕೆ ನೀಡಿದ ಕೊಡುಗೆ ಅಪಾರ

**ಬೀದರ್, ಸೆ. 23 :** ವಿಶ್ವಕರ್ಮ ಸಮಾಜವು ವಿಶ್ವಕ್ಕೆ ಅಪಾರ ಕೊಡುಗೆ ನೀಡಿದೆ. ವಿಶ್ವದ ಹಲವು ಕಡೆ ಗುಡಿಗುಂಡಾರಗಳಲ್ಲಿ ಶಿಲ್ಪಕಲೆ, ಕಲಾಕೃತಿ ಹಾಗೂ ಹಲವು ದೇವರ ಮೂರ್ತಿಗಳ ತಮ್ಮ ಕಲೆಯಿಂದ ರಚನೆ ಮಾಡಿದವರು ವಿಶ್ವಕರ್ಮ ಸಮಾಜದವರಾಗಿದ್ದಾರೆ ಎಂದು ಹುಲಸೂರಿನ ಡಾ. ಶಿವಾನಂದ ಸ್ವಾಮೀಜಿ ನುಡಿದರು.



ಜಿಲ್ಲೆಯ ಹುಲಸೂರ ಶ್ರೀ ವೀರಭದ್ರೇಶ್ವರ ದೇವಾಸ್ಥಾನದ ಸಭಾ ಮಂಟಪದಲ್ಲಿ ಭಾನುವಾರ ಅಖಿಲ ಕರ್ನಾಟಕ ವಿಶ್ವಕರ್ಮ ಮಾಹಸಭಾ ಜಿಲ್ಲಾ ಘಟಕ ಹಾಗೂ ತಾಲ್ಲೂಕು ಘಟಕದಿಂದ ಜರುಗಿದ ವಿಶ್ವಕರ್ಮ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಶ್ರೀಗಳು ಮಾತನಾಡಿ, ವಿಶ್ವಕರ್ಮ ಸಮಾಜಕ್ಕೆ ಸರ್ಕಸ್ ಮಾಡುವ ಸ್ವಾಮೀಜಿಗಳು ಬೇಕಿಲ್ಲ ಕೆಲಸ ಮಾಡುವ ಸ್ವಾಮಿಗಳು ಬೇಕು. ಅದು ದೊಡ್ಡೇಂದ್ರ ಮಹಾಸ್ವಾಮಿಗಳು ರೂಪದಲ್ಲಿ ತಮ್ಮ ಸಮಾಜಕ್ಕೆ ಸಿಕ್ಕಿದ್ದಾರೆ ಎಂದರು.

ದೊಡ್ಡೇಂದ್ರ ಮಹಾಸ್ವಾಮಿಗಳು ಮಾತನಾಡಿ, ವಿಶ್ವಕರ್ಮ ಸಮಾಜ ರೈತರಿಗಾಗಿ ಹಾಗೂ ಹಲವು ಗುಡಿ ಗುಂಡಾರಗಳಾದ ಬೇಲೂರ, ಹಳೇಬಿಡು ಸೇರಿದಂತೆ ಅಜಂತಾ, ಎಲ್ಲೋರಾ, ಐಹೊಳೆ ಪಟ್ಟದಕಲ್ಲು ಗುಹೆಗಳಲ್ಲಿ ತಮ್ಮ ಕಾಯಕದ ಮೂಲಕ ತಮ್ಮ ಏಳಿಗೆ ನೀಡಿದ್ದಾರೆ. ಈ ಜಾತಿ ಕೀಳು, ಆ ಜಾತಿ ಮೇಲು ಅಂತ ಅನ್ನದೆ, ಎಲ್ಲಾ ಸಮಾಜದವರು ನಮ್ಮವರೆ ಎನ್ನುವರು ವಿಶ್ವಕರ್ಮ ಸಮಾಜದವರಾಗಿದ್ದಾರೆ. ಅಲ್ಲದೆ ಸಾಮಾಜಿಕವಾಗಿ, ರಾಜಕೀಯವಾಗಿ ಹಾಗೂ ಶೈಕ್ಷಣಿಕವಾಗಿ, ಆರ್ಥಿಕವಾಗಿ ವಿಶ್ವಕರ್ಮ ಸಮಾಜಕ್ಕೆ ಬೇಕಾಗುವ ಸವಲತ್ತುಗಳು ನೀಡುವ ಕೆಲಸ ನಮ್ಮ ಸಮಾಜದ ಮುಖಂಡರಾದ ಕೆ.ಪಿ.ನಂಜುಂಡಿ ಅವರು ನೀಡಿದ್ದಾರೆ ಎಂದರು.

ಲತಾ ಹಾರಕೂಡೆ, ಮಲ್ಲಿಕಾರ್ಜುನ ಧಬಾಲೆ, ಆಕಾಶ ಖಂಡಾಳೆ, ಲತಾ ಹಾರಕುಡೆ, ಸುಧೀರ ಕಾಡಾದಿ, ಗೋವಿಂದರಾವ ಸೋಮವಂಶಿ, ನಾಗರಾಜ ಹಾವಣ್ಣಾ, ಅಶೋಕ ಪೋದ್ದಾರ, ದತ್ತಾತ್ರಿ ವಿಶ್ವಕರ್ಮ ಹಿಪ್ಪಳಗಾಂವ, ಪ್ರಶಾಂತ ವಿಶ್ವಕರ್ಮ, ಸುಲೋಚನಾ ವಿಶ್ವಕರ್ಮ, ಸುದರ್ಶನ ವಿಶ್ವಕರ್ಮ ಸೇರಿದಂತೆ ಮತ್ತಿತರರು ಮಾತನಾಡಿದರು. ವಾಸು ನವೋದಯ ಆಕಾಡೆಮಿ ಮಕ್ಕಳಿಂದ ನಡೆದ ನೃತ್ಯ ನೋಡುಗರ ಗಮನ ಸೆಳೆಯಿತು. ಗ್ರಾಪಂ ಉಪಾಧ್ಯಕ್ಷೆ ಸರಸ್ವತಿ ಬಾಲಕುಂದೆ, ವಿಶ್ವಕರ್ಮ ಸಮಾಜದ ಹಿರಿಯ ಮುಖಂಡ ವಿದ್ಯಾವಾನ ವಿಶ್ವಕರ್ಮ, ರಾಜೇಂದ್ರ ವಿಶ್ವಕರ್ಮ, ಜೈಪ್ರಕಾಶ ಪೋದ್ದಾರ, ಸೋಮನಾಥ ಪಂಚಾಳ, ಕಾಶಿನಾಥ ಪಾರಶೆಟ್ಟಿ, ಚಂದ್ರಕಾಂತ ದೇಟ್ನೆ, ಬಂಡುರಾವ ಪಾಟೀಲ್, ರಾಜಕುಮಾರ ಹೊನ್ನಾಡೆ, ಶಿವರಾಜ ಖಪಲೆ, ಧರ್ಮೇಂದ್ರ ಭೋಸಲೆ, ಪ್ರವೀಣ ಸೂರ್ಯವಂಶಿ, ಧನ್ನಾಜಿ ಸೂರ್ಯವಂಶಿ, ಅಖಿಲ ಕರ್ನಾಟಕ ವಿಶ್ವಕರ್ಮ ಸಮಾಜದ ಹುಲಸೂರ ತಾಲ್ಲೂಕು ಘಟಕದ ಪದಾಧಿಕಾರಿಗಳಾದ ಸಂತೋಷ ವಿಶ್ವಕರ್ಮ, ವಿರೇಶ, ಡಾ.ಕೇದಾರನಾಥ ವಿಶ್ವಕರ್ಮ, ರೂಪೇಶ ವಿಶ್ವಕರ್ಮ, ಶಿವಕುಮಾರ ವಿಶ್ವಕರ್ಮ, ಎಂ.ಬಿ.ಪಂಚಾಳ, ಪ್ರಶಾಂತ ವಿಶ್ವಕರ್ಮ, ಚಂದ್ರಶೇಖರ ವಿಶ್ವಕರ್ಮ ಸೇರಿದಂತೆ ವಿಶ್ವಕರ್ಮ ಸಮಾಜದ ಮುಖಂಡರು ಪಾಲ್ಗೊಂಡಿದ್ದರು. ಎಂ.ಬಿ.ಪಂಚಾಳ ಸ್ವಾಗತಿಸಿದರು. ರೂಪೇಶ ಪಂಚಾಳ ನಿರೂಪಿಸಿದರು. ವಿರೇಶ ಪಂಚಾಳ ವಂದಿಸಿದರು.

# 30 ರಂದು ಕರ್ನಾಟಕ ಸಂಭ್ರಮ-50 ಕಾರ್ಯಕ್ರಮ ಯಶಸ್ವಿಗೊಳಿಸಿ

**ವಿಜಯಪುರ, ಸೆ. 23 :** ಕರ್ನಾಟಕ ಸಂಭ್ರಮ-50ರ ಕಾರ್ಯಕ್ರಮವನ್ನು ಅದ್ದೂರಿ ಆಚರಣೆಯೊಂದಿಗೆ ಅರ್ಥಪೂರ್ಣವಾಗಿ ಆಯೋಜಿಸಲಾಗುವುದು ಎಂದು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಸೋಮಣ್ಣ ಬೇವಿನಮರದ ಹೇಳಿದರು.



ಸೋಮವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಸಂಭ್ರಮ-50ರ ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಅಭಿಯಾನದ ಅಂಗವಾಗಿ ಹೊರನಾಡಿನಲ್ಲಿ ಆಯೋಜಿಸುತ್ತಿರುವ ಕರ್ನಾಟಕ ಸಂಭ್ರಮ-50ರ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಗೆ ಹೊಂದಿಕೊಂಡಿರುವ ಮಹಾರಾಷ್ಟ್ರದ ಸಾಂಗ್ಲಿ ಜಿಲ್ಲೆಯ ಜತ್ತ ತಾಲೂಕಿನ ಗುಡ್ಡಾಪುರ ಶ್ರೀ ದಾನಮ್ಮದೇವಿ ದೇವಸ್ಥಾನದ ಆವರಣದಲ್ಲಿ ಸೆಪ್ಟೆಂಬರ್ 30ರಂದು ಮುಖ್ಯಮಂತ್ರಿಗಳು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಕರ್ನಾಟಕ ಗಡಿನಾಡ ಹಿರಿಯ ಚೇತನಗಳಾದ ಪೂಜ್ಯ ಶ್ರೀ ಡಾ. ಚನ್ನಬಸವ ಪಟ್ಟದೇವರು, ಡಾ.ಜಯದೇವಿ ತಾಯಿ ಲಿಗಾಡೆ ಹಾಗೂ ನಾಡೋಜ ಡಾ. ಕಯ್ಯಾರ ಕಿಞ್ಞಣ್ಣ ರೈ ಅವರ ಹೆಸರಿನಲ್ಲಿ ಸ್ಥಾಪಿಸಲಾದ ಗಡಿನಾಡ ಚೇತನ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಈ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಹಾಗೂ ವಿಜೃಂಭಣೆಯಿಂದ ಆಯೋಜಿಸಲು ಈಗಾಗಲೇ ಸಭೆ ನಡೆಸಿ ಎಲ್ಲ ರೀತಿಯ ಸಹಾಯ ಸಹಕಾರ ಕೋರಲಾಗಿದೆ. ಮಹಾರಾಷ್ಟ್ರದ ಸಾಂಗ್ಲಿ ಜಿಲ್ಲೆಯಲ್ಲಿ ಜತ್ತ ತಾಲೂಕಿನ ಗುಡ್ಡಾಪೂರದ ಶ್ರೀದಾನಮ್ಮದೇವಿ ದೇವಸ್ಥಾನದಲ್ಲಿ ಇರುವುದರಿಂದ ಸಾಂಗ್ಲಿಯ ಜಿಲ್ಲಾಡಳಿದ ಸಹಕಾರ ಕೋರಲಾಗಿದೆ ಎಂದು ಅವರು ಹೇಳಿದರು.

ಎಲ್ಲರ ಸಹಕಾರದೊಂದಿಗೆ ಅದ್ದೂರಿಯಾಗಿ ಸಂಭ್ರಮದಿಂದ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದ್ದು, ಈ ಸಂದರ್ಭದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಕಾರ್ಯಕ್ರಮದಲ್ಲಿ ಸ್ವಾಗತ, ಮೆರವಣಿಗೆ, ವೇದಿಕೆ ನಿರ್ವಹಣೆ ಮತ್ತು ನಿರ್ಮಾಣ, ಸಾಂಸ್ಕೃತಿಕ ಕಾರ್ಯಕ್ರಮ, ಸಾರಿಗೆ, ವಸತಿ, ಪ್ರಚಾರ, ಆರೋಗ್ಯ, ಸ್ವಚ್ಚತಾ, ಭದ್ರತೆ ಹಾಗೂ ಊಟೋಪಚಾರ ಸಮಿತಿಗಳನ್ನು ರಚಿಸಲಾಗಿದೆ. ಸಮಿತಿಗಳು ತಮಗೆ ವಹಿಸಲಾದ ಜವಾಬ್ದಾರಿಗಳನ್ನು ಅತ್ಯಂತ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಿದರು.

ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಲಿರುವುದರಿಂದ, ಸುಸಜ್ಜಿತ ಶಾಮಿಯಾನ, ಕುಡಿಯುವ ನೀರಿನ ವ್ಯವಸ್ಥೆಗೆ ಕ್ರಮವಹಿಸಲಾಗುತ್ತಿದೆ. ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸುವ ನಿಟ್ಟಿನಲ್ಲಿ ಎಲ್ಲರೂ ಸಹಕರಿಸುವಂತೆ ಅವರು ತಿಳಿಸಿದರು.

ಶಾಸಕರಾದ ವಿಠ್ಠಲ ಕಟಕದೊಂಡ ಅವರು ಮಾತನಾಡಿ, ಕಾರ್ಯಕ್ರಮದ ಯಶಸ್ಸಿಗೆ ಎಲ್ಲಾ ಕನ್ನಡಪರ ಸಂಘ-ಸಂಸ್ಥೆಗಳು, ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಟಿ.ಭೂಬಾಲನ್ ಮಾತನಾಡಿ, ಕಾರ್ಯಕ್ರಮಕ್ಕೆ ಜಿಲ್ಲಾಡಳಿತ ಎಲ್ಲ ರೀತಿಯ ಸಹಾಯ ಸಹಕಾರ ನೀಡುವುದಾಗಿ ತಿಳಿಸಿದರು.

ಸಭೆಯಲ್ಲಿ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾದ ಪ್ರಕಾಶ ಮತ್ತಿಹಳ್ಳಿ, ಸದಸ್ಯರಾದ ಡಾ.ಎಮ್. ಎಸ್ ಮಧಬಾವಿ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ಅಶೋಕ ಚಲವಾದಿ, ಬೆಳಗಾವಿ ವಿಭಾಗದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಕೆ.ಎಚ್. ಚನ್ನೂರ ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ರಾಜಶೇಖರ ಡಂಬಳ, ನಗರಾಭಿವೃದ್ಧಿ ಇಲಾಖೆಯ ಯೋಜನಾ ನಿರ್ದೇಶಕರಾದ ಬದ್ರುದ್ದಿನ್ ಸೌದಾಗರ್, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ರಾಮನಗೌಡ ಹಟ್ಟಿ, ಆಹಾರ ಇಲಾಖೆಯ ಉಪ ನಿರ್ದೇಶಕ ವಿನಯಕುಮಾರ ಪಾಟೀಲ, ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಭಜಂತ್ರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಸಂತೋಷ ಬೋವಿ ಸೇರಿದಂತೆ ವಿವಿಧ ತಾಲೂಕಿನ ತಹಶೀಲ್ದಾರರು, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಪೌರಕಾರ್ಮಿಕರ ಸೇವೆ ಅನನ್ಯ ಶಾಸಕ ವಿಠಲ ಕಟಕದೊಂಡ

**ವಿಜಯಪುರ, ಸೆ. 23 :** ನಗರದ ಸ್ವಚ್ಚತೆ, ನೈರ್ಮಲ್ಯ, ಆರೋಗ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಸೇವೆ ಅನನ್ಯವಾಗಿದೆ ಎಂದು ನಾಗಠಾಣದ ಶಾಸಕರಾದ ವಿಠ್ಠಲ ಕಟಕದೊಂಡ ಹೇಳಿದರು.

ಅವರು ಸೋಮವಾರ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ, ಜಿಲ್ಲಾಡಳಿತ ಹಾಗೂ ಮಹಾನಗರ ಪಾಲಿಕೆ ವತಿಯಿಂದ ನಡೆದ ಪೌರಕಾರ್ಮಿಕರ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪೌರ ಕಾರ್ಮಿಕರ ಕಲ್ಯಾಣಕ್ಕಾಗಿ ಸರಕಾರ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದು, ಈ ಯೋಜನೆಗಳ ಸದುಪಯೋಗ ಪಡೆದುಕೊಂಡು ಉತ್ತಮ ಬದುಕು ರೂಪಿಸಿಕೊಳ್ಳುವಂತೆ ಹಾಗೂ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣಕ್ಕೆ ಒತ್ತು ನೀಡಿ ಉನ್ನತ ಶಿಕ್ಷಣ ಒದಗಿಸುವುದರ ಮೂಲಕ ಅವರ ಬದುಕು ಮತ್ತು ಭವಿಷ್ಯವನ್ನು ಅತ್ಯುತ್ತಮವಾಗಿ ರೂಪಿಸಬೇಕು ಎಂದು ಹೇಳಿದರು.

ಮಹಾನಗರ ಪಾಲಿಕೆ ಉಪಮಹಾಪೌರರಾದ ದಿನೇಶ ಹಳ್ಳಿ ಮಾತನಾಡಿ, ಪೌರಕಾರ್ಮಿಕರು ತಮ್ಮ ಕರ್ತವ್ಯದ ಜೊತೆಗೆ ಸುರಕ್ಷಾ ಪರಿಕರಗಳನ್ನು ಉಪಯೋಗಿಸಿ ಸ್ವಯಂ ಜಾಗ್ರತೆಯಿಂದ ಕಾರ್ಯನಿರ್ವಹಿಸುವ ಮೂಲಕ ಆರೋಗ್ಯ ಕಾಪಾಡಿಕೊಳ್ಳುವಂತೆ ಹೇಳಿದರು.

ಮಹಾನಗರ ಪಾಲಿಕೆ ಆಯುಕ್ತರಾದ ವಿಜಯಕುಮಾರ ಮೆಕ್ಕಳಕಿ ಪ್ರಾಸ್ತಾವಿಕವಾಗಿ ಮಾತನಾಡಿ, ಪೌರ ಕಾರ್ಮಿಕರ ಕುಟುಂಬದ ಶ್ರೇಯೋಭಿವೃದ್ಧಿಗಾಗಿ ಹಲವಾರು ಯೋಜನೆಗಳಿದ್ದು, ಈಗಾಗಲೇ ಪಾಲಿಕೆ ವತಿಯಿಂದ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಟ್ಯಾಬ್‌ಗಳನ್ನು ವಿತರಿಸಲಾಗಿದೆ. ಆರೋಗ್ಯ ದೃಷ್ಟಿಯಿಂದ ಹಾಗೂ ಮಕ್ಕಳ ಶೈಕ್ಷಣಿಕ ಉನ್ನತಿಗಾಗಿ ಈಗಾಗಲೇ ಮಾಹಿತಿ ಕಾರ್ಯಗಾರ ಹಮ್ಮಿಕೊಂಡಿದ್ದು, ಮಕ್ಕಳ ಉನ್ನತ ವ್ಯಾಸಂಗಕ್ಕಾಗಿ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು. ಮನೋವೈದ್ಯರಾದ ಡಾ.ಮಂಜುನಾಥ ಮಸಳಿ ಉಪನ್ಯಾಸ ನೀಡಿದರು. ಪೌರಕಾರ್ಮಿಕರಿಗಾಗಿ ಆಯೋಜಿಸಲಾದ ವಿವಿಧ ಕ್ರೀಡಾಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

# ಭಾರತದ ಬೆಳವಣಿಗೆಯ ಹಾದಿಯಲ್ಲಿ ಭಾಗಿಯಾಗಿ ಕಂಪನಿಗಳಿಗೆ ಪ್ರಧಾನಿ ಮೋದಿ ಒತ್ತಾಯ



**ನ್ಯೂಯಾರ್ಕ್, ಸೆ.23:** ಭಾರತವು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಿ ಬೆಳೆಯಲು ಎಲ್ಲ ಪ್ರಯತ್ನಗಳನ್ನು ಮಾಡುತ್ತಿದ್ದು, ಈ ಬೆಳವಣಿಗೆಯ ಹಾದಿಯಲ್ಲಿ ನೀವೂ ಭಾಗಿಯಾಗಿ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕದ ತಂತ್ರಜ್ಞಾನ ಕ್ಷೇತ್ರದ ಪ್ರಮುಖ ಕಂಪನಿಗಳನ್ನು ಒತ್ತಾಯಿಸಿದರು. ಅಮೆರಿಕದ ಕಂಪನಿಗಳ ಸಿಇಒಗಳ ಜೊತೆ ನಡೆದ ದುಂಡುಮೇಜಿನ ಸಭೆಯಲ್ಲಿ ಪಾಲ್ಗೊಂಡ ಅವರು, ಭಾರತದ ಆರ್ಥಿಕ ಬೆಳವಣಿಗೆಯು ಮೂಡಿಸಿರುವ ನಿರೀಕ್ಷೆಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿನ ಸಹಭಾಗಿತ್ವವನ್ನು ಉತ್ತೇಜಿಸುವ ಉಪಕ್ರಮಗಳ ಬಗ್ಗೆ ಚರ್ಚಿಸಿದರು. ಭಾರತವು ಈಗ ಅಮೆರಿಕ, ಚೀನಾ, ಜರ್ಮನಿ ಮತ್ತು ಜಪಾನ್ ದೇಶಗಳ ಬಳಿಕ ವಿಶ್ವದ ಐದನೇ ಅತಿದೊಡ್ಡ ಆರ್ಥಿಕತೆ ಎನಿಸಿಕೊಂಡಿದೆ. 'ನನ್ನ ಮೂರನೇ ಅವಧಿಯಲ್ಲಿ (2024–29) ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲು ಭಾರತವು ಎಲ್ಲ ಪ್ರಯತ್ನಗಳನ್ನು ಮಾಡಲಿದೆ' ಎಂದು ಹೇಳಿದರು.

'ಆರ್ಥಿಕ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತದ ಬೆಳವಣಿಯು ನಿಮಗೆ ಹಲವು ಅವಕಾಶಗಳನ್ನು ಕಲ್ಪಿಸಲಿದೆ. ಅಭಿವೃದ್ಧಿ ಹಾಗೂ ಉತ್ಪಾದನೆಯಲ್ಲಿ ಜಂಟಿಯಾಗಿ ಹೊಸ ಆವಿಷ್ಕಾರಗಳನ್ನು ಕೈಗೊಳ್ಳುವ ಮೂಲಕ ಭಾರತದ ಬೆಳವಣಿಗೆಯ ಲಾಭವನ್ನು ನೀವು ಪಡೆದುಕೊಳ್ಳಬೇಕು' ಎಂದರು.

ಬೌದ್ಧಿಕ ಆಸ್ತಿಯ ರಕ್ಷಣೆ ಮತ್ತು ತಂತ್ರಜ್ಞಾನದ ಆವಿಷ್ಕಾರವನ್ನು ಉತ್ತೇಜಿಸಲು ಭಾರತದ ಬದ್ಧತೆಯ ಬಗ್ಗೆ ವಿವಿಧ ಕಂಪನಿಗಳ ಸಿಇಒಗಳಿಗೆ ಭರವಸೆ ನೀಡಿದ ಮೋದಿ, ಭಾರತದಲ್ಲಿ ಸೆಮಿಕಂಡಕ್ಟರ್ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಆಗುತ್ತಿರುವ ಬದಲಾವಣೆಗಳ ಬಗ್ಗೆ ವಿವರಿಸಿದರು. ಭಾರತವನ್ನು 'ಸೆಮಿಕಂಡಕ್ಟರ್ ತಯಾರಿಕೆಯ ಜಾಗತಿಕ ಹಬ್' ಮಾಡಲು ತಮ್ಮ ಸರ್ಕಾರ ಬದ್ಧವಾಗಿದೆ ಎಂದು ಪ್ರತಿಪಾದಿಸಿದರು. ಮೆಸಾಚುಸೆಟ್ಸ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಸ್ಕೂಲ್ ಆಫ್ ಎಂಜಿನಿಯರಿಂಗ್ ಆಯೋಜಿಸಿದ್ದ ದುಂಡುಮೇಜಿನ ಸಭೆಯಲ್ಲಿ ಗೂಗಲ್ ಸಿಇಒ ಸುಂದರ್ ಪಿಚ್ಚೈ, ಅಡೋಬಿ ಸಿಇಒ ಶಂತನು ನಾರಾಯಣ್, ಅಕ್ಸೆಂಚರ್ ಸಿಇಒ ಜೂಲೀ ಸ್ವೀಟ್, ಐಬಿಎಂ ಸಿಇಒ ಅರವಿಂದ ಕೃಷ್ಣ ಮತ್ತು ಎನ್ವೀಡಿಯಾ ಸಿಇಒ ಜೆನ್ಸನ್ ಹುವಾಂಗ್ ಒಳಗೊಂಡಂತೆ ಪ್ರಮುಖ 15 ಕಂಪನಿಗಳ ಸಿಇಒಗಳು ಪಾಲ್ಗೊಂಡರು.

## ಎರಡು ಕಾನ್ಸುಲೇಟ್ ಆರಂಭಿಸಲು ನಿರ್ಧಾರ

ಅಮೆರಿಕದ ಬಾಸ್ಟನ್ ಮತ್ತು ಲಾಸ್ ಏಂಜಲೀಸ್ನಲ್ಲಿ ಭಾರತವು ಕಾನ್ಸುಲೇಟ್‌ಗಳನ್ನು ಆರಂಭಿಸಲಿದೆ ಎಂದು ಪ್ರಧಾನಿ ಮೋದಿ ಅವರು ಘೋಷಿಸಿದರು.

ಈ ಎರಡು ನಗರಗಳಲ್ಲಿ ನೆಲೆಸಿರುವ ಭಾರತೀಯ ಸಮುದಾಯದವರ ದೀರ್ಘಕಾಲದ ಬೇಡಿಕೆ ಇದರೊಂದಿಗೆ ಈಡೇರಲಿದೆ. ಶಿಯಾಟಲ್ ನಗರದಲ್ಲಿ ಹೊಸ ಕಾನ್ಸುಲೇಟ್ ತೆರೆಯುವ ಯೋಜನೆ ಇದೆ ಎಂದು ನಾನು ಕಳೆದ ವರ್ಷ ಘೋಷಿಸಿದ್ದೆ. ಅಲ್ಲಿ ಅದು ಈಗಾಗಲೇ ಕಾರ್ಯ ಆರಂಭಿಸಿದೆ. ಇನ್ನೂ ಎರಡು ಕಾನ್ಸುಲೇಟ್‌ಗಳನ್ನು ಆರಂಭಿಸುವ ನಿಟ್ಟಿನಲ್ಲಿ ಸಲಹೆ ಕೇಳಿದ್ದೆ. ನಿಮ್ಮ ಸಲಹೆಗಳನ್ನು ಪರಿಶೀಲಿಸಿದ ನಂತರ ಬಾಸ್ಟನ್ ಮತ್ತು ಲಾಸ್ ಏಂಜಲೀಸ್ನಲ್ಲಿ ಎರಡು ಹೊಸ ಕಾನ್ಸುಲೇಟ್‌ಗಳನ್ನು ತೆರೆಯಲು ನಿರ್ಧರಿಸಿದ್ದೇವೆ ಎಂಬುದನ್ನು ಘೋಷಿಸಲು ಸಂತಸವಾಗುತ್ತಿದೆ' ಎಂದು ನ್ಯೂಯಾರ್ಕ್‌ನಲ್ಲಿ ಭಾರತೀಯ ಸಮುದಾಯದ ಸದಸ್ಯರನ್ನು ಉದ್ದೇಶಿಸಿ ಮಾತನಾಡುತ್ತಾ ಅವರು ತಿಳಿಸಿದರು.ಸಿಯಾಟಲ್ ಅಲ್ಲದೆ ನ್ಯೂಯಾರ್ಕ್ ಅಟ್ಲಾಂಟಾ ಷಿಕಾಗೊ ಹ್ಯೂಸ್ಟನ್ ಮತ್ತು ಸ್ಯಾನ್ ಫ್ರಾನ್ಸಿಸ್ಕೊದಲ್ಲಿ ಭಾರತದ ಕಾನ್ಸುಲೇಟ್‌ಗಳು ಕಾರ್ಯಾಚರಿಸುತ್ತಿವೆ.

# ಪ್ಯಾಲೆಸ್ತೀನ್ ಅಧ್ಯಕ್ಷರ ಜೊತೆ ಮೋದಿ ಚರ್ಚೆ



**ನ್ಯೂಯಾರ್ಕ್, ಸೆ.23:** ಪ್ರಧಾನಿ ನರೇಂದ್ರ ಮೋದಿ ಅವರು ಭಾನುವಾರ ನ್ಯೂಯಾರ್ಕ್‌ನಲ್ಲಿ ಪ್ಯಾಲೆಸ್ತೀನ್ ಅಧ್ಯಕ್ಷ ಮಹಮೂದ್ ಅಬ್ಬಾಸ್ ಅವರನ್ನು ಭೇಟಿಯಾಗಿ ದ್ವಿಪಕ್ಷೀಯ ಸಭೆ ನಡೆಸಿದರು. ಗಾಜಾದಲ್ಲಿನ ಮಾನವೀಯ ಪರಿಸ್ಥಿತಿಯ ಬಗ್ಗೆ ಪ್ರಧಾನ ಮಂತ್ರಿಯವರು ಕಳವಳ ವ್ಯಕ್ತಪಡಿಸಿದರು. ಪ್ಯಾಲೆಸ್ತೀನಿಯನ್ ಜನರಿಗೆ ಭಾರತದ ಬೆಂಬಲ ಇರಲಿದೆ ಎಂದು ತಿಳಿಸಿದರು.

ಇಸ್ರೇಲ್–ಪ್ಯಾಲೆಸ್ತೀನ್ ಸಂಘರ್ಷ ಪರಿಹಾರಕ್ಕಾಗಿ ಭಾರತವು ದೀರ್ಘಕಾಲ ಪ್ರಯತ್ನಿಸಲಿದೆ. ಅ.7 ರಂದು ಇಸ್ರೇಲ್ ಮೇಲೆ ಹಮಾಸ್ ನಡೆಸಿದ ಭೀಕರ ಭಯೋತ್ಪಾದಕ ದಾಳಿಯನ್ನು ಖಂಡಿಸಿದ ಮೊದಲ ಜಾಗತಿಕ ನಾಯಕರಲ್ಲಿ ಪಿಎಂ ಮೋದಿ ಒಬ್ಬರು. ಆದರೆ, ಗಾಜಾದಲ್ಲಿ ಹದಗೆಡುತ್ತಿರುವ ಪರಿಸ್ಥಿತಿಯ ಬಗ್ಗೆ ಭಾರತ ಪದೇ ಪದೇ ಕಳವಳ ವ್ಯಕ್ತಪಡಿಸಿದೆ. ಭಾರತವು ತನ್ನ ಬದ್ಧತೆಯ ಭಾಗವಾಗಿ ಗಾಜಾದ ಜನರಿಗೆ ಮಾನವೀಯ ನೆರವನ್ನು ಕಳುಹಿಸಿತು.

ಜುಲೈನಲ್ಲಿ, ಭಾರತವು 2024–25ನೇ ವರ್ಷಕ್ಕೆ ಪ್ಯಾಲೆಸ್ತೀನ್ ನಿರಾಶ್ರಿತರಿಗಾಗಿ ಯುನೈಟೆಡ್ ನೇಷನ್ಸ್ ರಿಲೀಫ್ ಅಂಡ್ ವರ್ಕ್ಸ್ ಏಜೆನ್ಸಿ, UNRWA ಗೆ 2.5 ಮಿಲಿಯನ್ ಡಾಲರ್‌ಗಳ ಮೊದಲ ಕಂತನ್ನು ಬಿಡುಗಡೆ ಮಾಡಿತು. ಇದಕ್ಕೂ ಮುನ್ನ, ಪ್ರಧಾನಿ ಮೋದಿ ನೇಪಾಳಿ ಪ್ರಧಾನಿ ಕೆಪಿ ಶರ್ಮಾ ಒಲಿ ಮತ್ತು ಕುವೈತ್ ಕ್ರೌನ್ ಪ್ರಿನ್ಸ್ ಶೇಖ್ ಸಬಾಹ್ ಖಲೀದ್ ಅಲ್–ಹಮದ್ ಅಲ್–ಮುಬಾರಕ್ ಅಲ್–ಸಬಾಹ್ ಅವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಿದ್ದರು.



ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಭಾನುವಾರ ನ್ಯೂಯಾರ್ಕ್‌ನಲ್ಲಿ ಕುವೈತ್‌ನ ಯುವರಾಜ ಸಬಾಹ್ ಅಲ್–ಖಾಲಿದ್ ಅಲ್–ಸಬಾಹ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು.

# ಇಸ್ರೇಲ್ ದಾಳಿಗೆ 274 ಸಾವು: ಲೆಬನಾನ್ ಆರೋಗ್ಯ ಸಚಿವಾಲಯ



**ಬೈರೂತ್,ಸೆ.23:** ದಕ್ಷಿಣ ಲೆಬನಾನ್ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ 274 ಮಂದಿ ಮೃತಪಟ್ಟಿದ್ದಾರೆ ಎಂದು ಲೆಬನಾನ್‌ನ ಆರೋಗ್ಯ ಸಚಿವಾಲಯ ಸೋಮವಾರ ತಿಳಿಸಿದೆ.

'ಭಾನುವಾರ ಮತ್ತು ಸೋಮವಾರ ನಡೆದ ದಾಳಿಯಲ್ಲಿ ಸಾವಿಗೀಡಾದವರ ಸಂಖ್ಯೆ 274ಕ್ಕೆ ಏರಿಕೆಯಾಗಿದೆ. ಮೃತರಲ್ಲಿ 21 ಮಕ್ಕಳು ಮತ್ತು 39 ಮಹಿಳೆಯರೂ ಸೇರಿದ್ದಾರೆ. ಇಸ್ರೇಲ್ ಸೇನೆಯ ದಾಳಿಗೆ ಕಳೆದ ಒಂದು ವಾರದಲ್ಲಿ 5 ಸಾವಿರಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ' ಎಂದು ಆರೋಗ್ಯ ಸಚಿವ ಫಿರಾಸ್ ಅಬಿಯದ್ ಹೇಳಿದ್ದಾರೆ. ಇಸ್ರೇಲ್–ಹಮಾಸ್ ಯುದ್ಧ ಆರಂಭವಾದ ಬಳಿಕ, ಇಸ್ರೇಲ್ ಸೇನೆ ಹಿಜ್ಬುಲ್ಲಾ ಬಂಡುಕೋರರನ್ನು ಗುರಿಯಾಗಿಸಿ ಇಷ್ಟೊಂದು ದೊಡ್ಡ ಮಟ್ಟದಲ್ಲಿ ವೈಮಾನಿಕ ದಾಳಿ ನಡೆಸಿದ್ದು ಇದೇ ಮೊದಲು.

ಸೋಮವಾರದ ದಾಳಿಯೂ ಸೇರಿದಂತೆ ಹಿಜ್ಬುಲ್ಲಾ ಬಂಡುಕೋರರ 300ಕ್ಕೂ ಹೆಚ್ಚು ತಾಣಗಳನ್ನು ಗುರಿಯಾಗಿಸಿ ದಾಳಿ ನಡೆಸಲಾಗಿದೆ ಎಂದು ಇಸ್ರೇಲ್ ಹೇಳಿದೆ. 'ಶತ್ರುವಿನ ದಾಳಿಗೆ ಪ್ರತ್ಯುತ್ತರವಾಗಿ ಹೈಫಾದಲ್ಲಿರುವ ಸೇನಾ ನೆಲೆಗಳನ್ನು ಗುರಿಯಾಗಿಸಿ ರಾಕೆಟ್ ದಾಳಿ ನಡೆಸಿದ್ದೇವೆ' ಎಂದು ಹಿಜ್ಬುಲ್ಲಾ ಪ್ರಕಟಣೆ ತಿಳಿಸಿದೆ. 'ಹಿಜ್ಬುಲ್ಲಾ ಬಂಡುಕೋರರಿಗೆ ಸಂಬಂಧಿಸಿದ ಸ್ಥಳಗಳನ್ನು ಗುರಿಯಾಗಿಸಿ ಇನ್ನಷ್ಟು ನಿಖರ ದಾಳಿಗಳನ್ನು ನಡೆಸಲಿದ್ದೇವೆ. ಆದ್ದರಿಂದ ಆ ಪ್ರದೇಶಗಳಲ್ಲಿನ ಜನರು ತಕ್ಷಣದಲ್ಲೇ ತಮ್ಮ ಮನೆಗಳನ್ನು ತೊರೆಯಬೇಕು' ಎಂದು ಇಸ್ರೇಲ್ ಸೇನೆಯ ವಕ್ತಾರ ಅಡ್ಮಿರಲ್ ಜನರಲ್ ಡೇನಿಯಲ್ ಹಗರಿ ಎಚ್ಚರಿಸಿದ್ದಾರೆ.

'ದಕ್ಷಿಣ ಲೆಬನಾನ್ನ ಕೆಲವು ಪ್ರದೇಶಗಳಿಂದ ಸಾವಿರಾರು ಕುಟುಂಬಗಳು ಮನೆಗಳನ್ನು ತೊರೆದಿವೆ' ಎಂದು ಅಬಿಯದ್ ಹೇಳಿದ್ದಾರೆ. ಪೂರ್ವ ಲೆಬನಾನ್ನ ಬೆಕಾ ಕಣಿವೆ ಪ್ರದೇಶದ ಜನರಿಗೂ ಮನೆಗಳನ್ನು ತೊರೆಯುವಂತೆ ಇಸ್ರೇಲ್ ಸೇನೆ ಸೂಚಿಸಿದ್ದು, ತನ್ನ ದಾಳಿಯನ್ನು ಲೆಬನಾನ್ನ ಇತರ ಭಾಗಗಳಿಗೆ ವಿಸ್ತರಿಸುವ ಎಚ್ಚರಿಕೆ ಕೊಟ್ಟಿದೆ. ಪೂರ್ವ ಲೆಬನಾನ್ನ ಬಾಲ್ಬೆಕ್ ನಗರದಲ್ಲಿ ಸೋಮವಾರ ಸ್ಫೋಟದ ಸದ್ದು ಕೇಳಿಬಂದಿರುವುದಾಗಿ ಮೂಲಗಳು ಹೇಳಿವೆ. ಕಳೆದ ಮಂಗಳವಾರ ಮತ್ತು ಬುಧವಾರ ಲೆಬನಾನ್ನಾದ್ಯಂತ ನಡೆದ ಪೇಜರ್ ಸ್ಫೋಟದಲ್ಲಿ 39 ಮಂದಿ ಬಲಿಯಾಗಿ, 3 ಸಾವಿರಕ್ಕೂ ಅಧಿಕ ಮಂದಿ ಗಾಯಗೊಂಡಿದ್ದರು.

# ಮಧ್ಯಪ್ರಾಚ್ಯ ಸಂಘರ್ಷ ಉಲ್ಬಣಗೊಳ್ಳುವ ಅಪಾಯ: ವಿಶ್ವಸಂಸ್ಥೆ ಕಳವಳ



**ಜಿನೆವಾ, ಸೆ.23:** ಲೆಬನಾನ್ನಲ್ಲಿ ಇಸ್ರೇಲ್ ಮತ್ತು ಹಿಜ್ಬುಲ್ಲಾ ನಡುವಿನ ಸಂಘರ್ಷ ಮತ್ತು ಹಿಂಸಾಚಾರ ಉಲ್ಬಣಿಸಿರುವ ಬಗ್ಗೆ ವಿಶ್ವಸಂಸ್ಥೆ ಸೋಮವಾರ ತೀವ್ರ ಕಳವಳ ವ್ಯಕ್ತಪಡಿಸಿದ್ದು ಲೆಬನಾನ್‌ನಲ್ಲಿ ವರದಿಯಾಗಿರುವ ದಾಳಿ ಮತ್ತು ಹೇಳಿಕೆಗಳು ಮಧ್ಯಪ್ರಾಚ್ಯ ಸಂಘರ್ಷವನ್ನು ಮತ್ತೊಂದು ಹಂತಕ್ಕೆ ಕೊಂಡೊಯ್ಯುವ ಅಪಾಯವಿದೆ ಎಂದು ಎಚ್ಚರಿಕೆ ನೀಡಿದೆ.

'ಲೆಬನಾನ್‌ನಲ್ಲಿ ಹಿಂಸಾಚಾರ ಉಲ್ಬಣಿಸಿರುವ ಬಗ್ಗೆ ವಿಶ್ವಸಂಸ್ಥೆ ತೀವ್ರ ಕಳವಳಗೊಂಡಿದೆ. ಸಂವಹನ ಸಾಧನಗಳು, ಪೇಜರ್ ಗಳಲ್ಲಿ ನಡೆದ ದಾಳಿಗಳು, ಬಳಿಕ ರಾಕೆಟ್ ದಾಳಿ, ಎರಡೂ ಕಡೆಯವರ ನಡುವೆ ಗುಂಡಿನ ದಾಳಿಯ ವಿನಿಮಯ ಸಂಘರ್ಷ ಉಲ್ಬಣಿಸುವುದನ್ನು ಸ್ಪಷ್ಟವಾಗಿಸಿದೆ' ಎಂದು ವಿಶ್ವಸಂಸ್ಥೆ ಮಾನವ ಹಕ್ಕುಗಳ ಕಚೇರಿಯ ವಕ್ತಾರೆ ರವೀನಾ ಶಾಂದಾಸಾನಿಯನ್ನು ಉಲ್ಲೇಖಿಸಿ ಎಎಫ್ಪಿ ಸುದ್ದಿಸಂಸ್ಥೆ ಸೋಮವಾರ ವರದಿ ಮಾಡಿದೆ.

ಈ ಮಧ್ಯೆ, ಇಸ್ರೇಲ್ ರಕ್ಷಣಾ ಸಚಿವ ಯೋವ್ ಗ್ಯಾಲಂಟ್ ಅವರು ಸಂಘರ್ಷ ವ್ಯಾಪಕಗೊಳ್ಳುವ ಸಾಧ್ಯತೆಯ ಹಿನ್ನೆಲೆಯಲ್ಲಿ ಟೆಲ್‌ಅವೀವ್ನಲ್ಲಿ ಭದ್ರತಾ ಪಡೆಗಳ ಸನ್ನದ್ಧತೆಯ ಪರಿಶೀಲನೆ ನಡೆಸಿದರು ಎಂದು ಟೈಮ್ಸ್ ಆಫ್ ಇಸ್ರೇಲ್ ವರದಿ ಮಾಡಿದೆ.

ಆಂತರಿಕ ಭದ್ರತಾ ಪಡೆಯ ಆದೇಶಗಳಿಗೆ ಸಾರ್ವಜನಿಕರು ಶಿಸ್ತು ಮತ್ತು ಸಂಪೂರ್ಣ ವಿಧೇಯತೆಯನ್ನು ತೋರುವ ಸಮಯ ಇದಾಗಿದೆ ಎಂದು ಗ್ಯಾಲಂಟ್ ಹೇಳಿರುವುದಾಗಿ ವರದಿಯಾಗಿದೆ. ಹಿಜ್ಬುಲ್ಲಾ ನೆಲೆಗಳ ಮೇಲೆ ತೀವ್ರ ದಾಳಿ ನಡೆಸಲು ಮಿಲಿಟರಿ ಮುಖ್ಯಸ್ಥ ಲೆ|ಜ| ಹೆರ್ಝಿಯ್ ಹಲೆವಿ ಅನುಮತಿ ನೀಡುವ ವೀಡಿಯೋವನ್ನೂ ಐಡಿಎಫ್ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದೆ.

ಮಿಲಿಟರಿ ಮುಖ್ಯಸ್ಥರ ಆದೇಶದ ಬಳಿಕ ಇವತ್ತು ಶತ್ರುಗಳ 300ಕ್ಕೂ ಅಧಿಕ ನೆಲೆಗಳಿಗೆ ದಾಳಿ ನಡೆಸಲಾಗಿದೆ ಎಂದು ಐಡಿಎಫ್ ಹೇಳಿದೆ. ಲೆಬನಾನ್‌ನ ಸಿನಾಯಿ ಗ್ರಾಮದಲ್ಲಿ ಆಗಸದಲ್ಲಿ ಇಸ್ರೇಲ್‌ನ ಜೆಟ್ ವಿಮಾನಗಳು ಬಾಂಬ್ ದಾಳಿ ನಡೆಸುವ ವೀಡಿಯೊವನ್ನು ಸಾಮಾಜಿಕ ಮಾಧ್ಯಮಗಳು ಪ್ರಸಾರ ಮಾಡಿವೆ.

# ಇರಾನ್ ಕಲ್ಲಿದ್ದಲು ಗಣಿಯಲ್ಲಿ ಸ್ಫೋಟ ಸಾವಿನ ಸಂಖ್ಯೆ 38ಕ್ಕೆ ಏರಿಕೆ



**ಟೆಹರಾನ್, ಸೆ.23:** ಪೂರ್ವ ಇರಾನ್‌ನ ಕಲ್ಲಿದ್ದಲು ಗಣಿಯೊಂದರಲ್ಲಿ ಶನಿವಾರ ರಾತ್ರಿ ಸಂಭವಿಸಿದ ಸ್ಫೋಟದಲ್ಲಿ ಮೃತಪಟ್ಟಿರುವ ಮತ್ತಷ್ಟು ಮಂದಿ ಕಾರ್ಮಿಕರ ಶವಗಳನ್ನು ರಕ್ಷಣಾ ತಂಡದವರು ಸೋಮವಾರ ವಶಪಡಿಸಿಕೊಂಡಿದ್ದು, ಮೃತರ ಸಂಖ್ಯೆ 38ಕ್ಕೆ ಏರಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಟೆಹರಾನ್‌ನಿಂದ 540 ಕಿ.ಮೀ. ದೂರದಲ್ಲಿರುವ ತಬಾಸ್ ಕಲ್ಲಿದ್ದಲು ಗಣಿಯಲ್ಲಿ ಮಿಥೇನ್ ಅನಿಲ ಸೋರಿಕೆಯಿಂದ ಈ ಸ್ಫೋಟ ಸಂಭವಿಸಿದ್ದು, ಇನ್ನೂ 14 ಜನ ಗಣಿ ಕಾರ್ಮಿಕರು ನೆಲದಡಿ ಸಿಲುಕಿದ್ದಾರೆ ಎಂದು ಶಂಕಿಸಲಾಗಿದೆ.

# ಚುನಾವಣೆಯಲ್ಲಿ ಸೋತರೆ ಮತ್ತೆ ಸ್ಪರ್ಧಿಸಲ್ಲ: ಟ್ರಂಪ್




**ವಾಷಿಂಗ್ಟನ್, ಸೆ.23:** ಅಮೆರಿಕದ ಅಧ್ಯಕ್ಷೀಯ ಚುನಾವಣೆಯಲ್ಲಿ ಈ ಬಾರಿ ಸೋತರೆ, 2028ರ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಈ ಬಗ್ಗೆ ಪತ್ರಕರ್ತರೊಬ್ಬರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, 'ಇದು ಸಾಧ್ಯವಿಲ್ಲ ಅನಿಸುತ್ತಿದೆ' ಎಂದು ಹೇಳಿದ್ದಾರೆ. 2020ರ ಚುನಾವಣೆಯಲ್ಲಿ ಜೋ ಬೈಡನ್ ವಿರುದ್ಧ ಸೋತ ಬಳಿಕ, ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎಂದು ಟ್ರಂಪ್ ಆರೋಪಿಸಿದ್ದರು.

ಅದೇ ವಿಚಾರವನ್ನು ಚುನಾವಣಾ ಪ್ರಚಾರದಲ್ಲಿಯೂ ಬಳಸಿಕೊಂಡಿದ್ದರು. 81 ವರ್ಷದ ಜೋ ಬೈಡನ್ ಅವರನ್ನು ವಯಸ್ಸಿನ ಕಾರಣಕ್ಕೆ ಟ್ರಂಪ್ ಅವರು ನಿರಂತರವಾಗಿ ಟೀಕೆ ಮಾಡುತ್ತಿದ್ದರು. ಇದರಿಂದಾಗಿ ಬೈಡನ್ ಚುನಾವಣಾ ಕಣದಿಂದ ಹಿಂದೆ ಸರಿದಿದ್ದರು. 2028ರ ವೇಳೆಗೆ ಟ್ರಂಪ್ ಅವರಿಗೆ 82 ವರ್ಷ ಆಗಲಿದೆ.

# ಮೂರು ಮಾದರಿಯಗಳಲ್ಲೂ ಬೂಮ್ರಾ ಅತ್ಯುತ್ತಮ ಬೌಲರ್: ಸ್ಟೀವ್ ಸ್ಮಿತ್



**ನವದೆಹಲಿ,ಸೆ.23:** 'ಭಾರತ ತಂಡದ ಜಸ್ಪ್ರೀತ್ ಬೂಮ್ರಾ ಅವರು ಕ್ರಿಕೆಟ್‌ನ ಮೂರು ಮಾದರಿಗಳಲ್ಲೂ ಅತ್ಯುತ್ತಮ ವೇಗದ ಬೌಲರ್. ಅವರ ವಿರುದ್ಧ ಆಡುವುದು ಬ್ಯಾಟರ್‌ಗಳಿಗೆ ಯಾವಾಗಲೂ ಸವಾಲಿನ ಸಂಗತಿ' ಎಂದು ಆಸ್ಟ್ರೇಲಿಯಾ ತಂಡದ ಬ್ಯಾಟರ್ ಸ್ಟೀವ್ ಸ್ಮಿತ್ ಹೇಳಿದ್ದಾರೆ.

ಪ್ರಸ್ತುತ ಬಾಂಗ್ಲಾದೇಶ ವಿರುದ್ಧ ಟೆಸ್ಟ್ ಸರಣಿ ಆಡುತ್ತಿರುವ ಭಾರತ ತಂಡವು ವರ್ಷಾಂತ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಬಾರ್ಡರ್– ಗಾವಸ್ಕರ್ ಟ್ರೋಫಿಗೆ ಐದು ಪಂದ್ಯಗಳ ಟೆಸ್ಟ್ ಸರಣಿ ಆಡಲಿದೆ. ನ.22ರಿಂದ ಪರ್ತ್‌ನಲ್ಲಿ ಮೊದಲ ಟೆಸ್ಟ್ ಪಂದ್ಯ ನಡೆಯಲಿದೆ. ಆಸ್ಟ್ರೇಲಿಯಾ ವಿರುದ್ಧ ಕಳೆದ ಎರಡೂ ಸರಣಿಯನ್ನೂ ಭಾರತ ತಂಡ ಗೆದ್ದುಗೊಂಡಿದೆ.

ಸರಣಿಗೆ ಮುನ್ನ ಸ್ಮಿತ್ ಅವರು ಬೂಮ್ರಾ ಬಗ್ಗೆ ಆಡಿರುವ ಮೆಚ್ಚುಗೆಯ ಮಾತು ಮಹತ್ವ ಪಡೆದಿದೆ. 'ಬೂಮ್ರಾ ಒಬ್ಬ ಶ್ರೇಷ್ಠ ಬೌಲರ್. ಹೊಸ ಚೆಂಡು, ಸ್ವಲ್ಪ ಹಳೆಯ ಚೆಂಡು ಅಥವಾ ಹಳೆಯ ಚೆಂಡಿನಲ್ಲಿಯೂ ಬ್ಯಾಟ್ಸ್‌ಮನ್‌ಗಳಿಗೆ ಎಲ್ಲ ರೀತಿಯಲ್ಲೂ ಕಾಡುವ ಕೌಶಲ ಅವರಲ್ಲಿದೆ' ಎಂದಿದ್ದಾರೆ.

35 ವರ್ಷ ವಯಸ್ಸಿನ ಸ್ಮಿತ್, ಭಾರತ ವಿರುದ್ಧದ ಕಳೆದೆರಡು ಸರಣಿಗಳಲ್ಲಿ ಆಸ್ಟ್ರೇಲಿಯಾ ಪರ ಆರಂಭಿಕ ಬ್ಯಾಟರ್ ಆಗಿದ್ದರು. ಈ ಬಾರಿಯೂ ಅದೇ ಕ್ರಮಾಂಕದಲ್ಲಿ ಆಡುವ ನಿರೀಕ್ಷೆಯಿದೆ.

109 ಟೆಸ್ಟ್ ಪಂದ್ಯಗಳನ್ನು ಆಡಿರುವ ಅವರು ಒಟ್ಟು 9,685 ರನ್ ಗಳಿಸಿದ್ದು, ಮುಂದಿನ ಸರಣಿಯಲ್ಲಿ 10 ಸಾವಿರ ರನ್ ಮೈಲಿಗಲ್ಲು ದಾಟುವ ಅವಕಾಶವೂ ಇದೆ. 30 ವರ್ಷ ವಯಸ್ಸಿನ ಬೂಮ್ರಾ ಅವರು 2018ರ ಜನವರಿಯಲ್ಲಿ ಟೆಸ್ಟ್‌ಗೆ ಪದಾರ್ಪಣೆ ಮಾಡಿದ್ದು, ಈತನಕ ಒಟ್ಟು 37 ಪಂದ್ಯಗಳಲ್ಲಿ 20.51 ಸರಾಸರಿಯಲ್ಲಿ 164 ವಿಕೆಟ್‌ಗಳನ್ನು ಕಬಳಿಸಿದ್ದಾರೆ.

# ಸಿ.ಪುಟ್ಟಯ್ಯ ಕಪ್ ಫುಟ್ಬಾಲ್ ಟೂರ್ನಿ ಕೊಡಗು ಎಫ್‌ಸಿ ಶುಭಾರಂಭ



**ಬೆಂಗಳೂರು, ಸೆ.23:** ಲಾಲ್ತಾ ಕಿಮಾ ರಾಲ್ತೆ ಅವರ ಅಮೋಘ ಆಟದ ಬಲದಿಂದ ಕೊಡಗು ಎಫ್‌ಸಿ ತಂಡವು ಇಲ್ಲಿ ಸೋಮವಾರ ಆರಂಭವಾದ ಸಿ.ಪುಟ್ಟಯ್ಯ ಕಪ್ ಫುಟ್ಬಾಲ್ ಟೂರ್ನಿಯಲ್ಲಿ ಶುಭಾರಂಭ ಮಾಡಿತು.

ಬೆಂಗಳೂರು ಫುಟ್ಬಾಲ್ ಕ್ರೀಡಾಂಗಣದಲ್ಲಿ ನಡೆದ 'ಎ' ಗುಂಪಿನ ಪಂದ್ಯದಲ್ಲಿ ಕೊಡಗು ತಂಡವು 4–3 ಗೋಲುಗಳಿಂದ ಎಫ್ಸಿ ರಿಯಲ್ ಬೆಂಗಳೂರು ತಂಡವನ್ನು ಮಣಿಸಿತು. ಕೊಡಗು ಪರ ಲಾಲ್ತಾ ಕಿಮಾ (37ನೇ ಮತ್ತು 89ನೇ) ಎರಡು ಗೋಲು ಗಳಿಸಿದರೆ, ಆದಿತ್ಯ ಕುಮಾರ್ (26ನೇ ನಿಮಿಷ), ಲಾಲ್ ಕ್ರಾಸ್ಮಾವಿಯಾ (28ನೇ) ತಲಾ ಒಂದು ಬಾರಿ ಚೆಂಡನ್ನು ಗುರಿ ಸೇರಿಸಿದರು.

ರಿಯಲ್ ತಂಡಕ್ಕಾಗಿ ಸೈಯದ್ ಅಹಮದ್ (43ನೇ ಮತ್ತು 56ನೇ) ಮತ್ತು ಸೈವಿನ್ ಎರಿಕ್ಸನ್ ಇ. (83ನೇ) ಗೋಲು ತಂದಿತ್ತರು. 'ಸಿ' ಗುಂಪಿನ ಪಂದ್ಯದಲ್ಲಿ ಸೌತ್ ಯುನೈಟೆಡ್ ಎಫ್‌ಸಿ ತಂಡವು 2–1 ಗೋಲುಗಳಿಂದ ಪರಿಕ್ರಮ ಎಫ್‌ಸಿ ತಂಡವನ್ನು ಸೋಲಿಸಿತು.

ಸೌತ್ ತಂಡದ ಪರ ನಿಖಿಲ್ ರಾಜ್ ಮುರಗೇಶ್ ಕುಮಾರ್ (17ನೇ), ಬಿಬಿನ್ ಬಾಬು (25ನೇ) ಗೋಲು ದಾಖಲಿಸಿದರು. ರವೀಂದರ್ ಕುಮಾರ್ (45+1ನೇ) ಅವರು ಪರಿಕ್ರಮ ತಂಡದ ಪರ ಏಕೈಕ ಗೋಲು ಗಳಿಸಿದರು. ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷ ಆರ್. ಸಂಪತ್ ರಾಜ್ ಟೂರ್ನಿಗೆ ಚಾಲನೆ ನೀಡಿದರು.



ಹಂಗೇರಿಯ ಬುಡಾಪೆಸ್ಟ್‌ನಲ್ಲಿ ನಡೆದ 45ನೇ FIDE ಚೆಸ್ ಒಲಿಂಪಿಯಾಡ್ ಬುಡಾಪೆಸ್ಟ್ ಮಹಿಳಾ ವಿಭಾಗದ ಪ್ರಶಸ್ತಿ ಸಮಾರಂಭದಲ್ಲಿ ಚಿನ್ನದ ಪದಕ ವಿಜೇತ ತಂಡದ ಸದಸ್ಯರು ತಮ್ಮ ವಿಜಯವನ್ನು ಆಚರಿಸಿದರು.